


ಇಂದು ನೀವು ಏನು ಆಗುತ್ತೀರಿ ಎಂಬುದರ ಮೇಲೆ ನಿಮ್ಮ ನಾಳೆ ನಿಂತಿದೆ.
– ಮಹಾತ್ಮ ಗಾಂಧಿ

# ವಿಜಯ ಕಾಲ

ಪ್ರಧಾನ ಸಂಪಾದಕ: ಕೆ. ದೀಪಕ್ | ಓದುಗರ ಒಡಲಾಳ | ಬೆಳಗಿನ ಕನ್ನಡ ದಿನಪತ್ರಿಕೆ

ಮೈಸೂರು | ಚಾಮರಾಜನಗರ | ಮಂಡ್ಯ | ಬೆಂಗಳೂರು

RNI:KARKAN/2017/74098 | ಸಂಪುಟ: 08 ಸಂಚಿಕೆ: 06 ಶುಕ್ರವಾರ 07 ನವೆಂಬರ್ 2025 ದೂರವಾಣಿ – 9741511340 – 8123436767 vijayakaalamysuru@gmail.com ಪುಟ–6 ರೂ. 2



Bhavishya Academy


## ಸಾಲು ಸುದ್ದಿ

### ಕಲ್ಲಹಳ್ಳಿ: ಹುಲಿ ದಾಳಿಗೆ ಎರಡು ಕುರಿಗಳು ಬಲಿ

**ಗುಂಡ್ಲುಪೇಟೆ:** ತಾಲೂಕಿನಲ್ಲಿ ಹುಲಿ ಹಾವಳಿ ಹೆಚ್ಚಳವಾಗಿದ್ದು, ಕಲ್ಲಹಳ್ಳಿ ಗ್ರಾಮದಲಿ ಕುರಿಗಳ ಮೇಲೆ ದಾಳಿ ನಡೆಸಿ ಒಂದನ್ನು ಕೊಂದು ಮತ್ತೊಂದನ್ನು ಹೊತ್ತೊಯ್ದ ಘಟನೆ ಗುರುವಾರ ನಡೆದಿದೆ. ತಾಲೂಕಿನ ಕಲ್ಲಹಳ್ಳಿ ಗ್ರಾಮದ ಭಂಡಾರಿ ಮಹಾದೇವಪ್ಪ ಎಂಬುವವರ ಎರಡು ಕುರಿಗಳು ಬಲಿಯಾಗಿವೆ.

ಕಲ್ಲಹಳ್ಳಿ ಗ್ರಾಮದ ಬಳಿಯ ಕೆರೆ ಬಳಿ ಕುರಿಗಳನ್ನು ಮೇಯಿಸುವಾಗ ಹುಲಿ ದಾಳಿ ನಡೆಸಿ ಹುಲಿ ದಿಢೀರ್ ದಾಳಿ ನಡೆಸಿ ಒಂದನ್ನು ಕೊಂದು ಮತ್ತೊಂದನ್ನು ಹೊತ್ತೊಯ್ದಿದೆ. ಹುಲಿ ದಾಳಿಯಿಂದ ರೈತರು ಬೆಚ್ಚಿ ಬಿದ್ದಿದ್ದಾರೆ.



ಹುಲಿ ದಾಳಿ ಕುರಿತು ಅರಣ್ಯಾಧಿಕಾರಿಗಳಿಗೆ ರೈತರು ಮಾಹಿತಿ ನೀಡಿದ ಬಳಿಕ ಎಸಿಎಫ್ ಸುರೇಶ್ ನೇತೃತ್ವದ ತಂಡ ಸ್ಥಳಕ್ಕಾಗಮಿಸಿ ಡ್ರೋಣ್ ಮತ್ತು ಸಾಕಾನೆ ಮೂಲಕ ಕಾರ್ಯಾಚರಣೆ ಆರಂಭಿಸಿದ್ದಾರೆ.

**ಹಸು ಮೇಲೆ ಚಿರತೆ ದಾಳಿ:** ಪಟ್ಟಣದ ಹೊರವಲಯದ ತುಪ್ಪೂರು ರಸ್ತೆಯಲ್ಲಿ ಚಿರತೆ ದಾಳಿ ನಡೆಸಿ ಹಸುವನ್ನು ಗಾಯಗೊಳಿರುವ ಘಟನೆ ನಡೆದಿದೆ. ಮಾಲೀಕ ದೊಡ್ಡತುಪ್ಪೂರು ಗ್ರಾಮ ಶಿವಬಸಪ್ಪ ಹಸು ಮೇಯಿಸುತ್ತಿದ್ದ ವೇಳೆ ಚಿರತೆ ಏಕಾಏಕಿ ದಾಳಿ ನಡೆಸಿದೆ. ಘಟನೆಯಲ್ಲಿ ಹಸು ಕಾಲಿಗೆ ಗಾಯವಾಗಿದೆ.

### ಕಾಂಗ್ರೆಸ್ ಟೀಕಿಸುವ ಭರದಲ್ಲಿ ನಟ ಚೇತನ್ ವಿವಾದಾತ್ಮಕ ಪೋಸ್ಟ್

**ಬೆಂಗಳೂರು:** ಕಾಂಗ್ರೆಸ್ ಮತ್ತು ಕಾಂಗ್ರೆಸ್ ನಾಯಕರನ್ನು ಟೀಕಿಸುವ ಭರದಲ್ಲಿ ನಟ ಚೇತನ್ ಅಹಿಂಸಾ ಅವರು ಸಾಮಾಜಿಕ ಜಾಲತಾಣದಲ್ಲಿ ವಿವಾದಾತ್ಮಕ ಪೋಸ್ಟ್ ಹಂಚಿಕೊಂಡಿದ್ದಾರೆ. ಅವರ ಪೋಸ್ಟ್ ವಿರುದ್ಧ ನೆಟ್ಟಿಗರು



ಮತ್ತು ಹೋರಾಟಗಾರರು ವ್ಯಾಪಕ ಆಕ್ಷೇಪ ವ್ಯಕ್ತಪಡಿಸಿದ್ದು, ಕಿಡಿಕಾರಿದ್ದಾರೆ.

ಇತ್ತೀಚೆಗೆ, ವಿಧಾನ ಪರಿಷತ್ ಸದಸ್ಯ, ಕಾಂಗ್ರೆಸ್ ನಾಯಕ ಬಿ.ಕೆ ಹರಿಪ್ರಸಾದ್ ಅವರು ಆರ್‌ಎಸ್‌ಎಸ್ ಕುರಿತು ಮಾತನಾಡಿದ್ದರು. 'ಆರೆಸ್ಸೆಸ್ ಆರಾಧಿಸುವ ಸಾವರ್ಕರ್ ಮತ್ತು ಶ್ಯಾಮ್ ಪ್ರಸಾದ್ ಮುಖರ್ಜಿ ಅವರನ್ನು ಬ್ರಿಟಿಷ್ ಏಜೆಂಟ್‌ಗಳು' ಎಂದು ಕರೆದಿದ್ದರು.

ಈ ಹೇಳಿಕೆಯನ್ನು ಆಧರಿಸಿ ಕಾಂಗ್ರೆಸ್ ಅನ್ನು ಟೀಕಿಸಲು ಯತ್ನಿಸಿದ್ದ ಚೇತನ್, "ಸಾವರ್ಕರ್ ಮತ್ತು ಶ್ಯಾಮ ಪ್ರಸಾದ್ ಮುಖರ್ಜಿ ಬ್ರಿಟಿಷರ ಪರ ನಿಂತವರು ಎಂದು ಬಿ.ಕೆ ಹರಿಪ್ರಸಾದ್ ಹೇಳುತ್ತಾರೆ. ನೋಡಿ, ಕಾಂಗ್ರೆಸ್ ಯಾವ ರೀತಿಯಲ್ಲಿ ತಾನು ದೇಶಭಕ್ತಿಯ ಸಂಕೇತ ಎಂದು ತೋರಿಸಿಕೊಳ್ಳುತ್ತದೆ, ಆದರೆ ನಿಜವಾಗಿ ಅದು ಸದಾ ಸ್ವಾರ್ಥದ ಅಧಿಕಾರದಾಸೆಯ ಬೇರು ಆಗಿದೆ. ಅಂಬೇಡ್ಕರ್ ಮತ್ತು ಪೇರಿಯಾರ್‌ರನ್ನು ಕೂಡ ಆ ಇಬ್ಬರ ಜೊತೆ 'ಬ್ರಿಟಿಷ್ ಪರರು' ಎಂದು ಯಾಕೆ ಸೇರಿಸಬಾರದು? ಕಾಂಗ್ರೆಸ್ಸು ಸದಾ ಅಸಮಾನತೆಯ ಮತ್ತು ಅನ್ಯಾಯದ ವ್ಯವಸ್ಥೆಯನ್ನು ಉಳಿಸಿಕೊಂಡ ಪಕ್ಷ ಎಂದು ನಾವು ನೋಡಬೇಕು" ಎಂದು ಪೋಸ್ಟ್ ಹಂಚಿಕೊಂಡಿದ್ದಾರೆ. ಅಂಬೇಡ್ಕರರನ್ನು ಬ್ರಿಟಿಷ್ ಏಜೆಂಟ್ ಎಂಬಂತೆ ಬಿಂಬಿಸಿದ್ದಾರೆ.

ಛಿಜಣ ಚೇತನ್ ಅವರ ಈ ಪೋಸ್ಟ್‌ಅನ್ನು ಹಲ ಖಂಡಿಸಿದ್ದಾರೆ. ಸ್ವತಃ ಚೇತನ್ ಅವರ ಪತ್ನಿ ಮೇಘಾ ಕೂಡ ಖಂಡಿಸಿದ್ದಾರೆ. "ಇದೊಂದು ಅಜ್ಞಾನದ ಅವಮಾನಕರ ಪೋಸ್ಟ್" ಎಂದು ಕಿಡಿಕಾರಿದ್ದಾರೆ.

ನಟ ಚೇತನ್ ಅವರ ಪೋಸ್ಟ್‌ಗೆ ಪ್ರತಿಕ್ರಿಯಿಸಿರುವ ರವಿ ದೇವನಾಂಪ್ರಿಯ ಎಂಬವರು, "ಬಾಬಾಸಾಹೇಬರು ಬ್ರಿಟಿಷರ ಪರ ಎನ್ನುವುದು ಬೌದ್ಧಿಕ ದಿವಾಳಿತನ" ಎಂದಿದ್ದಾರೆ. ದೀಪಕ್ ಕುಮಾರ್ ಎಂಬವರು, "ಚೇತನ್ ಸಾರ್ ನಿಮಗೂ ಆ ತೇಜಸ್ವಿ ಸೂರ್ಯನಿಗೂ ವ್ಯತ್ಯಾಸವಿಲ್ಲ ಎಂದು ಹೇಳಿದ್ದಾರೆ.

# ಕಬ್ಬು ದರ ಕಗ್ಗಂಟು ಇಂದು ಸಿಎಂ ಸಭೆ

## ಪ್ರತಿಭಟನಾ ಸ್ಥಳಕ್ಕೆ ಸಕ್ಕರೆ ಸಚಿವರ ಭೇಟಿ ■ ರೈತರ ಆಕ್ರೋಶ, ಚಪ್ಪಲಿ ತೂರಾಟ

**ಬೆಂಗಳೂರು:** ಕಬ್ಬು ಬೆಳೆಗಾರರ ಪ್ರತಿಭಟನೆ ತಾರಕಕ್ಕೇರಿದ್ದು ಗುರುವಾರ ಹಲವು ಮಹತ್ವದ ಘಟನೆಗಳು ಜರುಗಿದವು. ಈ ಹಿನ್ನೆಲೆಯಲ್ಲಿ ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ತುರ್ತು ಸಚಿವ ಸಂಪುಟ ಸಭೆ ಕರೆದು ಸಮಸ್ಯೆಯ ಬಗ್ಗೆ ಚರ್ಚೆ ನಡೆಸಿದರು. ಬಹು ನಿರೀಕ್ಷಿತವಾಗಿದ್ದ ಸಂಪುಟ ಸಭೆಯಲ್ಲಿ ಕಬ್ಬು ಬೆಳೆಗಾರರ ಸಮಸ್ಯೆಗಳು, ಅವರ ಬೇಡಿಕೆಗಳ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಯಿತಾದರೂ ಯಾವುದೇ ಅಂತಿಮ ತೀರ್ಮಾನ ಕೈಗೊಳ್ಳಲಾಗಲಿಲ್ಲ.

ಈ ಹಿನ್ನೆಲೆಯಲ್ಲಿ ಶುಕ್ರವಾರ ಸಕ್ಕರೆ ಕಾರ್ಖಾನೆ ಮಾಲೀಕರು ಹಾಗೂ ರೈತ ಮುಖಂಡರೊಂದಿಗೆ ಸಭೆ ನಡೆಸಿ ಕಬ್ಬು ದರ ನಿಗದಿ ಸಂಬಂಧ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಫ್‌ಆರ್‌ಪಿ ದರ ನಿಗದಿ ಮಾಡುವುದು ಕೇಂದ್ರ ಸರ್ಕಾರ. ಆದರೆ ಆ ಕೆಲಸವನ್ನು ಕೇಂದ್ರ ಮಾಡುತ್ತಿಲ್ಲ. 2019ರಲ್ಲಿ ಸಕ್ಕರೆ ಬೆಲೆ 31 ರೂ. ನಿಗದಿಗೊಳಿಸಿದ ಕೇಂದ್ರ ಸರ್ಕಾರ ಈವರೆಗೆ ಈ ಬಗ್ಗೆ ಗಮನ ಹರಿಸಿಲ್ಲ. ಈ ಸಂಬಂಧ ಶುಕ್ರವಾರ ಪ್ರಧಾನ ಮಂತ್ರಿಯವರಿಗೆ ಪತ್ರ ಬರೆದು ಭೇಟಿಗೆ ಅವಕಾಶ ಕೋರಲಾಗುವುದು ಹಾಗೂ ಕಬ್ಬು ಬೆಳೆಗಾರರ ಸಮಸ್ಯೆಗಳ ಕುರಿತು ಚರ್ಚಿಸಲಾಗುವುದು ಎಂದರು.

ಶುಕ್ರವಾರ ವಿಧಾನಸೌಧ ಸಭಾಂಗಣದಲ್ಲಿ ಬೆಳಗ್ಗೆ 11 ಗಂಟೆಗೆ ಸಕ್ಕರೆ ಕಾರ್ಖಾನೆ ಮಾಲೀಕರ ಸಭೆ ನಡೆಸಲಿದ್ದು, ನಂತರ ಮಧ್ಯಾಹ್ನ 1 ಗಂಟೆಗೆ ರೈತ ಮುಖಂಡರ ಸಭೆ ನಡೆಸಲಾಗುವುದು. ಬೆಳಗಾವಿ, ವಿಜಯಪುರ, ಬಾಗಲಕೋಟೆ ಹಾಗೂ ಹಾವೇರಿ ಜಿಲ್ಲೆಗಳ ರೈತ ಮುಖಂಡರನ್ನು ಮಾತ್ರ ಸಭೆಗೆ ಆಹ್ವಾನಿಸಲಾಗಿದೆ. ಎಂದು ಸಿಎಂ ತಿಳಿಸಿದರು.

ಮಹಾರಾಷ್ಟ್ರಕ್ಕೆ ಹಾಗೂ ಕರ್ನಾಟಕಕ್ಕೆ ಇಳುವರಿ ಪ್ರಮಾಣದಲ್ಲಿ ವ್ಯತ್ಯಾಸ ಇದೆ. ಮಹಾರಾಷ್ಟ್ರದಲ್ಲಿ 40 ಕ್ಕೂ ಹೆಚ್ಚು ಸಕ್ಕರೆ ಕಾರ್ಖಾನೆಗಳು ಇದೆ. 2015 ರಿಂದ ಅಲ್ಲಿ, ಪ್ರತಿ ಟನ್ ಗೆ 3635 ರೂಪಾಯಿ ವರೆಗೆ ಪ್ರತಿ ಟನ್‌ಗೆ ನೀಡುತ್ತಾರೆ. ಕರ್ನಾಟಕದಲ್ಲಿ 41 ಲಕ್ಷ ಮೆಟ್ರಿಕ್ ಟನ್ ಸಕ್ಕರೆ ಉತ್ಪಾದನೆ ಆಗುತ್ತಿದೆ. 270 ಕೋಟಿ ಲೀಟರ್ ಎಥನಾಲ್ ಉತ್ಪಾದನೆ ಮಾಡುತ್ತೇವೆ. ಆದರೆ ಹಂಚಿಕೆ ಮಾಡಿರುವುದು 2024–25 ರಲ್ಲಿ 47 ಕೋಟಿ ಲೀಟರ್ ಅಷ್ಟೇ ಇದೆ. ಇದು ಕೇಂದ್ರ ಸರ್ಕಾರದ ರಾಜ್ಯದ ರೈತರ ಜೊತೆಗೆ ಆಡುತ್ತಿರುವ ಚೆಲ್ಲಾಟವಷ್ಟೆ. ರೈತರಿಗೆ ಸರಿಯಾದ ಮಾಹಿತಿ ನೀಡಿಲ್ಲ. ವಿರೋಧ ಪಕ್ಷಗಳು ತಪ್ಪು ಮಾಹಿತಿ ನೀಡುತ್ತಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

### ನಮ್ಮದು ರೈತಪರ ಸರ್ಕಾರ: ಸಿದ್ದರಾಮಯ್ಯ

ರೈತರ ಪ್ರತಿಭಟನೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ನಮ್ಮದು ರೈತರ ಪರವಾದ ಸರ್ಕಾರ. ಸತೀಶ್ ಜಾರಕಿಹೊಳಿ ಹಾಗೂ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಸಕ್ಕರೆ ಕಾರ್ಖಾನೆ ಮಾಲೀಕರಾಗಿದ್ದರಿಂದ ಅವರು ಪ್ರತಿಭಟನಾ ಸ್ಥಳಕ್ಕೆ ಹೋಗಿಲ್ಲ. ಬದಲಾಗಿ ಜಿಲ್ಲಾಧಿಕಾರಿ ಹಾಗೂ ಪೊಲೀಸ್ ವರಿಷ್ಠಾಧಿಕಾರಿ ಸ್ಥಳಕ್ಕೆ ಹೋಗಿ ರೈತರ ಜೊತೆಗೆ ಮಾತುಕತೆ ನಡೆಸಿದ್ದಾರೆ ಎಂದರು. ಎಫ್ ಆರ್ ಪಿ ನಿಗದಿ ಮಾಡುವುದು ಕೇಂದ್ರ ಸರ್ಕಾರ. ಕಳೆದ ಮೇ ತಿಂಗಳಲ್ಲಿ ಎಫ್‌ಆರ್‌ಪಿ ನಿಗದಿ ಮಾಡಲಾಗಿದೆ. 25–26 ನೇ ಸಾಲಿನಲ್ಲಿ 10.25 ಇಳುವರಿಗೆ 3550 ರೂನಂತೆ ಪ್ರತಿ ಟನ್‌ಗೆ ನಿಗದಿ ಮಾಡಲಾಗಿದೆ. ಇದರಲ್ಲಿ ಸಾರಿಗೆ, ಕಟಾವು ಒಳಗೊಂಡಿದೆ. ಇಳುವರಿ 10.25 ಕ್ಕಿಂತ ಜಾಸ್ತಿ ಇದ್ದರೆ 3.46 ರೂ. ನಿಗದಿ ಮಾಡಲಾಗಿದೆ ಎಂದರು.



ಬೆಳಗಾವಿಯಲ್ಲಿ ನಡೆಯುತ್ತಿರುವ ರೈತರ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ ಸಕ್ಕರೆ ಸಚಿವ ಶಿವಾನಂದ ಪಾಟೀಲ್ ರೈತರೊಂದಿಗೆ ಚರ್ಚಿಸಿದರು.

### ಸಕ್ಕರೆ ಸಚಿವರಿಗೆ ಪತ್ರ ಬರೆದ ಪ್ರಿಯಾಂಕ್ ಖರ್ಗೆ

**ಬೆಂಗಳೂರು:** ರಾಜ್ಯದ ಕಬ್ಬು ಬೆಳೆಗಾರರ ಸಮಸ್ಯೆಗೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕ್ ಖರ್ಗೆ ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಅವರಿಗೆ ಪತ್ರ ಬರೆದಿದ್ದು, ಕಬ್ಬು ಬೆಳೆಗಾರರ ಸಮಸ್ಯೆಗೆ ಸಂಬಂಧಿಸಿದಂತೆ ಮಹತ್ವದ ವಿಚಾರಗಳನ್ನು ಉಲ್ಲೇಖ ಮಾಡಿದ್ದಾರೆ.

ಕೇಂದ್ರ ಸರ್ಕಾರ ನಿಗದಿಪಡಿಸಿದ ನ್ಯಾಯಯುತ ಹಾಗೂ ಲಾಭದಾಯಕ ಬೆಲೆ ನಿಗದಿಯು ಅವೈಜ್ಞಾನಿಕವಾಗಿದ್ದು ಇದರಿಂದಾಗಿ ರೈತರು ಸಾಕಷ್ಟು ನಷ್ಟ ಅನುಭವಿಸುತ್ತಿದ್ದಾರೆ. ಆದ್ದರಿಂದ ಕಬ್ಬು ಕೃಷಿಗೆ ತಗಲುವ ವೆಚ್ಚವನ್ನು ವೈಜ್ಞಾನಿಕವಾಗಿ ಅವಲೋಕಿಸಿ ಸಕ್ಕರೆ ಇಳುವರಿ ಪ್ರಮಾಣ ಶೇ. 9.5ರ ಆಧಾರದ ಮೇಲೆ ನ್ಯಾಯಯುತ ಹಾಗೂ ಲಾಭದಾಯಕ ಬೆಲೆ ಘೋಷಿಸಲು ಭಾರತ ಸರ್ಕಾರಕ್ಕೆ ಶಿಫಾರಸ್ಸು ಮಾಡುವಂತೆ ಪ್ರಿಯಾಂಕ್ ಖರ್ಗೆ ಒತ್ತಾಯಿಸಿದ್ದಾರೆ.

### ಕಬ್ಬು ಕಿಚ್ಚಿಗೆ ಸತೀಶ್ ಜಾರಕಿಹೊಳಿ ಪ್ರತಿಕ್ರಿಯೆ

**ಬೆಂಗಳೂರು:** ಕಬ್ಬು ಬೆಳೆಗಾರರ ಪ್ರತಿಭಟನೆ ಕಿಚ್ಚಿನ ವಿಚಾರವಾಗಿ ಪ್ರತಿಕ್ರಿಯಿಸಿರುವ ಬೆಳಗಾವಿ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ರಾಜ್ಯದ ರೈತರಿಗೂ ಅನುಕೂಲ ಆಗಬೇಕು ಮಾತ್ರವಲ್ಲದೆ, ಸಕ್ಕರೆ ಕಾರ್ಖಾನೆಗಳೂ ಉಳಿಯಬೇಕು ಎಂದು ಹೇಳಿದರು.

ಬೆಂಗಳೂರಿನಲ್ಲಿ ಗುರುವಾರ ಮಾತನಾಡಿದ ಅವರು, ಬಾಗಲಕೋಟೆ ಹಾಗೂ ನಮ್ಮ ಜಿಲ್ಲೆಯಲ್ಲೇ ಅತಿ ಹೆಚ್ಚು ಸಕ್ಕರೆ ಕಾರ್ಖಾನೆಗಳಿವೆ. ಕಾನೂನು ಸಚಿವರು ಈಗಾಗಲೇ ಹೋಗಿ ರೈತರ ಜೊತೆಗೆ ಮಾತನಾಡಿದ್ದಾರೆ. ಅವರಿಗೆ ಅಲ್ಲಿನ ರೈತರು ಬೇಡಿಕೆಗಳನ್ನು ಸಲ್ಲಿಸಿದ್ದಾರೆ. ಯಾವ ರೀತಿ ಬೇಡಿಕೆ ಈಡೇರಿಸಬಹುದು ಅಂತ ಚರ್ಚೆ ಮಾಡುತ್ತೇವೆ ಎಂದರು. ಸಕ್ಕರೆ ಬೆಲೆ ಹೆಚ್ಚು ಮಾಡೋದು ಕೇಂದ್ರ ಸರ್ಕಾರದವರು. ಹೆಚ್ಚು ಕಡಿಮೆ ಮಾಡೋದು ಕೇಂದ್ರ ಸರ್ಕಾರವೇ. ನಾವು 3200 ರೂಪಾಯಿಗೆ ಒಪ್ಪಿಸಿದ್ದೆವು. ಕಾರ್ಖಾನೆ ಮಾಲೀಕರು ಎಲ್ಲರೂ ಒಪ್ಪಿಕೊಂಡಿದ್ದರು. ಆದರೆ ಈಗ ಸಂಘಟನೆಗಳು ಒಪ್ಪುತ್ತಿಲ್ಲ ಎಂದರು.

### ಸಚಿವರ ಕಾರಿಗೆ ಚಪ್ಪಲಿ ತೂರಿದ ರೈತರು

**ಬೆಳಗಾವಿ:** ಕಬ್ಬಿಗೆ ಸೂಕ್ತ ದರ ನಿಗದಿ ಮಾಡುವಂತೆ ರೈತರು ನಡೆಸುತ್ತಿರುವ ಪ್ರತಿಭಟನಾ ಸ್ಥಳಕ್ಕೆ ಗುರುವಾರ ಭೇಟಿ ನೀಡಿದ ಸಕ್ಕರೆ ಸಚಿವ ಶಿವಾನಂದ್ ಪಾಟೀಲ್ ವಿರುದ್ಧ ರೈತರು ತೀವ್ರ ಆಕ್ರೋಶ ವ್ಯಕ್ತಪಡಿಸಿದರಲ್ಲದೆ ಅವರ ಕಾರಿಗೆ ಚಪ್ಪಲಿ ತೂರಿದ ಘಟನೆ ನಡೆಯಿತು.

ಸಚಿವರು ಪ್ರತಿಭಟನಾ ಸ್ಥಳಕ್ಕೆ ಆಗಮಿಸುತ್ತಿದ್ದಂತೆಯೆ ರೈತರು ಧಿಕ್ಕಾರದ ಘೋಷಣೆಗಳನ್ನು ಕೂಗಿದರು. ವಾರದ ನಂತರ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ್ದಕ್ಕೆ ರೈತರಲ್ಲಿ ಕ್ಷಮೆ ಯಾಚಿಸಿದ ಸಚಿವರು ಮಾತು ಆರಂಭಿಸುತ್ತಿದ್ದಂತೆಯೇ ರೈತರು ಗದ್ದಲವೆಬ್ಬಿಸಿ ಭಾಷಣಕ್ಕೆ ಅಡ್ಡಿಪಡಿಸಿದರು.

ಕೇಂದ್ರ ಸರ್ಕಾರ ಮಾಡಿದ ತಪ್ಪಿಗೆ ತಾವು ಕ್ಷಮೆ ಯಾಚಿಸುವುದಾಗಿ ತಿಳಿಸಿದ ಸಚಿವರು ಇದೂ ನಮಗೂ ಶೋಭೆಯಲ್ಲ, ಕೇಂದ್ರ ಸರ್ಕಾರಕ್ಕೂ ಶೋಭೆಯಲ್ಲ. ಎರಡು ದಿನ ಅವಕಾಶ ನೀಡಿದಲ್ಲಿ ಕಬ್ಬು ಬೆಳೆಗಾರರ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದರು. ಮತ್ತೆ ಮತ್ತೆ ಗದ್ದಲ ಎಬ್ಬಿಸಿದ ರೈತರ ಮನವೊಲಿಸಲು ಸಚಿವರು ಹರಸಾಹಸ ಮಾಡಬೇಕಾಯಿತು.

ನೀವು ಕರೆಕೊಟ್ಟಿರುವ ರಾಷ್ಟ್ರೀಯ ಹೆದ್ದಾರಿ ಪ್ರತಿಭಟನೆಯನ್ನು ಕೇವಲ ಒಂದು ದಿನದ ಸಲುವಾಗಿ ಅದನ್ನು ಮುಂದೂಡಿ ಎಂದು ಮನವಿ ಮಾಡಿದರು.

ಸಂಧಾನಕ್ಕೆ ಆಗಮಿಸುವ ವೇಳೆ ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಪಾಟೀಲ್ ಅವರ ಕಾರಿಗೆ ನೀರಿನ ಬಾಟಲ್ ಮತ್ತು ಚಪ್ಪಲಿಯನ್ನು ಎಸೆಯಲಾಯಿತು. ಸಚಿವರು ಘಟನೆ ಬಗ್ಗೆ ಕೆರಳದೆ ಸಮಾಧಾನವಾಗಿ ರೈತರೊಂದಿಗೆ ಬೆರೆತು ಮಾತನಾಡಿದರು.

## ರಾಜ್ಯಕ್ಕೆ ಹೊಸ ವಂದೇ ಭಾರತ್

**ಬೆಂಗಳೂರು:** ರೈಲ್ವೆ ಪ್ರಯಾಣಿಕರಿಗೆ ಕೇಂದ್ರ ಸರ್ಕಾರ ಸಿಹಿ ಸುದ್ದಿ ನೀಡಿದ್ದು, 4 ಹೊಸ ವಂದೇ ಭಾರತ್ ರೈಲುಗಳಿಗೆ ಪ್ರಧಾನಿ ಮೋದಿ ನವೆಂಬರ್ 8 ಕ್ಕೆ ಚಾಲನೆ ನೀಡಲಿದ್ದಾರೆ. ಈ ಪೈಕಿ ಒಂದು ಕರ್ನಾಟಕಕ್ಕೆ ಸಂಬಂಧಿಸಿದ್ದು, ಬೆಂಗಳೂರು – ಎರ್ನಾಕುಲಂ ನಡುವೆ ಸಂಚಾರ ನಡೆಸಲಿದೆ.

ಪ್ರಧಾನಿ ಮೋದಿ ನವೆಂಬರ್ 8 ರಂದು 4 ಹೊಸ ವಂದೇ ಭಾರತ್ ರೈಲುಗಳಿಗೆ ಚಾಲನೆ ನೀಡಲಿದ್ದಾರೆ, ಇದರಲ್ಲಿ ಬೆಂಗಳೂರು–ಎರ್ನಾಕುಲಂ ಮಾರ್ಗವೂ ಸೇರಿದೆ. ಈ ಹೊಸ ಸೇವೆಗಳು ಪ್ರಯಾಣದ ಸಮಯವನ್ನು ಗಣನೀಯವಾಗಿ ಕಡಿಮೆ ಮಾಡುವುದಲ್ಲದೆ, ಪ್ರಾದೇಶಿಕ ಸಂಚಾರ, ಪ್ರವಾಸೋದ್ಯಮ ಮತ್ತು ಆರ್ಥಿಕ ಚಟುವಟಿಕೆಗಳನ್ನು ಉತ್ತೇಜಿಸಲಿವೆ.

ದೇಶದಾದ್ಯಂತ ವಂದೇ ಭಾರತ್ ರೈಲಿಗೆ ಬೇಡಿಕೆ ಹೆಚ್ಚಿದೆ. ಚೆನ್ನೈನ ಇಂಟಿಗ್ರಲ್ ಕೋಚ್ ಫ್ಯಾಕ್ಟರಿ ಅಭಿವೃದ್ಧಿಪಡಿಸಿದ ಹೈ ಸ್ಪೀಡ್ ರೈಲುಗಳು ಇವಾಗಿದ್ದು, ಶನಿವಾರ ಬೆಳಿಗ್ಗೆ 8:15 ರ ಸುಮಾರಿಗೆ ವಾರಣಾಸಿಯಲ್ಲಿ ನಾಲ್ಕು ಹೊಸ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಹಸಿರು ನಿಶಾನೆ ತೋರಲಿದ್ದಾರೆ. ಈ ಮೂಲಕ ಒಟ್ಟು ವಂದೇ ಭಾರತ್ ರೈಲು ಸೇವೆಗಳ ಸಂಖ್ಯೆ 164ಕ್ಕೆ ಏರಲಿದೆ.

**4 ಹೊಸ ಮಾರ್ಗ ಎಲ್ಲೆಲ್ಲಿ?:** ಬನಾರಸ್ – ಖಜುರಾಹೋ ಲಕ್ನೋ –ಸಹಾರನ್‌ಪುರ, ಫಿರೋಜ್‌ಪುರ – ದೆಹಲಿ ಬೆಂಗಳೂರು – ಎರ್ನಾಕುಲಂ.

ಈ ರೈಲುಗಳು ಪ್ರಯಾಣದ ಸಮಯವನ್ನು ಗಣನೀಯವಾಗಿ ಕಡಿಮೆ ಮಾಡಲಿವೆ.

## ಕ್ರಾಂತಿ ಈಗಲ್ಲ, ಏನಿದ್ದರೂ 2028 ಕ್ಕೆ!

**ನವದೆಹಲಿ:** "ನವೆಂಬರ್ ಕ್ರಾಂತಿನೂ ಇಲ್ಲ, ಡಿಸೆಂಬರ್ ಕ್ರಾಂತಿನೂ ಇಲ್ಲ, ಜನವರಿ, ಫೆಬ್ರವರಿಗೂ ಆಗುವುದಿಲ್ಲ. ಕ್ರಾಂತಿ ಆಗುವುದು ಏನಿದ್ದರೂ 2028 ರಲ್ಲಿ, ಅದು ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರುವ ಮೂಲಕ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದ್ದಾರೆ.

ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ಗುರುವಾರ ಪ್ರತಿಕ್ರಿಯೆ ನೀಡಿದರು. ನವೆಂಬರ್ ಕ್ರಾಂತಿ ಹಾಗೂ ಈ ತಿಂಗಳು 22 ಹಾಗೂ 26 ರ ದಿನಾಂಕದ ಬಗ್ಗೆ ಚರ್ಚೆಯಾಗುತ್ತಿದೆ ಎಂದು ಕೇಳಿದಾಗ, "ಯಾರೋ ಸುಮ್ಮನೆ ಬರೆದಿದ್ದಾರೆ. ಪಕ್ಷ ನಮಗೆ ಬಿಹಾರ ಚುನಾವಣೆ ಸೇರಿದಂತೆ ಅನೇಕ ಜವಾಬ್ದಾರಿಗಳನ್ನು ನೀಡಿದ್ದು, ನಾವು ಅದನ್ನು ಮಾಡುತ್ತಿದ್ದೇವೆ. ಇದರ ಹೊರತಾಗಿ ಬೇರೆ ಯಾವುದೇ ಕ್ರಾಂತಿ ಆಗುವುದಿಲ್ಲ" ಎಂದು ತಿಳಿಸಿದರು.

ಯಾವುದೇ ನಾಯಕರನ್ನು ಭೇಟಿ ಮಾಡುವ ಕಾರ್ಯಕ್ರಮವಿಲ್ಲ: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡುತ್ತೀರಾ ಎಂದು ಕೇಳಿದಾಗ, "ನಾನು ಯಾರನ್ನೂ ಭೇಟಿ ಮಾಡುವುದಿಲ್ಲ. ನನ್ನ ಬಳಿ ಯಾರೂ ಸಚಿವ ಸಂಪುಟ ವಿಸ್ತರಣೆ ಬಗ್ಗೆ ಚರ್ಚೆ ಮಾಡಿಲ್ಲ ಎಂದರು.

ನನಗೆ ಯಾವುದೇ ನಾಯಕರನ್ನು ಭೇಟಿ ಮಾಡುವ ಕಾರ್ಯಕ್ರಮ ಇಲ್ಲ. ಪಕ್ಷ ಸಂಘಟನೆ ವಿಚಾರವಾಗಿ ಚರ್ಚೆ ಮಾಡಲಾಗುವುದು. ಮತಗಳ್ಳತನ ವಿಚಾರವಾಗಿ ನಿನ್ನೆ ರಾತ್ರಿಯೂ ಸಭೆ ಮಾಡಿದ್ದೇವೆ, ಇಂದು ಸಭೆ ಮಾಡಿದ್ದೇವೆ.



ನಾಯಕತ್ವ ಬದಲಾವಣೆ ಬಗ್ಗೆ ನಾನು ಏನಾದರೂ ಹೇಳಿದ್ದೇನಾ? ಸಿಎಂ ಏನಾದರೂ ಹೇಳಿದ್ದಾರಾ? ಪಕ್ಷ ಏನು ಹೇಳುತ್ತದೆಯೋ ಅದನ್ನು ಕೇಳಿಕೊಂಡು ಹೋಗುತ್ತೇವೆ ಎಂದು ಹೇಳಿದ್ದೇವೆ ಎಂದು ತಿಳಿಸಿದರು.

**ಪಕ್ಷದ ರೇಖೆ ಬಿಟ್ಟು ನಾನು ಎಂದಿಗೂ ಹೋಗುವುದಿಲ್ಲ**

ಸಿಎಂ ಐದು ವರ್ಷ ಇರಬೇಕು ಎಂದರೆ ಐದು ವರ್ಷ ಇರುತ್ತಾರೆ. ಹತ್ತು ವರ್ಷ ಇರಬೇಕು ಎಂದರೆ ಹತ್ತು ವರ್ಷ ಇರುತ್ತಾರೆ. 15 ವರ್ಷ ಇರಬೇಕು ಎಂದರೆ 15 ವರ್ಷ ಇರುತ್ತಾರೆ. ನಮಗೆ ಕೊಟ್ಟ ಕೆಲಸ ಮಾಡಿಕೊಂಡು ಹೋಗುತ್ತಿರಬೇಕು. ನಾನು ಪಕ್ಷದ ಶಿಸ್ತಿನ ಸಿಪಾಯಿ. ಪಕ್ಷದ ರೇಖೆ ಬಿಟ್ಟು ನಾನು ಎಂದಿಗೂ ಹೋಗುವುದಿಲ್ಲ" ಎಂದು ತಿಳಿಸಿದರು.

ಸಂಪುಟ ವಿಸ್ತರಣೆ ಆಕಾಂಕ್ಷೆಯಲ್ಲಿರುವವರಿಗೆ ಏನು ಹೇಳುತ್ತೀರಾ ಎಂದು ಕೇಳಿದಾಗ, "ಅದೆಲ್ಲವನ್ನು ದೆಹಲಿ ನಾಯಕರು ಯಾವಾಗ, ಯಾವ ರೀತಿ ಮಾಡಬೇಕೋ ಮಾಡುತ್ತಾರೆ" ಎಂದರು.

## ಆಸ್ಟ್ರೇಲಿಯಾ ವಿರುದ್ಧ ಭಾರತಕ್ಕೆ ಭರ್ಜರಿ ಜಯ

**ಕ್ವೀನ್ಸ್‌ಲ್ಯಾಂಡ್:** 4ನೇ ಟಿ20 ಪಂದ್ಯದಲ್ಲಿ ಭಾರತ ತಂಡ ಆಸ್ಟ್ರೇಲಿಯಾ ವಿರುದ್ಧ 48 ರನ್ ಗಳ ಭರ್ಜರಿ ಜಯ ದಾಖಲಿಸಿದೆ.

ಆಸ್ಟ್ರೇಲಿಯಾದ ಕ್ವೀನ್ಸ್ ಲ್ಯಾಂಡ್ ನ ಕರಾರ ಓವಲ್ ಕ್ರೀಡಾಂಗಣದಲ್ಲಿ ನಡೆದ 4ನೇ ಟಿ20 ಪಂದ್ಯದಲ್ಲಿ ಭಾರತ ನೀಡಿದ್ದ 168 ರನ್ ಗಳ ಬೆನ್ನು ಹತ್ತಿದ ಆಸ್ಟ್ರೇಲಿಯಾ 119 ರನ್ ಗಳಿಸಲಷ್ಟೇ ಶಕ್ತವಾಯಿತು. ಆ ಮೂಲಕ 48 ರನ್ ಗಳ ಅಂತರದಲ್ಲಿ ಭಾರತದ ಎದುರು ಮಂಡಿಯೂರಿತು.

ಭಾರತದ ಪರ ವಾಷಿಂಗ್ಟನ್ ಸುಂದರ್ 3 ವಿಕೆಟ್ ಪಡೆದರೆ, ಶಿವಂ ದುಬೆ ಮತ್ತು ಅಕ್ಸರ್ ಪಟೇಲ್ ತಲಾ 2 ವಿಕೆಟ್ ಪಡೆದರೆ, ಅರ್ಶ್ ದೀಪ್ ಸಿಂಗ್, ಜಸ್ ಪ್ರೀತ್ ಬುಮ್ರಾ ಮತ್ತು ವರುಣ್ ಚಕ್ರವರ್ತಿ ತಲಾ ವಿಕೆಟ್ ಪಡೆದರು.

**ಉತ್ತಮ ಆರಂಭ ಪಡೆದ ಆಸ್ಟ್ರೇಲಿಯಾ**

ಇನ್ನು ಭಾರತ ನೀಡಿದ್ದ 168 ರನ್ ಗಳ ಸವಾಲಿನ ಗುರಿ ಬೆನ್ನು ಹತ್ತಿದ ಆಸ್ಟ್ರೇಲಿಯಾ ಉತ್ತಮ ಆರಂಭ ಪಡೆದಿತ್ತು. ಮೊದಲ ವಿಕೆಟ್ ಗೆ ನಾಯಕ ಮಿಚೆಲ್ ಮಾರ್ಶ್ ಮತ್ತು ಮ್ಯಾಥ್ಯೂ ಶಾರ್ಟ್ ಜೋಡಿ 37 ರನ್ ಕಲೆಹಾಕಿತ್ತು. ಮಾರ್ಶ್ (30) ಮತ್ತು ಶಾರ್ಟ್ (25) ಔಟಾದ ಬಳಿಕ ಆಸಿಸ್ ಬ್ಯಾಟಿಂಗ್ ಮಂಕಾಯಿತು. ಜಾಶ್ ಇಂಗ್ಲಿಶ್ 12 ರನ್ ಗಳಿಸಿ ಔಟಾದರೆ, ಟಿಮ್ ಡೇವಿಡ್ 14, ಜಾಶ್ ಫಿಲಿಪ್ 10, ಮಾರ್ಕಸ್ ಸ್ಟಾಯ್ನಿಸ್ 17 ರನ್ ಮಾತ್ರ ಗಳಿಸಿದರು.

ಗ್ಲೇನ್ ಮ್ಯಾಕ್ಸ್ ವೆಲ್ (2), ಡ್ವಾರ್ಶ್ಯೂಯಿಸ್ (5), ಬಾರ್ಟ್ಲೆಟ್ (0), ಜಂಪಾ (0) ಬ್ಯಾಟಿಂಗ್ ವೈಫಲ್ಯ ತಂಡಕ್ಕೆ ಮುಳುವಾಯಿತು.

## ಕಲ್ಮಾಗಿ ಚಂಡಮಾರುತ ಅಬ್ಬರ: 144 ಮಂದಿ ಸಾವು

**ಮನಿಲಾ:** ಫಿಲಿಪೈನ್ಸ್ ದೇಶದಲ್ಲಿ 'ಕಲ್ಮಾಗಿ' ಎಂಬ ಭೀಕರ ಚಂಡಮಾರುತ ಅಪ್ಪಳಿಸಿ ಕನಿಷ್ಠ 114 ಮಂದಿಯ ಪ್ರಾಣ ಬಲಿ ಪಡೆದಿದೆ. ಈ ದುರಂತದಲ್ಲಿ ನೂರಾರು ಮಂದಿ ನಾಪತ್ತೆಯಾಗಿದ್ದಾರೆ. ದೇಶದ ಕೇಂದ್ರ ಭಾಗದಲ್ಲಿ ಈ ಚಂಡಮಾರುತ ತೀವ್ರ ಹಾನಿ ಮಾಡಿದೆ. ಈ ಹಿನ್ನೆಲೆಯಲ್ಲಿ, ಫಿಲಿಪೈನ್ಸ್ ಅಧ್ಯಕ್ಷ ಫರ್ಡಿನಾಂಡ್ ಮಾರ್ಕೋಸ್ ಜೂನಿಯರ್ ಅವರು ದೇಶಾದ್ಯಂತ ತುರ್ತು ಪರಿಸ್ಥಿತಿ ಘೋಷಿಸಿದ್ದಾರೆ.

**ತುರ್ತು ಪರಿಸ್ಥಿತಿ:** ಈ ಚಂಡಮಾರುತ ಈ ವರ್ಷ ದೇಶವನ್ನು ಅಪ್ಪಳಿಸಿದ ಅತ್ಯಂತ ಮಾರಕ ನೈಸರ್ಗಿಕ ವಿಕೋಪವಾಗಿದ್ದು, ಪ್ರವಾಹದಿಂದಾಗಿ 114 ಜನ ಸಾವನ್ನಪ್ಪಿದ್ದಾರೆ ಮತ್ತು 127 ಮಂದಿ ಇನ್ನೂ ನಾಪತ್ತೆಯಾಗಿದ್ದಾರೆ, ಅವರಲ್ಲಿ ಹಲವರು ಹೆಚ್ಚು ಹಾನಿಗೊಳಗಾದ ಸೆಬು ಪ್ರಾಂತ್ಯದಲ್ಲಿದ್ದಾರೆ. ಇನ್ನು ಈ ಬೆನ್ನಲ್ಲೇ ದೇಶಾದಾದ್ಯಂತ ತುರ್ತು ಪರಿಸ್ಥಿತಿ ಘೋಷಣೆಯಾಗಿದೆ.

ಈ ಕುರಿತು ಮಾಹಿತಿ ನೀಡಿರುವ ಫಿಲಿಫೈನ್ಸ್ ನ

### ಫಿಲಿಪೈನ್ಸ್ ದೇಶದಲ್ಲಿ ದುರಂತ ತುರ್ತು ಪರಿಸ್ಥಿತಿ ಘೋಷಣೆ



ನಾಗರಿಕ ರಕ್ಷಣಾ ಕಚೇರಿ "ಕಲ್ಮಾಗಿ ಚಂಡಮಾರುತವು ಸೆಬು ಪ್ರಾಂತ್ಯದಲ್ಲಿ ಆಕಸ್ಮಿಕ ಪ್ರವಾಹವನ್ನು ಉಂಟುಮಾಡಿತು. ನದಿಗಳು ಮತ್ತು ಇತರ ಜಲಮಾರ್ಗಗಳು ಉಕ್ಕಿ ಹರಿದವು. ಇದರಿಂದಾಗಿ ವಸತಿ ಪ್ರದೇಶಗಳು ಜಲಾವೃತಗೊಂಡವು. ನಿವಾಸಿಗಳು ತಮ್ಮ ಛಾವಣಿಗಳ ಮೇಲೆ ಏರಿ, ಪ್ರವಾಹದ ನೀರಿನಿಂದ ಪಾರಾಗಲು ಸಹಾಯಕ್ಕಾಗಿ ಮೊರೆ ಇಡಬೇಕಾದ ಪರಿಸ್ಥಿತಿ ಎದುರಾಗಿದೆ. ಇನ್ನು, ಚಂಡಮಾರುತದ ಅಬ್ಬರದಿಂದ ಸುಮಾರು 20 ಲಕ್ಷ ಜನರು ತೊಂದರೆಗೀಡಾಗಿದ್ದಾರೆ. 5.60 ಲಕ್ಷಕ್ಕೂ ಹೆಚ್ಚು ಗ್ರಾಮಸ್ಥರು ನಿರಾಶ್ರಿತರಾಗಿದ್ದಾರೆ. ಇವರಲ್ಲಿ ಸುಮಾರು 4.50 ಲಕ್ಷ ಜನರನ್ನು ತುರ್ತು ಆಶ್ರಯ ಕೇಂದ್ರಗಳಿಗೆ ಸ್ಥಳಾಂತರಿಸಲಾಗಿದೆ" ಎಂದು ತಿಳಿಸಿದೆ.

ಸೆಬು ಪ್ರಾಂತ್ಯದಲ್ಲಿಯೇ ಕನಿಷ್ಠ 71 ಜನರು ಮೃತಪಟ್ಟಿದ್ದಾರೆ. 65 ಮಂದಿ ನಾಪತ್ತೆಯಾಗಿದ್ದಾರೆ ಮತ್ತು 69 ಮಂದಿ ಗಾಯಗೊಂಡಿದ್ದಾರೆ. ಅಲ್ಲದೆ, ಸೆಬು ಸಮೀಪವಿರುವ ನೆಗ್ರೋಸ್ ಆಕ್ಸಿಡೆಂಟಲ್ ಪ್ರಾಂತ್ಯದಲ್ಲಿ 62 ಮಂದಿ ನಾಪತ್ತೆಯಾಗಿದ್ದಾರೆ ಎಂದು ನಾಗರಿಕ ರಕ್ಷಣಾ ಕಚೇರಿ ಹೇಳಿದೆ.

ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿರುವ ಸೆಬು ಗವರ್ನರ್ ಪಮೆಲಾ ಬಾರಿಕುಯಾಟ್ರೊ "ಸೆಬು ಪ್ರಾಂತ್ಯದಲ್ಲಿ ವರ್ಷಗಟ್ಟಲೆ ನಡೆದ ಕಲ್ಲು ಗಣಿಗಾರಿಕೆ ಚಟುವಟಿಕೆಗಳಿಂದಾಗಿ ನದಿಗಳು ಮುಚ್ಚಿಹೋಗಿ, ಪ್ರವಾಹ ಉಂಟಾಗಲು ಕಾರಣವಾಗಿದೆ.

## ಬೆಟ್ಟಿಂಗ್ ದಂಧೆಯಲ್ಲಿ ಸುರೇಶ್ ರೈನಾ, ಶಿಖರ್ ಧವನ್

**ನವದೆಹಲಿ:** ಯಾರೂ ಊಹಿಸಿದ ರೀತಿಯಲ್ಲಿ ಭಾರತದ ಇಬ್ಬರು ಮಾಜಿ ಕ್ರಿಕೆಟಿಗರಾದ ಸುರೇಶ್ ರೈನಾ ಮತ್ತು ಶಿಖರ್ ಧವನ್ ಅವರು ಬೆಟ್ಟಿಂಗ್ ದಂಧೆ ಪ್ರಕರಣದಲ್ಲಿ ಸಿಲುಕಿಕೊಂಡಿದ್ದಾರೆ. ಬೆಟ್ಟಿಂಗ್ ಪ್ಲಾಟ್‌ಫಾರ್ಮ್‌ಗಳ ಪ್ರಚಾರಕ್ಕಾಗಿ ವಿದೇಶಿ ಕಂಪನಿಗಳಿಂದ ಪಡೆದ ಹಣವನ್ನು ಅನುಮಾನ ಬಾರದ ರೀತಿಯಲ್ಲಿ ವಿವಿಧೆಡೆ ಹೂಡಿಕೆ ಮಾಡಿರುವ ಆರೋಪವನ್ನು ಎದುರಿಸುತ್ತಿದ್ದಾರೆ. ಇದು ಕಾನೂನುಬಾಹಿರ ಎಂದು ತಿಳಿದೂ ಮಾಜಿ ಕ್ರಿಕೆಟಿಗರು ಈ ದಂಧೆಯ ಜೊತೆ ಕೈಜೋಡಿಸಿದ್ದರು ಎಂದು ಇಡಿ ತಿಳಿಸಿದೆ.

ಮಾಜಿ ಕ್ರಿಕೆಟಿಗರಾದ ಸುರೇಶ್ ರೈನಾ ಮತ್ತು ಶಿಖರ್ ಧವನ್ ಅವರು ಇದೀಗ ಗುರುತರ ಪ್ರಕರಣವೊಂದರಲ್ಲಿ ಸಿಲುಕಿದ್ದಾರೆ. ಅಕ್ರಮ ಹಣ ವರ್ಗಾವಣೆ ದಂಧೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯವು ಇವರಿಬ್ಬರಿಂದ ಒಟ್ಟು 11.14 ಕೋಟಿ ರೂಪಾಯಿ ಮೌಲ್ಯದ

### ಇಡಿಯಿಂದ 11 ಕೋಟಿ ಮೌಲ್ಯದ ಆಸ್ತಿ ವಶ!



ಆಸ್ತಿಗಳನ್ನು ಜಪ್ತಿ ಮಾಡಿದೆ. ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ 2002ರ ಅಡಿಯಲ್ಲಿ ಈ ಕ್ರಮ ಜರುಗಿದೆ. ಸುರೇಶ್ ರೈನಾ ಅವರ ಹೆಸರಿನಲ್ಲಿರುವ 6.64 ಕೋಟಿ ರೂಪಾಯಿ ಮೌಲ್ಯದ ಮ್ಯೂಚುವಲ್ ಫಂಡ್ ಹೂಡಿಕೆಗಳು ಮತ್ತು ಧವನ್ ಅವರ ಹೆಸರಿನಲ್ಲಿರುವ 4.5 ಕೋಟಿ ರೂಪಾಯಿ ಮೌಲ್ಯದ ಸ್ಥಿರಾಸ್ತಿಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಇಡಿ ತಿಳಿಸಿದೆ. ಬೆಟ್ಟಿಂಗ್ ಪ್ಲಾಟ್‌ಫಾರ್ಮ್‌ಗಳ ಪ್ರಚಾರಕ್ಕಾಗಿ ವಿದೇಶಿ ಕಂಪನಿಗಳೊಂದಿಗೆ ಒಪ್ಪಂದ ಮಾಡಿಕೊಂಡಿದ್ದಕ್ಕಾಗಿ ಇವರಿಬ್ಬರ ಈ ಕ್ರಮ ಕೈಗೊಳ್ಳಲಾಗಿದೆ. 'ಒನ್ ಬೆಟ್' ಭಾರತದಲ್ಲಿ ಅಧಿಕೃತವಾಗಿಲ್ಲ ಎಂದು ಈ ಕ್ರಿಕೆಟಿಗರಿಗೆ ತಿಳಿದಿದ್ದರೂ ಒಪ್ಪಂದ ಮಾಡಿಕೊಂಡಿರುವುದು ಕಾನೂನು ಬಾಹಿರ ಎಂದು ಇಡಿ ತಿಳಿಸಿದೆ. ಪ್ರಕರಣಕ್ಕೆ ಸಂಬಂಧಿಸಿ ಕ್ರಿಕೆಟಿಗರಾದ ಯುವರಾಜ್ ಸಿಂಗ್, ರಾಬಿನ್ ಉತ್ತಪ್ಪ, ನಟರಾದ ಸೋನು ಸೂದ್, ಊರ್ವಶಿ ರೌಟೇಲಾ, ಮಾಜಿ ಟಿಎಂಸಿ ಸಂಸದೆ ಮಿಮಿ ಚಕ್ರವರ್ತಿ ಮತ್ತು ಬೆಂಗಾಲಿ ನಟ ಅಂಕುಶ್ ಹಜ್ರಾ ಅವರನ್ನೂ ಇಡಿ ಪ್ರಶ್ನಿಸಿದೆ.

**ಹಲವು ಹಂತಗಳಲ್ಲಿ ಹಣ ವರ್ಗಾವಣೆ:** ಪ್ರಚಾರಕ್ಕಾಗಿ ವಿದೇಶಿ ಕಂಪನಿಗಳ ಮೂಲಕ ದೊರಕಿದ ಹಣವನ್ನು ಮರೆಮಾಚಲು ಹಲವು ಹಂತಗಳಲ್ಲಿ ವರ್ಗಾವಣೆ ಮಾಡಲಾಗಿದೆ. ಈ ಹಣವು ಅಕ್ರಮ ಬೆಟ್ಟಿಂಗ್‌ನಿಂದ ಬಂದ ಆದಾಯ ಎಂದು ತನಿಖಾ ಸಂಸ್ಥೆ ಹೇಳಿದೆ.

## ಸಂಕ್ಷಿಪ್ತ ಸುದ್ದಿ



**ಕೆ.ಆರ್.ನಗರ: ಸಾಲಿಗ್ರಾಮ ತಾಲ್ಲೂಕಿನ ಹೊನ್ನೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಶಾಸಕ ಡಿ.ರವಿಶಂಕರ್ ಅವರು ಜನಸಂಪರ್ಕ ಸಭೆ ನಡೆಸಿ, ಸಾರ್ವಜನಿಕರ ಕುಂದು ಕೊರತೆ ಆಲಿಸಿದರು. ಈ ವೇಳೆ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು, ಪಕ್ಷದ ಮುಖಂಡರು ಹಾಜರಿದ್ದರು.**

## ಕೇಂದ್ರ ಕಾರಾಗೃಹದಿಂದ ದರಪಟ್ಟಿ ಆಹ್ವಾನ

ಮೈಸೂರು: ಕೇಂದ್ರ ಕಾರಾಗೃಹ ವತಿಯಿಂದ ಸಾರ್ವಜನಿಕ ನೋಂದಾಯಿತ ವರ್ತಕರಿಗೆ ಹಾಗೂ ಸಂಸ್ಥೆಗಳಿಗೆ ಎರೆಹುಳು ಗೊಬ್ಬರ ಘಟಕ ನಿರ್ಮಿಸಲು ದರ ಪಟ್ಟಿ ಆಹ್ವಾನಿಸಲಾಗಿದೆ. ಇಚ್ಛೆಯುಳ್ಳ ಸಂಸ್ಥೆ ಹಾಗೂ ವರ್ತಕರು ಜಿ.ಎಸ್.ಟಿ ಸಹಿತ ದರಪಟ್ಟಿಯನ್ನು ನವೆಂಬರ್ 18 ರಂದು ಸಂಜೆ 4.00 ಗಂಟೆಯೊಳಗೆ ಮುಖ್ಯ ಅಧೀಕ್ಷಕರು, ಕೇಂದ್ರ ಕಾರಾಗೃಹ, ಮೈಸೂರು ಇದರ ಕಚೇರಿಗೆ ತಲುಪಿಸತಕ್ಕದ್ದು, ಸದರಿ ದರ ಪಟ್ಟಿಗಳನ್ನು ಅದೇ ದಿನ ಅಂದರೆ ದಿನಾಂಕ: 18.11.2025 ರಂದು ಸಮಯ 5.30ಕ್ಕೆ ಮುಖ್ಯ ಅಧೀಕ್ಷಕರ ಕಚೇರಿಯಲ್ಲಿ ತೆರೆಯಲಾಗುವುದು ಎಂದು ಮೈಸೂರು ಕೇಂದ್ರ ಕಾರಾಗೃಹ ಮುಖ್ಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯೋತ್ಸವ ಕನ್ನಡದ ಘನತೆ ಸಾರುವ ಮಹತ್ವದ ದಿನ

## ಸೋಮಾನಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಡಾ.ಯಲ್ಲಪ್ಪ ನುಡಿ

ಮೈಸೂರು: ಕನ್ನಡ ರಾಜ್ಯೋತ್ಸವವು ಕೇವಲ ಒಂದು ಹಬ್ಬವಲ್ಲ, ಬದಲಾಗಿ ಇದು ಕರ್ನಾಟಕ ರಾಜ್ಯದ ಉದಯವನ್ನು ಸಂಕೇತಿಸುವ, ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಘನತೆಯನ್ನು ಸಾರುವ ಮಹತ್ವದ ದಿನವಾಗಿದೆ ಎಂದು ಸಾಹಿತಿ ಡಾ.ಯಲ್ಲಪ್ಪ ಕೆ.ಕೆ. ಪುರ ಹೇಳಿದರು.

ಸರಸ್ವತಿಪುರಂನಲ್ಲಿರುವ ದಿ ಇನ್‌ಸ್ಟಿಟ್ಯೂಟ್ ಆಫ್ ಎಜುಕೇಷನ್ ಓಂಕಾರ್ ಮಲ್ ಸೋಮಾನಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಗುರುವಾರ ಹಮ್ಮಿಕೊಂಡಿದ್ದ 70ನೇ ಕನ್ನಡ ರಾಜ್ಯೋತ್ಸವ ಸಂಭ್ರಮ-2025 ಕಾರ್ಯಕ್ರಮದಲ್ಲಿ ಮಾತನಾಡಿದರು.

ಕನ್ನಡ ಭಾಷೆ ಮಾತನಾಡುವ ಎಲ್ಲಾ ಪ್ರದೇಶಗಳನ್ನು ಒಂದುಗೂಡಿಸಿ ಮೈಸೂರು ರಾಜ್ಯವನ್ನು ಕರ್ನಾಟಕ ಎಂದು ಮರುನಾಮಕರಣ ಮಾಡಿದ ಈ ದಿನವನ್ನು ರಾಜ್ಯಾದ್ಯಂತ ದೊಡ್ಡ ಸಂಭ್ರಮದಿಂದ ಆಚರಿಸಲಾಗುತ್ತದೆ. ಇದು ರಾಜ್ಯದ ಏಕೀಕರಣಕ್ಕಾಗಿ ಹೋರಾಡಿದ ಮಹಾತ್ಮರನ್ನು ಸ್ಮರಿಸುವ ದಿನವೂ ಆಗಿದೆ ಎಂದು ತಿಳಿಸಿದರು.

ಕನ್ನಡ ಭಾಷೆಯ ಸೊಗಡನ್ನು, ಸಾಹಿತ್ಯದ ವೈವಿಧ್ಯತೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ನಮ್ಮೆಲ್ಲರ ಜವಾಬ್ದಾರಿ. ನಾಡು ನುಡಿ ಬಗ್ಗೆ ಅಭಿಮಾನವನ್ನು ಬೆಳೆಸಿ, ಅವುಗಳ ಅಸ್ತಿತ್ವವನ್ನು ಉಳಿಸಿ ಬೆಳೆಸುವ ಸಂಕಲ್ಪವನ್ನು ಈ ದಿನದಂದು ನಾವು ಕೈ ಗೊಳ್ಳಬೇಕು. ಬೇರೆ ಭಾಷೆಗಳನ್ನು ಕಲಿಯುವುದು ತಪ್ಪಲ್ಲ, ಆದರೆ ಕನ್ನಡವನ್ನು ಮರೆಯಬಾರದು ಎಂದರು.

ಕನ್ನಡ ರಾಜ್ಯೋತ್ಸವವು ಕೇವಲ ಒಂದು ಆಚರಣೆಯಲ್ಲ, ಇದು ಕನ್ನಡಿಗರ ಅಸ್ಮಿತೆಯನ್ನು ಪ್ರತಿಬಿಂಬಿಸುವ ಸಂಭ್ರಮದ ಹಬ್ಬ. ಈ ದಿನದಂದು ನಾವು ನಮ್ಮ ಗತಕಾಲದ ಹೆಮ್ಮೆಯನ್ನು ನೆನಪಿಸಿಕೊಳ್ಳುವುದರ ಜೊತೆಗೆ, ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಉಳಿವಿಗಾಗಿ ಒಟ್ಟಾಗಿ ಶ್ರಮಿಸುವ ಪ್ರತಿಜ್ಞೆ ಮಾಡಬೇಕು. ನಮ್ಮ ರಾಜ್ಯದ ಪ್ರಗತಿ ಮತ್ತು ಸಾಮಾಜಿಕ ಸಾಮರಸ್ಯಕ್ಕಾಗಿ ಒಗ್ಗಟ್ಟಿನಿಂದ ಕೆಲಸ ಮಾಡೋಣ ಎಂದು ತಿಳಿಸಿದರು.



**ಮೈಸೂರಿನ ಸರಸ್ವತಿಪುರಂನಲ್ಲಿರುವ ದಿ ಇನ್‌ಸ್ಟಿಟ್ಯೂಟ್ ಆಫ್ ಎಜುಕೇಷನ್ ಓಂಕಾರ್ ಮಲ್ ಸೋಮಾನಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಕನ್ನಡ ರಾಜ್ಯೋತ್ಸವ ಸಂಭ್ರಮ ಕಾರ್ಯಕ್ರಮ ನಡೆಯಿತು.**

ಕಾಲೇಜಿನ ಆಡಳಿತ ಮಂಡಳಿ ಅಧ್ಯಕ್ಷ ಡಾ.ಎಂ.ಪುಟ್ಟಸ್ವಾಮಿ ಮಾತನಾಡಿ, ಕನ್ನಡ ಕೇವಲ ಭಾಷೆಯಾಗದೆ ಭಾವನೆಯೂ ಆಗಿದೆ. ಇತ್ತೀಚಿನ ವರ್ಷಗಳಲ್ಲಿ ಕನ್ನಡದ ಸ್ಥಿತಿಗತಿ ಬದಲಾಗಿದೆ. ಕನ್ನಡ ನಮ್ಮ ಉಸಿರಾಗಿರಬೇಕು. ಎಂತಹ ಸಂದರ್ಭದಲ್ಲೂ ಕನ್ನಡ ಬಿಟ್ಟುಕೊಡಬಾರದು. ಬೇರೆ ಭಾಷೆಗಳನ್ನು ಕಲಿಯುವುದು ಖಂಡಿತ ತಪ್ಪಲ್ಲ. ಆದರೆ ಬೇರೆ ಭಾಷೆ ಕಲಿತು ಕನ್ನಡ ಮರೆಯುವುದು ತಪ್ಪು ಎಂದು ತಿಳಿಸಿದರು.

ಪ್ರಾಂಶುಪಾಲರಾದ ಡಾ.ಉಷಾ.ಆರ್.ಜಿ ಮಾತನಾಡಿ, ಯುವ ಪೀಳಿಗೆಗೆ ಕನ್ನಡ ನಾಡಿನ ಇತಿಹಾಸ, ಸಂಸ್ಕೃತ, ಕಲೆ, ಭಾಷೆ ಬಗ್ಗೆ ಅರಿವು ಮೂಡಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ನಾವು ಕೇವಲ ನವೆಂಬರ್ ಕನ್ನಡಿಗರಾಗದೇ, ಕನ್ನಡ ನಾಡಿನ ಜವಾಬ್ದಾರಿಯುತ ಪ್ರಜೆಯಾಗಿ ಕನ್ನಡದಲ್ಲೇ ಮಾತನಾಡುತ್ತೇನೆ, ಬರೆಯುತ್ತೇನೆ, ನಿತ್ಯ ವ್ಯವಹಾರದಲ್ಲಿ ಕನ್ನಡವನ್ನೇ ಬಳಸುತ್ತೇನೆ, ಕನ್ನಡೇತರರಿಗೆ ಕನ್ನಡ ಕಲಿಸುತ್ತೇನೆ, ಕನ್ನಡ ನುಡಿ, ಸಂಸ್ಕೃತಿ, ಪರಂಪರೆ ಉಳಿಸಲು ಸದಾ ಕಟಿಬದ್ಧರಾಗಿರೋಣ ಹಾಗೂ ಇದೇ ಹಿರಿಯ ಇತಿಹಾಸ ಹಾಗೂ ಗೌರವವಿರುವ ಜೀವಂತ ಭಾಷೆ ಕನ್ನಡ ಎಂಬುದನ್ನು ತಿಳಿಯೋಣ ಎಂದರು.

> **ಕನ್ನಡದ ಮೇಲೆ ಇತರೆ ಭಾಷಿಕರ ದಬ್ಬಾಳಿಕೆ ಹೆಚ್ಚಾಗಿದೆ. ಕನ್ನಡಿಗರಿಗೆ ಉದ್ಯೋಗ ದೊರಕುವುದು ಕಷ್ಟವಾಗಿದೆ. ಇಂತಹ ಸಮಯದಲ್ಲಿ ಕನ್ನಡದ ಅಸ್ಮಿತೆಗಾಗಿ ಎಲ್ಲರೂ ಹೋರಾಡಬೇಕಾಗಿದೆ.**
> **ಡಾ.ಎಂ.ಪುಟ್ಟಸ್ವಾಮಿ,** ಅಧ್ಯಕ್ಷರು, ಕಾಲೇಜು ಆಡಳಿತ ಮಂಡಳಿ

ಕಾರ್ಯಕ್ರಮದ ಸಂಯೋಜಕರಾದ ಡಾ.ವಿನುತ. ಎಂ, ಸಹಾಯಕ ಪ್ರಾಧ್ಯಾಪಕರು ಹಾಗೂ ಕಾಲೇಜಿನ ಎಲ್ಲಾ ಬೋಧಕ ಮತ್ತು ಬೋಧಕೇತರರ ವರ್ಗದವರು ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು.

# ಅಳಲಹಳ್ಳಿ ಹಾಡಿ: ಮೂಲ ಸೌಕರ್ಯಗಳಿಗಾಗಿ ರಸ್ತೆಗಿಳಿದು ಪ್ರತಿಭಟನೆ




**ಸರಗೂರು ತಾಲೂಕಿನ ಹಾದನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಳಲಹಳ್ಳಿ ಹಾಡಿಯಲ್ಲಿ ಮೂಲ ಸೌಕರ್ಯಗಳಿಗಾಗಿ ಆಗ್ರಹಿಸಿ ಅಳಲಹಳ್ಳಿ ಹಾಡಿ ನಿವಾಸಿಗಳು ಪ್ರತಿಭಟನೆ ನಡೆಸಿದರು.**

ಸರಗೂರು: ತಾಲೂಕಿನ ಹಾದನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಅಳಲಹಳ್ಳಿ ಹಾಡಿಯಲ್ಲಿ ಮೂಲ ಸೌಕರ್ಯಗಳಿಗಾಗಿ ಆಗ್ರಹಿಸಿ ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆ ವತಿಯಿಂದ ಅಳಲಹಳ್ಳಿ ಹಾಡಿ ರಸ್ತೆ ಮುಂಭಾಗ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಎಐಎಂಎಸ್‌ಎಸ್ ಜಿಲ್ಲಾ ನಾಯಕರಾದ ಉ.ಪುಷ್ಪ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡುತ್ತಾ, ನಮ್ಮ ಜನ ಇಲ್ಲಿ ಕನಿಷ್ಠ ಮೂಲ ಸೌಕರ್ಯಗಳೇ ಇಲ್ಲದೆ ಪರಿತಪಿಸುವಂತಾಗಿದೆ. ಇನ್ನೊಂದೆಡೆ ಇವರ ಜೀವ ಮತ್ತು ಜೀವನಕ್ಕೆ ಭದ್ರತೆ ಇಲ್ಲದಂತಾಗಿದೆ. ಇಲ್ಲಿಯವರೆಗೂ ನಮ್ಮ ಈ ಗ್ರಾಮಗಳ ವ್ಯಾಪ್ತಿಯಲ್ಲಿ ಮೂವರನ್ನು ಹುಲಿ ದಾಳಿ ಮಾಡಿ ಕೊಂದಿದೆ. ಇಲ್ಲಿನ ಮಹಿಳೆಯರು ಶೌಚಾಲಯಕ್ಕಾಗಿ ಬಯಲನ್ನೇ ಅವಲಂಬಿಸಬೇಕಾದ ಪರಿಸ್ಥಿತಿ ಇನ್ನೂ ಇದೆ. ಬಯಲು ಶೌಚಕ್ಕೆ ಹೋಗುವ ಸಂದರ್ಭದಲ್ಲಿ ಅವರು ಕಾಡು ಪ್ರಾಣಿಗಳ ದಾಳಿಗೊಳಗಾಗಿ ಸತ್ತ ಪ್ರಕರಣಗಳೂ ಇವೆ.

ಹೀಗಿದ್ದರೂ ಶೌಚಾಲಯವನ್ನು ಕಟ್ಟಿಕೊಡದ ಸರ್ಕಾರಗಳು ಬುಡಕಟ್ಟು ಮತ್ತು ಬಡತನದ ಬಗ್ಗೆ ತಮ್ಮ ಧೋರಣೆ ಹೇಗಿದೆ ಎಂಬುದನ್ನು ತೋರಿಸುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅಂಗನವಾಡಿ ಕಟ್ಟಡ ನಿರ್ಮಾಣ, ವಾಸಿಸಲು ಮನೆ, ಶೌಚಾಲಯ, ರಸ್ತೆ, ಸಮುದಾಯ ಭವನ, ಮನೆಗಳಿಗೆ ವಿದ್ಯುತ್ ಸಂಪರ್ಕ, ವಾಸಿಸುವ ಮನೆಗಳಿಗೆ ಹಕ್ಕು ಪತ್ರ ಇನ್ನಿತರ ಮೂಲ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಮಾದಮ್ಮ, ನಿಂಗರಾಜಮ್ಮ, ಜವರಮ್ಮ, ಕೂಸಮ್ಮ, ಸಣ್ಣ ದೇವಮ್ಮ, ಬೆಳ್ಳಮ್ಮ, ಗೋಪಮ್ಮ, ಸಿದ್ದಮ್ಮ, ದೇವಯ್ಯ ನಿಂಗಯ್ಯ, ಮಹೇಶ್, ಸೋಮ, ಸೂರಿ, ಮಧು, ಮಹೇಶ, ಮಾದು, ಮಣಿಕಂಠ ಹಾಗೂ ಅಳಲಹಳ್ಳಿ ಹಾಡಿಯ ನಿವಾಸಿಗಳು ಭಾಗವಹಿಸಿ, ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

# ತಜ್ಞ ವೈದ್ಯರಿಂದ ಉಚಿತ ಆರೋಗ್ಯ ತಪಾಸಣೆ

ಮೈಸೂರು: ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ಶಲ್ಯತಂತ್ರ ಹೊರರೋಗಿ ವಿಭಾಗದಲ್ಲಿ ನವೆಂಬರ್ 10 ರಿಂದ ಡಿಸೆಂಬರ್ 12 ರವರೆಗೆ "ಮೂತ್ರಾಶ್ಮರಿ" (Uninary Calculi/kidney Stone) ರೋಗದ ಮೇಲೆ ವಿಶೇಷ ಚಿಕಿತ್ಸಾ ಶಿಬಿರ' ವನ್ನು ಕೆಲಸದ ವೇಳೆಯಲ್ಲಿ ಬೆಳಗ್ಗೆ 10:00 ಗಂಟೆಯಿಂದ ಸಂಜೆ 04:00 ಗಂಟೆಯವರೆಗೆ ಆಯೋಜಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಡಾ॥ ಕೆರೋಲಿನ್, ಸಹಾಯಕ ಪ್ರಾಧ್ಯಾಪಕರು, (ಮೊಬೈಲ್ ಸಂಖ್ಯೆ: 9449412309) ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಮೈಸೂರು ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 'ಕನಕ ಜಯಂತೋತ್ಸವ ಸಮಿತಿಗೆ ಯಾರನ್ನೂ ಆಯ್ಕೆ ಮಾಡಿಲ್ಲ'



**ನಂಜನಗೂಡು ತಾಲೂಕು ಪತ್ರಕರ್ತರ ಭವನದಲ್ಲಿ ಕುರುಬ ಸಮುದಾಯದ ಮುಖಂಡರು ಸುದ್ದಿಗೋಷ್ಠಿ ನಡೆಸಿದರು.**

ನಂಜನಗೂಡು: ತಾಲೂಕು ಕುರುಬರ ಸಂಘದಲ್ಲಿ ಕೆಲವೊಂದು ಭಿನ್ನಾಭಿಪ್ರಾಯಗಳಿದ್ದು, ಸದ್ಯಕ್ಕೆ ಕನಕ ಜಯಂತ್ಯೋತ್ಸವ ಆಚರಣೆ ಸಮಿತಿ ಅಧ್ಯಕ್ಷರನ್ನಾಗಿ ಯಾರನ್ನು ಆಯ್ಕೆ ಮಾಡಿಲ್ಲ ಎಂದು ಕುರುಬ ಸಮುದಾಯದ ಮುಖಂಡ ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಎಂ. ಶಂಕರ್ ಮತ್ತು ಮಾಜಿ ತಾಲೂಕು ಪಂಚಾಯಿತಿ ಅಧ್ಯಕ್ಷ ತಮ್ಮಣ್ಣೇಗೌಡ ಸ್ಪಷ್ಟನೆ ನೀಡಿದ್ದಾರೆ.

ತಾಲೂಕು ಪತ್ರಕರ್ತರ ಭವನದಲ್ಲಿ ಕುರುಬ ಸಮುದಾಯದ ಇನ್ನಿತರೆ ಮುಖಂಡರೊಂದಿಗೆ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬುಧವಾರ ಜನಾಂಗದ ಮುಖಂಡರಾದ ಮೋಹನ್, ಕೆಂಪಣ್ಣ, ಕುರಿಹುಂಡಿ ರಾಜು, ಗಂಗಾಧರ್ ಸೇರಿ ಇನ್ನಿತರೆ ಮುಖಂಡರು ಸುದ್ದಿಗೋಷ್ಠಿ ನಡೆಸಿ ಜನಾಂಗಕ್ಕೆ ತಪ್ಪು ಸಂದೇಶಗಳನ್ನ ನೀಡಿದ್ದಾರೆ. 538ನೇ ಕನಕ ಜಯಂತಿ ಜಯಂತ್ಯೋತ್ಸವ ಸಮಿತಿ ಅಧ್ಯಕ್ಷರನ್ನಾಗಿ ನನ್ನನ್ನು ಆಯ್ಕೆ ಮಾಡಿ, ನಮ್ಮ ನೇತೃತ್ವದಲ್ಲೇ ಕನಕ ಜಯಂತಿ ಆಚರಣೆ ಮಾಡಲಾಗುವುದು ಎಂದು ಮೋಹನ್ ಸೇರಿ ಇನ್ನಿತರರು ಹೇಳಿಕೆ ನೀಡಿದ್ದಾರೆ. ಇವರ ಹೇಳಿಕೆ ಸತ್ಯಕ್ಕೆ ದೂರವಾಗಿದೆ. ಜನಾಂಗದ ಹೆಸರಿನಲ್ಲಿ ಪ್ರಚಾರ ಪಡೆಯಲು ಈ ರೀತಿ ಸುಳ್ಳು ಹೇಳಿಕೆ ನೀಡಿರೋದು ಖಂಡನೀಯ. ತಾಲೂಕಿನಲ್ಲಿ ಸಮಾಜದ ವತಿಯಿಂದ ಆಚರಿಸುವ ಈ ಬಾರಿಯ ಕನಕ ಜಯಂತಿ ಜಯಂತ್ಯೋತ್ಸವ ಅಧ್ಯಕ್ಷರನ್ನಾಗಿ ಯಾರನ್ನು ಆಯ್ಕೆ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು.

ಈ ಮೊದಲು ತಾಲೂಕು ಕುರುಬರ ಸಂಘದ ಚುನಾವಣೆ ನಡೆದು ಅಧ್ಯಕ್ಷರನ್ನ ಆಯ್ಕೆ ಮಾಡುವ ತೀರ್ಮಾನಕ್ಕೆ ಬರಲಾಗಿತ್ತು. ಆದರೆ ಕಾರಣಾಂತರಗಳಿಂದ ಅದು ಸಾಧ್ಯವಾಗಲಿಲ್ಲ. ಕಳೆದ 3 ವರ್ಷದಿಂದ ತಾಲೂಕಿನಲ್ಲಿ ಕನಕ ಜಯಂತಿ ಆಚರಣೆ ಮಾಡಿರಲಿಲ್ಲ. ಆದರೆ ಈ ಬಾರಿ ನವೆಂಬರ್ 8 ರಂದು ತಾಲೂಕು ಆಡಳಿತದ ವತಿಯಿಂದ ಸರಳವಾಗಿ ಆಚರಣೆ ಮಾಡಲಾಗುವುದು. ಬಳಿಕ ಸಮಾಜದ ಮುಖಂಡರು ಸಭೆ ಮಾಡಿ, ಸಿಎಂ ಸಿದ್ದರಾಮಯ್ಯ ಅಥವಾ ಯತೀಂದ್ರ ಅವರನ್ನು ಭೇಟಿ ಮಾಡಿ ಜಯಂತ್ಯೋತ್ಸವ ಸಮಿತಿ ನೂತನ ಅಧ್ಯಕ್ಷರನ್ನ ಆಯ್ಕೆ ಮಾಡಲಾಗುವುದು. ಬಳಿಕ, ಎಲ್ಲರೂ ಸೂಚಿಸಿದ ದಿನಾಂಕದಂದು ಅದ್ದೂರಿ ಕನಕ ಜಯಂತಿ ಆಚರಣೆ ಮಾಡಲು ತೀರ್ಮಾನಿಸಲಾಗಿದೆ. ಆದರೆ ಇವರು ಕನಕ ಜಯಂತ್ಯೋತ್ಸವಕ್ಕೆ ನಾನೇ ಅಧ್ಯಕ್ಷ, ನನ್ನ ಹೆಸರು ಘೋಷಣೆಯಾಗಿದೆ ಅಂತ ಬಿಂಬಿಸಿಕೊಂಡು ಕನಕ ಜಯಂತಿ ಹೆಸರಿನಲ್ಲಿ ನಾಯಕತ್ವದ ಪ್ರಚಾರ ಪಡೆಯುತ್ತಿದ್ದಾರೆ. ಈ ರೀತಿ ಹೇಳಿಕೆ ಕೊಟ್ಟಿರೋದು ಖಂಡನೀಯ ಮತ್ತು ಇದರಿಂದ ಸಮಾಜಕ್ಕೆ ತಪ್ಪು ಸಂದೇಶ ರವಾನೆಯಾಗಿದೆ ಅಂತ ತಿರುಗೇಟು ಕೊಟ್ಟಿದ್ದಾರೆ.

> **ಮೋಹನ್ ಸೇರಿ ಇತರರು ಯತೀಂದ್ರ ಸಿದ್ದರಾಮಯ್ಯ ಅವರ ಹೆಸರನ್ನು ಬಳಸಿಕೊಂಡು ನಾನೇ ಅಧ್ಯಕ್ಷ ಎಂದು ಹೇಳಿಕೊಂಡಿದ್ದಾರೆ. ಇವರ ಹೇಳಿಕೆ ನೂರಕ್ಕೆ ನೂರರಷ್ಟು ಸುಳ್ಳಾಗಿದ್ದು, ಈ ರೀತಿ ಸುಳ್ಳು ಮಾಹಿತಿ ನೀಡಿದ್ದಾರೆಂಬ ವಿಚಾರವನ್ನು ಯತೀಂದ್ರ ಸಿದ್ದರಾಮಯ್ಯ ಅವರೊಂದಿಗೆ ಚರ್ಚೆ ಮಾಡಿದ್ದೇವೆ.**
> ಸಿ.ಎಂ. **ಶಂಕರ್,** ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ

ಸಮುದಾಯ ಮುಖಂಡರಾದ ಹರತಲೆ ಹೆಚ್.ಎಸ್. ಸುರೇಶ್, ಹುಣಸನಾಳು ಸಿದ್ದರಾಜು, ಗೀಕಳ್ಳಿ ಬೀರೇಗೌಡ, ದೇವೀರಮ್ಮನಹಳ್ಳಿ ಬೀರೇಶ್, ಕುರಿಹುಂಡಿ ಆನಂದ, ಬೀರದೇವನಪುರ ಮಹೇಶ್, ದೇವೀರಮನಹಳ್ಳಿಹುಂಡಿ ಮಹದೇವು, ಚಿನ್ನದಗುಡಿಹುಂಡಿ ರಾಜೇಶ್, ಹೊಸವೀಡು ಸ್ವಾಮಿ, ಮಲ್ಲುಪುರ ಹುಚ್ಚೇಗೌಡ, ಮಣಿ ಹಾಗೂ ಗೋವಿಂದರಾಜು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ನಂಜೇಪುರ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡುವೆ: ಅನಿಲ್ ಚಿಕ್ಕಮಾದು ಭರವಸೆ

ಸರಗೂರು: ತಾಲ್ಲೂಕಿನ ನಂಜೇಪುರ ಗ್ರಾಮದ ಪ್ರಮುಖ ರಸ್ತೆಗೆ ಶಾಸಕರಾದ ಅನಿಲ್ ಚಿಕ್ಕಮಾದು ಭೂಮಿ ಪೂಜೆ ನೆರವೇರಿಸಿದರು. ಈ ವೇಳೆ ಮಾತನಾಡಿ ನಂಜೇಪುರ ಗ್ರಾಮದಲ್ಲಿ ಹಲವಾರು ವರ್ಷಗಳಿಂದ ರಸ್ತೆ ಇಲ್ಲವಾಗಿದೆ. ಈ ಬಗ್ಗೆ ಗ್ರಾಮಸ್ಥರು ಬೇಡಿಕೆ ಇಟ್ಟಿದ್ದರು. ನಾನು ಸಹ ಇದೆ ರಸ್ತೆಯಲ್ಲಿ ಓಡಾಡಿದ್ದೇನೆ ಆದ್ದರಿಂದ ರಸ್ತೆ ಅವಶ್ಯಕತೆ ಇತ್ತು. ಹೀಗಾಗಿ ರಸ್ತೆ ನಿರ್ಮಾಣಕ್ಕಾಗಿ ಇಂದು ಭೂಮಿ ಪೂಜೆ ನೆರವೇರಿಸಲಾಗಿದೆ. ನಾನು ಶಾಸಕನಾಗಿ ಕೊಟ್ಟ ಭರವಸೆಯನ್ನು ಇಡೇರಿಸುತ್ತೇನೆ, ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ ಎಂದರು.

ಗ್ರಾಮಸ್ಥರ ಬೇಡಿಕೆಗಳಾದ ಸಾಗುವಳಿ, ಬಸ್ ವ್ಯಸ್ಥೆ, ಕುಡಿಯುವ ನೀರು, ಡಾ.ಬಿ.ಆರ್. ಅಂಬೇಡ್ಕರ್ ಪತ್ರಿಮೆ ಉದ್ಘಾಟನೆ, ಮಹದೇಶ್ವರಸ್ವಾಮಿ ದೇವಸ್ಥಾನ ಅಭಿವೃದ್ಧಿ, ರವಿನ್ಯೂ ಭೂಮಿ, ಹುಲಿದಾಳಿ ಸೇರಿದಂತೆ ಗ್ರಾಮದ ಮೂಲ ಸೌಕರ್ಯಗಳನ್ನು ಹಂತ ಹಂತವಾಗಿ ಅಭಿವೃದ್ಧಿ ಮಾಡಲಾಗುವುದು ಎಂದು ತಿಳಿಸಿದರು.



**ಸರಗೂರು ತಾಲ್ಲೂಕಿನ ನಂಜೇಪುರ ಗ್ರಾಮದ ಪ್ರಮುಖ ರಸ್ತೆ ನಿರ್ಮಾಣಕ್ಕೆ ಶಾಸಕರಾದ ಅನಿಲ್ ಚಿಕ್ಕಮಾದು ಭೂಮಿ ಪೂಜೆ ನೆರವೇರಿಸಿದರು.**

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಭಾಗ್ಯಲಕ್ಷ್ಮಿ ನಿಂಗರಾಜು, ಚಿಕ್ಕವೀರನಾಯಕ, ತಾಲ್ಲೂಕು ನಾಯಕ ಸಮಾಜದ ಅಧ್ಯಕ್ಷ ಶಂಭುಲಿಂಗನಾಯಕ, ಯೂತ್ ಕಾಂಗ್ರೆಸ್ ಅಧ್ಯಕ್ಷ ಕಂದೇಗಾಲ ಶಿವರಾಜು, ತಾಲ್ಲೂಕು ಎಸ್.ಸಿ.ಬ್ಲಾಕ್ ಅಧ್ಯಕ್ಷ ಕೊಂದೂರು ಮೂರ್ತಿ, ಕೋಟೆ ಶಿವಪ್ಪ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಮಂಜುಳ ಶಿವಮೂರ್ತಿ, ಆರಾಧ್ಯ, ದಡದಳ್ಳಿ ಚಿನ್ನಸ್ವಾಮಿ, ಮಾಜಿ ಸದಸ್ಯ ಶಿವರಾಜು, ಪಿಡಿಓ ಜ್ಯೋತಿ, ಮುಖಂಡರಾದ ಸೀರಯ್ಯ, ಶಂಕರ್, ಮಹೇಶ್, ಸುಬ್ಬಯ್ಯ, ನಂಜುಂಡಿ, ಎಇಇ ರಮೇಶ್, ಗ್ರಾಮಸ್ಥರು ಭಾಗಿಯಾಗಿದ್ದರು.

# ಕನ್ನಡ ಕೇವಲ ಭಾಷೆಯಲ್ಲ, ನಮ್ಮ ನೆಲದ ಸಾರ: ಜಗದೀಶ್

## ಬೆಟ್ಟದಪುರ ಮಲ್ಲಿಕಾರ್ಜುನ ಸ್ವಾಮಿ ಆಟೋ ಚಾಲಕರು, ಮಾಲೀಕರ ಸಂಘದಿಂದ ರಾಜ್ಯೋತ್ಸವ



**ಬೆಟ್ಟದಪುರ ಮಲ್ಲಿಕಾರ್ಜುನ ಸ್ವಾಮಿ ಆಟೋ ಚಾಲಕರು ಹಾಗೂ ಮಾಲೀಕರ ಸಂಘದ ವತಿಯಿಂದ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಿಎಸ್‌ಐ ಜಗದೀಶ್ ಧ್ವಜಾರೋಹಣ ಮಾಡಿದರು.**

ಪಿರಿಯಾಪಟ್ಟಣ: ಕನ್ನಡ ಕೇವಲ ಭಾಷೆಯಲ್ಲ, ಅದು ನಮ್ಮೆಲ್ಲರ ಭಾವನೆ. ಕನ್ನಡ ಕೇವಲ ಸಂವಹನ ಸಾಧನವಲ್ಲ, ಅದು ನಮ್ಮ ಇತಿಹಾಸ, ಪರಂಪರೆ ಮತ್ತು ಸಾಹಿತ್ಯದ ಸಾರವಾಗಿದೆ. ಕನ್ನಡ ಭಾಷೆಯನ್ನು ಸಂರಕ್ಷಿಸಿ ಬೆಳೆಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಬೆಟ್ಟದಪುರ ಪೊಲೀಸ್ ಠಾಣಾ ಪಿಎಸ್‌ಐ ಜಗದೀಶ್ ಅಭಿಪ್ರಾಯಪಟ್ಟರು.

ತಾಲೂಕಿನ ಬೆಟ್ಟದಪುರ ಮಲ್ಲಿಕಾರ್ಜುನ ಸ್ವಾಮಿ ಆಟೋ ಚಾಲಕರು ಹಾಗೂ ಮಾಲೀಕರ ಸಂಘದ ವತಿಯಿಂದ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ಮಾಡಿ ಅವರು ಮಾತನಾಡಿದರು.

ನಾವು ಕೇವಲ ನವೆಂಬರ್ ಕನ್ನಡಿಗರಾಗದೇ, ವರ್ಷವಿಡೀ ಕನ್ನಡವನ್ನು ಬಳಸುವ ಸಂಕಲ್ಪ ಮಾಡೋಣ. ಕನ್ನಡವನ್ನು ಉಳಿಸಿ, ಬೆಳೆಸುವುದು ನಮ್ಮೆಲ್ಲರ ಕರ್ತವ್ಯ. ಈ ನಿಟ್ಟಿನಲ್ಲಿ ನಾವು ಸಾಗೋಣ ಎಂದು ಕರೆ ನೀಡಿದರು.

ಸಂಘದ ಅಧ್ಯಕ್ಷರಾದ ಶಂಕರ್ ಮಾತನಾಡಿ, ಕನ್ನಡ ನೆಲದಲ್ಲಿ ವಾಸಿಸುವ ಪ್ರತಿಯೊಬ್ಬನೂ ಕನ್ನಡಿಗನೆಂದು ಹೇಳಿಕೊಳ್ಳಲು ಗರ್ವ ಪಡಬೇಕು. ಆದರೆ ಇಂದಿನ ದಿನಗಳಲ್ಲಿ ಕನ್ನಡ ರಾಜ್ಯೋತ್ಸವ ಕೇವಲ ಆಟೋ ನಿಲ್ದಾಣಗಳಲ್ಲಿ ಮತ್ತು ಸರ್ಕಾರಿ ಶಾಲೆಗಳಿಗೆ ಸೀಮಿತವಾಗಿದೆ. ಮುಂದಿನ ದಿನಗಳಲ್ಲಿ ಇಡೀ ಕರುನಾಡೆ ಕನ್ನಡ ರಾಜ್ಯೋತ್ಸವವನ್ನು ಆಚರಿಸಿ ಕನ್ನಡ ಎಲ್ಲೆಡೆ ರಾರಾಜಿಸಲಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಆಟೋ ಸಂಘದ ಪದಾಧಿಕಾರಿಗಳಾದ ನಂಜುಂಡ ಸ್ವಾಮಿ, ಗಣೇಶ್, ವೇಣು, ಸಂತೋಷ್, ಕಂಠಿ, ರವಿ, ಮೋಹನ್, ತಮ್ಮಯ್ಯ ಮತ್ತು ಗ್ರಾಮಸ್ಥರು ಹಾಜರಿದ್ದರು.

## ಸಂಕ್ಷಿಪ್ತ ಸುದ್ದಿ

### ಎಚ್‌ಡಿಕೆ ಅಧ್ಯಕ್ಷತೆಯಲ್ಲಿ ಇಂದು ದಿಶಾ ಸಭೆ

ಮೈಸೂರು: ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ದಿಶಾ ಸಭೆ ನಡೆಯಲಿದೆ. ನ. 07 ರಂದು ಬೆಳಗ್ಗೆ 10.30 ಗಂಟೆಗೆ 2025–26 ನೇ ಸಾಲಿನ ತ್ರೈಮಾಸಿಕದ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿ(ದಿಶಾ ಸಮಿತಿ) ಸಭೆಯನ್ನು ಜಿಲ್ಲಾ ಪಂಚಾಯತ್ ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

### ಡಿವೈಎಸ್‌ಪಿ ಶ್ರೀಕಾಂತ್ ಅಧಿಕಾರ ಸ್ವೀಕಾರ



ಮೈಸೂರು: ಜಿಲ್ಲಾ ಸೈಬರ್ ಕ್ರೈಮ್ ವಿಭಾಗದ ಡಿವೈಎಸ್‌ಪಿ ಆಗಿ ಶ್ರೀಕಾಂತ್ ಅವರು ಜಲಪುರಿಯಲ್ಲಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಎನ್.ರಘು ಅವರಿಂದ ಅಧಿಕಾರ ಸ್ವೀಕರಿಸಿದರು.

# ಗ್ರೇಟರ್ ಮೈಸೂರು ಚುನಾವಣೆ ಮುಂದೂಡುವ ಪಿತೂರಿ

## ಸುದ್ದಿಗೋಷ್ಠಿಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ಆರೋಪ ಮಾಡಿದ ಸಾ.ರಾ.ಮಹೇಶ್

ಮೈಸೂರು: ಸಿಎಂ ಸಿದ್ದರಾಮಯ್ಯನವರು ಯಾವ ಉದ್ದೇಶಕ್ಕೆ ಬೃಹತ್ ಮೈಸೂರು ಮಹಾನಗರ ಪಾಲಿಕೆ ಮಾಡಲು ಹೊರಟಿದ್ದಾರೋ ಗೊತ್ತಿಲ್ಲ. ಪಾಲಿಕೆಗೆ ಜನಪ್ರತಿನಿಧಿಗಳಿಲ್ಲದೇ ಈಗಾಗಲೇ 2 ವರ್ಷ ಕಳೆದಿದೆ. ಚುನಾವಣೆ ನಡೆಸುವ ಬಗ್ಗೆ ಗಮನವನ್ನೇ ನೀಡುತ್ತಿಲ್ಲ. ಈಗ ಗ್ರೇಟರ್ ಮೈಸೂರು ಹೆಸರಿನಲ್ಲಿ ಚುನಾವಣೆ ಮುಂದೂಡುವ ಪಿತೂರಿ ನಡೆಯುತ್ತಿದೆ ಎಚಿದು ಮಾಜಿ ಸಚಿವ ಸಾ.ರಾ. ಮಹೇಶ್ ಆರೋಪ ಮಾಡಿದ್ದಾರೆ.

ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮೈಸೂರು ಮಹಾನಗರ ಪಾಲಿಕೆ ಚುನಾವಣೆ ಆಗಿ 2 ವರ್ಷ ಆಗಿದೆ. ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಚುನಾವಣೆಯಾಗಿ 5 ವರ್ಷ ತುಂಬುತ್ತಿದೆ. ಜನ ಪ್ರತಿನಿಧಿಗಳು ಇಲ್ಲದ ಕಾರಣಕ್ಕೆ ಕೇಂದ್ರದಿಂದ ಬರಬೇಕಿದ್ದ ಅನುದಾನವೂ ಬಂದಿಲ್ಲ. ಜಿಲ್ಲಾ ಪಂಚಾಯತ್‌ಗೆ 15ನೇ ಹಣಕಾಸು ಆಯೋಗದಿಂದ ಸಾವಿರಾರು ಕೋಟಿ ರೂಪಾಯಿ ಅನುದಾನ ಬರುತ್ತಿತ್ತು. ಇದು ಇಲ್ಲವಾಗಿದೆ. ಇದಕ್ಕೆ ಯಾರು ಹ್ರೆಣೆ..? ಇದು ಯಾರ ಲೋಪ..? ಎಚಿದು ಸಾ.ರಾ.ಮಹೇಶ್ ಪ್ರಶ್ನಿಸಿದರು.

ಮೈಸೂರು ನಗರಕ್ಕೆ ಕೇಂದ್ರದಿಂದ ಪ್ರತಿ ವರ್ಷ 70 ಕೋಟಿ ರೂ. ಬರ್ತಿತ್ತು. ಎರಡು ವರ್ಷದಿಂದ 140 ಕೋಟಿ ರೂ. ನಷ್ಟವಾಗಿದೆ. ಈಗ ಗ್ರೇಟರ್ ಮೈಸೂರು ಮಾಡಲು ಹೊರಟಿದ್ದೀರಿ, ಆದರೆ ನೀಲಿ ನಕ್ಷೆಯೇ ಅವೈಜ್ಞಾನಿಕವಾಗಿದೆ. ಈ ಕೂಡಲೇ ನೀಲಿ ನಕ್ಷೆ ಸರಿಪಡಿಸಬೇಕು. ಮೊದಲು ಮೈಸೂರಿಗೆ ಹಣ ಬಿಡುಗಡೆ ಮಾಡಿ, ನಂತರ ಗ್ರೇಟರ್ ಮೈಸೂರು ಮಾಡಿ. ನಿಮ್ಮ ನಿರ್ಧಾರವನ್ನು ನಾವು ಸ್ವಾಗತ ಮಾಡುತ್ತೇವೆ. ಸಿದ್ದರಾಮಯ್ಯ ಅವರ ಅವಧಿಯಲ್ಲಿಯೇ ಈ ಕೆಲಸ ಆದರೆ ನಮಗೂ ಸಂತೋಷ. ಆದರೆ ತರಾತುರಿಯಲ್ಲಿ ನಿರ್ಧಾರ ಮಾಡಿ ಸಮಸ್ಯೆ ಮಾಡಬೇಡಿ ಎಂದು ತಿಳಿಸಿದರು.

ಬೃಹತ್ ಮೈಸೂರು ಮಹಾನಗರ ಪಾಲಿಕೆ ಆದರೆ ಈಗ ಇರುವುದಕ್ಕಿಂತ 3 ಪಟ್ಟು ವಿಸ್ತೀರ್ಣ ಹೆಚ್ಚಾಗುತ್ತದೆ. ನಗರದ ಸುತ್ತಲಿನ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ಪುರಸಭೆ ಎಲ್ಲವೂ ಸೇರುತ್ತವೆ. ಇವುಗಳೆಲ್ಲವನ್ನೂ ಸರಿಯಾದ ಆಡಳಿತ ಚೌಕಟ್ಟಿಗೆ ತರುವುದಕ್ಕೆ ಎರಡು ವರ್ಷಗಳಾದರೂ ಬೇಕಾಗುತ್ತದೆ. ಜೊತೆಗೆ ಕೋಟ್ಯಾಂತರ ರೂಪಾಯಿ ಹಣವೂ ಬೇಕಾಗುತ್ತದೆ.ಸಿದ್ದರಾಮಯ್ಯಅವರಅವಧಿಯಲ್ಲಿಯೇ ಸರಿಯಾದ ನೀಲ ನಕ್ಷೆ ತಯಾರು ಆಗಲಿ. ಅಗತ್ಯ ಇರುವ ಅನುದಾನವನ್ನು ಮೊದಲೇ ಬಿಡುಗಡೆ ಮಾಡಿ ನಚಿತರ ಗ್ರೇಟರ್ ಮೈಸೂರು ಮಾಡಿ ಎಂದು ಮಹೇಶ್ ಅವರು ಸರ್ಕಾರಕ್ಕೆ ಒತ್ತಾಯ ಮಾಡಿದರು.



ಮೈಸೂರಿನಲ್ಲಿ ಮಾಜಿ ಸಚಿವ ಸಾ.ರಾ. ಮಹೇಶ್ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.

**ಬಡವರು, ಮಧ್ಯಮ ವರ್ಗದವರ ಬದುಕು ಕಷ್ಟವಾಗಿದೆ**

ಬೃಹತ್ ಮೈಸೂರು ಮಹಾನಗರ ಪಾಲಿಕೆ ಮಾಡುವ ಮನಸ್ಸು ಇದ್ದರೆ ಎರಡು ವರ್ಷದಿಂದ ಏನು ಮಾಡುತ್ತಿದ್ರಿ..? ನಗರಾಭಿವೃದ್ಧಿ ಪ್ರಾಧಿಕಾರದಿಂದ 500 ಕೋಟಿ ರೂ. ಕೊಡುತ್ತೇವೆ ಎಂದು ನಗರಾಭಿವೃದ್ಧಿ ಸಚಿವರು ಹೇಳುತ್ತಾರೆ. ಮುಖ್ಯಮಂತ್ರಿಗಳು 4 ಲಕ್ಷದ 91 ಕೋಟಿ ಸಾವಿರ ರೂ. ಸಾಲ ಮಾಡಿದ್ದಾರೆ. ಜಿ.ಎಸ್‌ಟಿ ಕಡಿಮೆಯಾದ ಮೇಲೆ ನಂದಿನ ತುಪ್ಪಕ್ಕೆ 90 ರೂಪಾಯಿ ಜಾಸ್ತಿ ಮಾಡಿದ್ದೀರಿ. ತುಪ್ಪದ ಬೆಲೆ ಹೆಚ್ಚು ಮಾಡಿದ ಮೇಲೆ ರೈತರು ಪೂರೈಕೆ ಮಾಡುವ ಹಾಲಿನ ಬೆಲೆಯನ್ನೂ ಹೆಚ್ಚು ಮಾಡಬೇಕಲ್ಲವೇ..? ಈ ಸರ್ಕಾರದಲ್ಲಿ ಬಡವರು, ಮಧ್ಯಮ ವರ್ಗದ ಜನ ಬದುಕುವುದು ಕಷ್ಟವಾಗಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಸಾರಾ ಮಹೇಶ್ ವಾಗ್ದಾಳಿ ನಡೆಸಿದರು.

**ಮೇಲ್ಸೇತುವೆ ಮುಂದೆ ಬೇಕಾಗುತ್ತದೆ**

ಸಂಸದ ಯದುವೀರ್ ಒಡೆಯರ್ ಅವರು ಪಾರಂಪರಿಕ ಕಟ್ಟಡಗಳನ್ನ ಮನದಲ್ಲಿಟ್ಟುಕೊಂಡು ಮೇಲ್ಸೇತುವೆಗಳ ನಿರ್ಮಾಣಕ್ಕೆ ವಿರೋಧ ಮಾಡಿದ್ದಾರೆ. ಸದ್ಯಕ್ಕೆ ಮೇಲ್ಸೇತುವೆ ಬೇಡ. ಮುಂದಕ್ಕೆ ಬೇಕಾಗಬಹುದು. ಸರ್ಕಾರ ಈಗ ಹೇಳಿದ ತಕ್ಷಣ ಕೆಲಸ ಶುರು ಮಾಡ್ತಾರಾ..? ಇರೋ ಕೆಲಸಗಳಿಗೆ ಸರ್ಕಾರದಿಂದ ದುಡ್ಡು ಕೊಡಲು ಆಗುತ್ತಿಲ್ಲ ಎಂದು ಸಾರಾ ಮಹೇಶ್ ತಿಳಿಸಿದರು.

ರಾಜ್ಯಸರ್ಕಾರಮಹಿಳೆಯರಿಗೆ2ಸಾವಿರಕೊಡ್ತಿದ್ದಾರೆ, ಇಲ್ಲದಿದ್ರೆ ಸಿಕ್ಕ ಸಿಕ್ಕಲ್ಲಿ ಜನ ಮುತ್ತಿಗೆ ಹಾಕುತ್ತಿದ್ದರು. ಬೆಂಗಳೂರಿನ ಜನ ಹೊಸ ರಸ್ತೆಗಳನ್ನು ಕೇಳುತ್ತಿಲ್ಲ, ಬದಲಿಗೆ ಗುಂಡಿಗಳನ್ನು ಮುಚ್ಚಿ ಎನ್ನುತ್ತಿದ್ದಾರೆ. ಆದರೆ ಈ ಸರ್ಕಾರದಿಂದ ಅದೂ ಸಾಧ್ಯವಾಗುತ್ತಿಲ್ಲ. ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಅವರ ಪಕ್ಷಕ್ಕೆ ಬಿಟ್ಟ ವಿಚಾರ. ನಾನು ರಾಜ್ಯ ರಾಜಕಾರಣದ ಚರ್ಚೆಯಿಂದ ದೂರವಿದ್ದೇನೆ. 5 ವರ್ಷ ನಾನೇ ಸಿಎಂ ಅಂತ ಸಿದ್ದರಾಮಯ್ಯ ಹೇಳಿದ್ದಾರೆ. ಅವರ ಹೈಕಮಾಂಡ್ ಏನು ಮಾಡುತ್ತೆ ಅಂತ ನೋಡೋಣ ಎಂದು ಸಾರಾ ಮಹೇಶ್ ತಿಳಿಸಿದರು.

### ಮೊದಲ ಅವಧಿಯಲ್ಲಿ ಸಿದ್ದುರಿಂದ ಒಳ್ಳೆಯ ಆಡಳಿತ

ಸಿಎಂ ಸಿದ್ದರಾಮಯ್ಯ ಅವರು ಮೊದಲ ಅವಧಿಯಲ್ಲಿ ಒಳ್ಳೆಯ ಆಡಳಿತ ಕೊಟ್ಟರು. ಆದರೆ ಈ ಅವಧಿಯಲ್ಲಿ ಸರಿಯಾಗಿ ಆಡಳಿತ ನಡೆಯುತ್ತಿಲ್ಲ. ಕೆಲವರು ಸಿದ್ದರಾಮಯ್ಯ ದೇವರಾಜ ಅರಸು ಮೀರಿಸಿದವರು ಎನ್ನುತ್ತಾರೆ. ಮೈಸೂರು ಮಹಾರಾಜರಿಗಿಂತ ಉತ್ತಮ ಆಡಳಿತ ಕೊಟ್ಟಿದ್ದಾರೆ ಎಂದು ಅವರ ಹಿಂಬಾಲಕರು ಹೇಳುತ್ತಿದ್ದಾರೆ. ನಾವು ಕಾಲೇಜು ದಿನಗಳಲ್ಲಿ ಸಿದ್ದರಾಮಯ್ಯ ಅವರನ್ನು ಬೆಂಬಲಿಸಿದ್ದೆವು. ಸಮಾಜವಾದಿ, ಜನ ನಾಯಕ ಎನ್ನುತ್ತಿದ್ದೆವು. ಈಗ ನೋಡಿದರೆ ಸಿದ್ದರಾಮಯ್ಯ ಏನು ಇಲ್ಲ. ಈಗ ಎಲ್ಲದರಲ್ಲೂ ರಾಜಿ ಆಗಿದ್ದಾರೆ. ಎರಡು ಬಾರಿ ಸಿಎಂ ಆಗಿ ದಾಖಲೆ ಮಾಡಿದ್ದಾರೆ, ಅತಿ ಹೆಚ್ಚು ಸಾಲ ಮಾಡಿದ ಸಿಎಂ ಎನ್ನುವ ದಾಖಲೆಯೂ ಅವರ ಹೆಸರಲ್ಲಿ ಇದೆ. ಅತಿ ಹೆಚ್ಚು ಬಾರಿ ಚಾಪರ್ ಉಪಯೋಗಿಸಿದ ಸಿಎಂ ಅನ್ನುವ ದಾಖಲೆ ಕೂಡ ಅವರ ಹೆಸರಿನಲ್ಲಿಯೇ ಇದೆ ಎಂದು ಸಾ.ರಾ.ಮಹೇಶ್ ಕಿಡಿಕಾರಿದ್ದಾರೆ.

# ಏಕೀಕರಣಕ್ಕಾಗಿ ನಮ್ಮ ಹಿರಿಯರ ದುಡಿಮೆ ಅಪಾರ

## ಮಹಾರಾಣಿ ಕಾಲೇಜಿನ ಕನ್ನಡ ರಾಜ್ಯೋತ್ಸವದಲ್ಲಿ ಅಣ್ಣಯ್ಯ ತೈಲೂರು ಅಭಿಮತ

ಮೈಸೂರು: ಬಾಂಬೆ, ಮದ್ರಾಸ್ ಪ್ರಾಂತ್ಯಗಳಲ್ಲಿ ಹರಡಿ ಹಚಿಚಿ ಹೋಗಿದ್ದ ಕನ್ನಡಿಗರನ್ನು, ಕರ್ನಾಟಕವನ್ನು ಏಕೀಕರಣ ಮಾಡುವಲ್ಲಿ ನಮ್ಮ ಹಿರಿಯವರು ಸಾಕಷ್ಟು ದುಡಿದಿದ್ದಾರೆ. ಅವರ ಶ್ರಮವನ್ನು ನಾವು ಗೌರವಿಸಬೇಕಿದೆ ಎಂದು ಸಹ ಪ್ರಾಧ್ಯಾಪಕರಾದ ಡಾ. ಅಣ್ಣಯ್ಯ ತೈಲೂರ್ ಅಭಿಪ್ರಾಯಪಟ್ಟಿದ್ದಾರೆ.

ನಗರದ ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಸಾಂಸ್ಕೃತಿಕ ವೇದಿಕೆ ವತಿಯಿಂದ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕನ್ನಡ ಮತ್ತು ಕರ್ನಾಟಕವನ್ನು ಕಟ್ಟುವ ಕಾಯಕದಲ್ಲಿ ಮುಂಚೂಣಿಯಲ್ಲಿ ಬರುವ ಹೆಸರು ಡಿಪ್ಯೂಟಿ ಚೆನ್ನಬಸಪ್ಪನವರು. ಇವರು ಕನ್ನಡದ ಉಳಿವಿಗಾಗಿ ಅನೇಕ ಕನ್ನಡ ಮಾಧ್ಯಮ ಶಾಲೆಗಳನ್ನು ಪ್ರಾರಂಭಿಸಿದರು. ಕರ್ನಾಟಕ ಏಕೀಕರಣದ ಕುರಿತು ಮಾತನಾಡುವಾಗ ಮರೆಯಲು ಸಾಧ್ಯವಿಲ್ಲದ ಮತ್ತೊಂದು ಹೆಸರು ಆಲೂರು ವೆಂಕಟರಾಯರು. ಇವರು ಕನ್ನಡ ಸಾಹಿತ್ಯ ಪರಿಷತ್ ಸ್ಥಾಪನೆ ಮಾಡುವಲ್ಲಿ ಪ್ರಮುಖ ಪಾತ್ರವಹಿಸಿದ್ದರು. ಕರ್ನಾಟಕ ಏಕೀಕರಣದ ಬಗ್ಗೆ ದಿಟ್ಟವಾಗಿ ಮಾತನಾಡಿದವರು ಕುವೆಂಪು. ಕನ್ನಡದ ನೂರಾರು ಪತ್ರಿಕೆಗಳು ಕರ್ನಾಟಕ ನಿರ್ಮಾಣಕ್ಕಾಗಿ ಏಕೀಕರಣಕ್ಕೆ ಧ್ವನಿ ಎತ್ತಿದವು. ಏಕೀಕರಣದ ಇತಿಹಾಸವನ್ನು ವಿದ್ಯಾರ್ಥಿನಿಯರಿಗೆ ಮನವರಿಕೆ ಮಾಡಿ ಕೊಟ್ಟವರು ಡಿ.ಎಸ್.ಕರ್ಕಿ. ಅವರು ಹೇಳಿ ದಂತೆ ಇಂದು ಮನೆ ಮನೆಗಳಲ್ಲಿ ಮನ ಮನಗಳಲ್ಲಿ ಕನ್ನಡದ ದೀಪವನ್ನು ಹಚ್ಚುವ ಅವಶ್ಯಕತೆ ಇದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ. ಅನಿತಾ ಎಂ.ಎಸ್. ಮಾತನಾಡಿದರು.

ವೇದಿಕೆಯಲ್ಲಿ ಕಾಲೇಜಿನ ಐಕ್ಯೂ ಎಸಿ ಸಂಯೋಜಕರಾದ ಡಾ. ಸಾಂಸ್ಕೃತಿಕ ವೇದಿಕೆಯ ಸಂಚಾಲಕರಾದ ಡಾ. ಭಾಸ್ಕರ್ ಕೆ.ಎಸ್. ಖಜಾಂಚಿ ಡಾ. ನಾಗವೇಣಿ ಟಿ., ಪತ್ರಾಂಕಿತ ವ್ಯವಸ್ಥಾಪಕರಾದ ವೆಂಕಟೇಶ್ ಕೆ. ಉಪಸ್ಥಿತರಿದ್ದರು. ಕಾಲೇಜಿನ ವಿದ್ಯಾರ್ಥಿನಿಯರು ಬೋಧಕ ಮತ್ತು ಆಡಳಿತ ವರ್ಗದವರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಕಾರ್ಯಕ್ರಮವನ್ನು ವಿದ್ಯಾರ್ಥಿನಿ ಮೋನಿಕ ನಿರೂಪಿಸಿದರು. ಅನನ್ಯ ಸ್ವಾಗತಿಸಿದರೆ, ಸಂಜನಾ ವಂದಿಸಿದರು.



ಮೈಸೂರಿನ ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಸಾಂಸ್ಕೃತಿಕ ವೇದಿಕೆ ವತಿಯಿಂದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ನಡೆಯಿತು. ಈ ವೇಳೆ ಸಹ ಪ್ರಾಧ್ಯಾಪಕರಾದ ಡಾ. ಅಣ್ಣಯ್ಯ ತೈಲೂರ್ ಮಾತನಾಡಿದರು.

# ಪಾದಯಾತ್ರೆ: ಕುಡಿಯುವ ನೀರಿನ ಸಮಸ್ಯೆಯದ್ದೇ ಸದ್ದು

## ಒಂಟಿಕೊಪ್ಪಲಿನ ಸಮಗ್ರ ಅಭಿವೃದ್ಧಿಗೆ ಶಾಸಕ ಕೆ. ಹರೀಶ್ ಗೌಡ ಸೂಚನೆ



ಮೈಸೂರುನಗರದ ಒಂಟಿಕೊಪ್ಪಲು ವ್ಯಾಪ್ತಿಯಲ್ಲಿ ಶಾಸಕ ಕೆ.ಹರೀಶ್ ಗೌಡ ಅವರು ಸಾರ್ವಜನಿಕರಿಂದ ಕುಂದುಕೊರತೆಗಳನ್ನು ಆಲಿಸಿದರು. ಈ ವೇಳೆ ನಗರ ಪಾಲಿಕೆ ಮಾಜಿ ಸದಸ್ಯರು, ಪಕ್ಷದ ಮುಖಂಡರು, ಪದಾಧಿಕಾರಿಗಳು, ಅಧಿಕಾರಿಗಳು ಇದ್ದರು.

ಮೈಸೂರು: ಚಾಮರಾಜ ವಿಧಾನ ಸಭಾ ಕ್ಷೇತ್ರದ ಶಾಸಕ ಕೆ. ಹರೀಶ್ ಗೌಡ ಅವರು ವಾರ್ಡ್ ನಂಬರ್ 22 ರ ಒಂಟಿಕೊಪ್ಪಲು ವ್ಯಾಪ್ತಿಯಲ್ಲಿ ನಗರ ಪಾಲಿಕೆ ಅಧಿಕಾರಿಗಳು ಹಾಗೂ ಇತರೆ ಇಲಾಖೆಯ ಅಧಿಕಾರಿಗಳೊಂದಿಗೆ ಪಾದಯಾತ್ರೆ ನಡೆಸಿದರು. ಈ ವೇಳೆ ಮೂಲ ಸೌಕರ್ಯಗಳಾದ ಕುಡಿಯುವ ನೀರು ಹಾಗೂ ಒಳಚರಂಡಿ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಪುಂಡರ ಹಾವಳಿ ತಪ್ಪಿಸಲು ಕಾಲೇಜು ಹಾಗೂ ಉದ್ಯಾನವನ ಭಾಗದಲ್ಲಿ ರಾತ್ರಿ ಗಸ್ತು ಹೆಚ್ಚಿಸುವಂತೆ ಸ್ಥಳದಲ್ಲಿದ್ದ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು. ಕಿರಿದಾದ ರಸ್ತೆಯಲ್ಲಿ ವಿದ್ಯುತ್ ಕಂಬಗಳುಅವೈಜ್ಞಾನಿಕವಾಗಿದ್ದು,ಅದನ್ನುಸ್ಥಳಾಂತರಗೊಳಿಸುವಂತೆ ಹೇಳಿದರು.

ಇದೇ ವೇಳೆ ಹಲವಾರು ಅಡ್ಡ ರಸ್ತೆಗಳ ಮಳೆ ನೀರು ಚರಂಡಿ ಹಳೆಯದಾಗಿದ್ದು, ಪೈಪ್ ಲೈನ್ ಅನ್ನು ಬದಲಿಸಲು ಪಾಲಿಕೆ ಅಭಿವೃದ್ಧಿ ಅಧಿಕಾರಿಗೆ ಸೂಚಿಸಿದರು. ಪಾದಯಾತ್ರೆಯ ನಂತರ ಶ್ರೀರಾಮ ಕಲ್ಯಾಣ ಮಂಟಪದಲ್ಲಿ ಸಾರ್ವಜನಿಕ ಸಭೆ ನಡೆಸಿದರು.

ಮಾಜಿ ಮಹಾಪೌರರಾದ ಬಿ .ಕೆ.ಪ್ರಕಾಶ್, ನಗರಪಾಲಿಕೆ ಮಾಜಿ ಸದಸ್ಯರಾದ ಎಂ.ರಮೇಶ್, ಭಾಗ್ಯ ಮಹದೇಶ್, ಬ್ಲಾಕ್ ಅಧ್ಯಕ್ಷ ರವಿ ಮಂಚೇಗೌಡನ ಕೊಪ್ಪಲು, ವಾರ್ಡ್ ಅಧ್ಯಕ್ಷ ಕುಮಾರ್, ಯುವ ಕಾಂಗ್ರೆಸ್ ಅಧ್ಯಕ್ಷರಾದ ನಿಶಾಂತ್ ಪಟೇಲ್, ಮುಖಂಡರಾದ ಪೈಲ್ವಾನ್ ಪ್ರಕಾಶ್, ಒಂಟಿಕೊಪ್ಪಲು ಗುರುರಾಜ್, ಜಗದೀಶ್, ಮಧು, ಮಹದೇವಸ್ವಾಮಿ, ಶ್ರೀಕಂಠು, ಶ್ರೀ ರಾಮ್, ಜಗದೀಶ್, ಪ್ರೇಮ್ ಕುಮಾರ್, ಸುಮಾ ನಾಗರಾಜ್, ಲಕ್ಷ್ಮೀ, ಟೆಂಟ್ ಹೌಸ್ ನಾಗರಾಜ್, ಮಂಜು, ಚರಣರಾಜ್, ಆದರ್ಶ್, ಯೋಗೇಶ್, ಶಂಭು, ವಿ.ವಿ ಸಿಂಡಿಕೇಟ್ ಸದಸ್ಯರಾದ ಮಹದೇಶ್, ಸಿಟಿ ಕೋ ಆಪರೇಟಿವ್ ಬ್ಯಾಂಕ್ ಅಧ್ಯಕ್ಷರಾದ ಜೆ.ಯೋಗೇಶ್, ರಾಜಣ್ಣ, ಕೃಪಾನಂದ ಸೇರಿದಂತೆ ಇನ್ನಿತರೆ ಮುಖಂಡರು, ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾಣೆಯಾದ ವ್ಯಕ್ತಿ ಪತ್ತೆಗೆ ಮನವಿ

ಮೈಸೂರು: ಸುಮಾರು 75 ವರ್ಷದ ವೆಂಕಟಪ್ಪ ಎಂಬುವವರು ಕಾಣೆಯಾಗಿದ್ದು, ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಚಹರೆ: ವೆಂಕಟಪ್ಪ. ಸುಮಾರು 75 ವರ್ಷ ವಯಸ್ಸಾಗಿದ್ದು, 5.2 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ಕೋಲು ಮುಖ, ಬಿಳಿ ಗಡ್ಡ, ಮೀಸೆ ಹಾಗೂ ತಲೆ ಕೂದಲು ಬಿಟ್ಟಿರುತ್ತಾರೆ. ಎಡಗೈನ ಹೆಬ್ಬರಳು ಇರುವುದಿಲ್ಲ, ಕಟ್ ಆಗಿರುತ್ತದೆ. ಮನೆಯಿಂದ ಹೊರ ಹೋಗುವಾಗ ಬಿಳಿ ಬಣ್ಣದ ತುಂಬು ತೋಳಿನ ಶರ್ಟ್, ನೀಲಿ ಬಣ್ಣದ ಚೆಕ್ಸ್ ಲುಂಗಿ, ಗ್ರೇ ಕಲರ್ ಟವಲ್, ನೀಲಿ ಬಣ್ಣದ ನಿಕ್ಕರ್ ಧರಿಸಿರುತ್ತಾರೆ. ಕಾಣೆಯಾದ ವ್ಯಕ್ತಿಯ ಬಗ್ಗೆ ಮಾಹಿತಿ ಕಂಡು ಬಂದಲ್ಲಿ ಮೈಸೂರು ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ:0821–2418612, ಮೈಸೂರು ಸೌತ್ ಪೊಲೀಸ್ ಠಾಣೆಯ ದೂ.ಸಂ:0821–2444955, 9480805045 ನ್ನು ಸಂಪರ್ಕಿಸಬಹುದಾಗಿದೆ.



ಮೈಸೂರು: ನಗರ ಲಷ್ಕರ್ ಪೊಲೀಸ್ ಠಾಣಾ ವ್ಯಾಪ್ತಿಯ ಗೀತಾ ರಾಮಮಂದಿರದಲ್ಲಿ ಉಪ ಪೊಲೀಸ್ ಆಯುಕ್ತರಾದ ಸುಂದರ್ ರಾಜ್ ನೇತೃತ್ವದಲ್ಲಿ ಜನಸಂಪರ್ಕ ಸಭೆ ನಡೆಯಿತು. ಸಭೆಯಲ್ಲಿ ಡಿಸಿಪಿ ಬಿಂದುಮಣಿ, ದೇವರಾಜ ಎಸಿಪಿ ಮತ್ತು ಲಷ್ಕರ್ ಠಾಣೆ ನಿರೀಕ್ಷಕರು, ಮೊಹಲ್ಲಾ ನಿವಾಸಿಗಳು ಉಪಸ್ಥಿತರಿದ್ದರು.

# ಸರ್ಕಾರದ ಸವಲತ್ತು ಅರ್ಹ ಮಕ್ಕಳಿಗೆ ತಲುಪುವಂತೆ ಮಾಡಿ

## ಚೆಲುವಾಂಬ ಆಸ್ಪತ್ರೆಗೆ ಭೇಟಿ ನೀಡಿ ಅಧಿಕಾರಿಗಳಿಗೆ ಸೂಚನೆ ನೀಡಿದ ಶಶಿಧರ್ ಕೂಸುಂಬೆ

ಮೈಸೂರು: ರಾಜ್ಯ ಸರಕಾರವು ಅಪೌಷ್ಟಿಕ ಮಕ್ಕಳ ಆರೈಕೆಗೆ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದು, ಸರಕಾರದ ಸವಲತ್ತು ಅರ್ಹ ಅಪೌಷ್ಟಿಕ ಮಕ್ಕಳಿಗೆ ತಲುಪುವಂತೆ ಅಧಿಕಾರಿಗಳು ಕ್ರಮವಹಿಸಿ ಎಂದು ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷ ಶಶಿಧರ್ ಕೂಸುಂಬೆ ಅವರು ಹೇಳಿದರು.

ಇಂದು ಕೆ. ಆರ್ ಆಸ್ಪತ್ರೆ ಆವರಣದಲ್ಲಿರುವ ಚೆಲುವಾಂಬ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಅಪೌಷ್ಟಿಕ ಮಕ್ಕಳ ಸಂಖ್ಯೆ ಕಡಿಮೆಯಾಗಬೇಕು ಹಾಗೂ ಗುರುತಿಸಲಾಗುವ ಅಪೌಷ್ಟಿಕ ಮಕ್ಕಳಿಗೆ ಸರಿಯಾದ ಆರೈಕೆ ಒದಗಿಸಿ ಅವರನ್ನು ಗುಣಮುಖರಾಗುವಂತೆ ನೋಡಿಕೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ 91 ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ, ಆದರೆ ಆಸ್ಪತ್ರೆಯಲ್ಲಿರುವ ವಾರ್ಡ್‌ಗಳಲ್ಲಿ ಒಂದು ಮಕ್ಕಳು ಕೂಡ ದಾಖಲಾಗಿಲ್ಲ. ಸರಕಾರ ನೀಡುತ್ತಿರುವ ಸವಲತ್ತು ಆ ಮಕ್ಕಳಿಗೆ ತಲುಪುತ್ತಿಲ್ಲ, ಇನ್ನೂ 3 ದಿನಗಳಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಸಭೆ ನಡೆಸಿ 91 ಮಕ್ಕಳನ್ನು ಗುರುತಿಸಿ ಪಾಳಿ ವ್ಯವಸ್ಥೆಯಲ್ಲಿ ಚಿಕಿತ್ಸೆ ನೀಡಿ ವರದಿ ನೀಡಬೇಕು. ಇಲ್ಲವಾದರೆ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕ್ರಮ ವಹಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಚಲುವಾಂಬ ಆಸ್ಪತ್ರೆಯಲ್ಲಿ ಅಳವಡಿಸಲಾಗಿರುವ ಮಕ್ಕಳ ಅಪೌಷ್ಟಿಕಪುನರ್ವಸತಿಕೇಂದ್ರಎಂಬಫಲಕವನ್ನುತೆಗೆದುಮಕ್ಕಳ ಅಪೌಷ್ಟಿಕ ಪುನರ್ ಚೇತನ ಘಟಕ ಎಂದು ನಾಮಫಲಕವನ್ನು ಅಳವಡಿಸುವಚಿತೆ ಇದೇ ವೇಳೆ ಅಧಿಕಾರಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಕುಮಾರಸ್ವಾಮಿ ಸೇರಿದಂತೆ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.



ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷ ಶಶಿಧರ್ ಕೂಸುಂಬೆ ಅವರು ಚೆಲುವಾಂಬ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಆರೋಗ್ಯ ಇಲಾಖೆ ಅಧಿಕಾರಿಗಳು ಇದ್ದರು.

## ಸಂಕ್ಷಿಪ್ತ ಸುದ್ದಿ

### ಅಂತರಾಷ್ಟ್ರೀಯ ದತ್ತು ಮಾಸಾಚರಣೆ

**ಮಂಡ್ಯ:** ಪ್ರತಿ ವರ್ಷದಂತೆ ಈ ವರ್ಷವೂ ಸಹ 2025ರ ನವೆಂಬರ್ ತಿಂಗಳಲ್ಲಿ ಅಂತರಾಷ್ಟ್ರೀಯ ದತ್ತು ಮಾಸಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಪ್ರತಿ ಮಗುವು ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಪ್ರತಿಯೊಂದು ಮಗುವಿನ ಹಕ್ಕು. ಮಗುವಿಗೆ ಅವಶ್ಯವಿರುವ ಪ್ರೀತಿ ಮತ್ತು ಆರೈಕೆಯನ್ನು ಕುಟುಂಬದ ವಾತಾವರಣವನ್ನು ಕಲ್ಪಿಸುತ್ತದೆ. ಈ ನಿಟ್ಟಿನಲ್ಲಿ ದತ್ತು ಪ್ರಕ್ರಿಯೆಯು ಅನಾಥ, ಪರಿತ್ಯಕ್ತ ಹಾಗೂ ಒಪ್ಪಿಸಲ್ಪಟ್ಟ ಮಕ್ಕಳ ಪುನರ್ವಸತಿಗೆ ನೆರವಾಗುವುದು ಮಕ್ಕಳ ನಿರ್ದೇಶನಾಲಯದ ಯೋಜನೆಯ ಉದ್ದೇಶವಾಗಿದೆ.

ಈ ವರ್ಷವೂ ನವೆಂಬರ್ ತಿಂಗಳನ್ನು ಅಂತರಾಷ್ಟ್ರೀಯ ದತ್ತು ಮಾಸಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಇದರ ಅಂಗವಾಗಿ ಪೋಷಕತ್ವ ಯೋಜನೆ, ಕಾನೂನು ಬದ್ಧ ದತ್ತು, ಕಾನೂನು ಬಾಹಿರ ದತ್ತು ಹಾಗೂ ಮಕ್ಕಳ ಮಾರಾಟ ಮಾಡುವುದು ಅಥವಾ ಕೊಳ್ಳುವುದು ಅಪರಾಧವಾಗಿದ್ದು ಇವುಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.

ಮಕ್ಕಳನ್ನು ಮಾರುವವರಿಗೆ ಹಾಗೂ ಕೊಳ್ಳುವವರಿಗೆ ಬಾಲನ್ಯಾಯ ಕಾಯ್ದೆ-2015 ಸೆಕ್ಷನ್ 80,81ರ ಅನ್ವಯ 5 ವರ್ಷಗಳ ಸೆರಮನೆ ವಾಸ ಹಾಗೂ ರೂ. 1 ಲಕ್ಷ ಗಳವರೆಗೆ ದಂಡ ವಿಧಿಸಬಹುದು. ಈ ಅಪರಾಧದಲ್ಲಿ ಆಸ್ಪತ್ರೆಯ ಸಿಬ್ಬಂದಿಗಳು ಶಾಮೀಲಾಗಿದ್ದರೆ 7 ವರ್ಷದವರೆಗೆ ಕಾರಾಗೃಹ ಶಿಕ್ಷೆ ಹಾಗೂ 1 ಲಕ್ಷ ದಂಡ ವಿಧಿಸಲಾಗಿದೆ.

ಸಾರ್ವಜನಿಕರ ಗಮನಕ್ಕೆ ಯಾವುದೇ ಅನಾಥ, ಪರಿತ್ಯಕ್ತ ಮಕ್ಕಳು ಕಂಡು ಬಂದಲ್ಲಿ ತಕ್ಷಣವೇ ಮಕ್ಕಳ ಸಹಾಯವಾಣಿ-1098/112 ಅಥವಾ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮಂಡ್ಯ ದೂರವಾಣಿ ಸಂ: 08232-223222ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅರ್ಜಿ ವಿಸ್ತರಣೆ

**ಮಂಡ್ಯ:** 2025 ನೇ ಸಾಲಿನ ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ವಿಕಲಚೇತನರ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಮಾಡಿದ ಸಂಸ್ಥೆಗಳಿಗೆ, ವಿಶೇಷ ಶಿಕ್ಷಕರಿಗೆ ಮತ್ತು ವ್ಯಕ್ತಿಗಳಿಗೆ ರಾಜ್ಯ ಮಟ್ಟದಲ್ಲಿ ಪ್ರಶಸ್ತಿಗಳನ್ನು ನೀಡುವ ಸಂಬಂಧ ಪ್ರಸ್ತಾವನೆಗಳನ್ನು ಸ್ವೀಕರಿಸಲು ನವೆಂಬರ್ 15 ರ ವರೆಗೂ ವಿಸ್ತರಿಸಲಾಗಿದೆ.

ಆದುದರಿಂದ ಸಂಬಂಧಪಟ್ಟ ವ್ಯಕ್ತಿ / ಸಂಸ್ಥೆಗಳು ತಮ್ಮ ಪ್ರಸ್ತಾವನೆಗಳನ್ನು ವಿಸ್ತರಿಸಲಾದ ದಿನಾಂಕದೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿಗಳು ದೂ.ಸಂ 08232-231090/239234 ಅನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ: ಅರ್ಜಿ ಆಹ್ವಾನ

ಮಂಡ್ಯ: ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ - 2025 ಲಿಖಿತ ಪರೀಕ್ಷೆಯನ್ನು ದಿನಾಂಕ 07.12.2025 ರಂದು ಭಾನವಾರದಂದು ಪೂರ್ವಾ ಹ್ನ ಮತ್ತು ಅಪರಾಹ್ನ ಎರಡು ಅವಧಿಗಳಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಔಒಖ ಮೂಲಕ ಲಿಖಿತ ಪರೀಕ್ಷೆಯನ್ನು ನಡೆಸಲಾಗುವುದು.

ದಿನಾಂಕ 23.10.2025 ರಿಂದ 09.11.2025 ರವರೆಗೆ ಅರ್ಹ ಅಭ್ಯರ್ಥಿಗಳು https://schooleducation.karnataka.gov.in ಗೆ ಲಾಗಿನ್ ಆಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಾ.ನಗರವನ್ನು ಆರ್ಥಿಕ ಕೇಂದ್ರವಾಗಿಸುವುದೇ ಗುರಿ

## ಕೆಡಿಪಿ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪನಾಗ್ ನುಡಿ

**ಚಾಮರಾಜನಗರ:** ಆರೋಗ್ಯ, ಪೌಷ್ಠಿಕತೆ, ಶಿಕ್ಷಣ ಮತ್ತು ಆರ್ಥಿಕತೆಯನ್ನು ಕೇಂದ್ರವಾಗಿಸಿಕೊಂಡು ಚಾಮರಾಜನಗರವನ್ನು ಅಭಿವೃದ್ಧಿ ಜಿಲ್ಲೆಯನ್ನಾಗಿ ರೂಪಿಸುವ ಗುರಿ ಜಿಲ್ಲಾಡಳಿತದ್ದಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಕೆಡಿಪಿ ಸಭಾಂಗಣದಲ್ಲಿ ಜಿಲ್ಲಾಡಳಿತ ಮತ್ತು ಸಿ.ಐ.ಐ (ಕಾನ್ಫೆಡರೇಶನ್ ಆಫ್ ಇಂಡಿಯನ್ ಇಂಡಸ್ಟ್ರಿ) ಸೆಂಟರ್ ಆಫ್ ಎಕ್ಸಲೆನ್ಸ್ ಆನ್ ಎಂಪ್ಲಾಯ್‌ಮೆಂಟ್ ಮತ್ತು ಲೈವ್‌ಲಿಹುಡ್ (ಸಿ.ಇ.ಎಲ್) ಸಂಯುಕ್ತಾಶ್ರಯದಲ್ಲಿ ಮೈಕ್ರೋ ಬಿಸಿನೆಸ್ ಎಕ್ಸಲೆನ್ಸ್ ಓರಿಯೆಂಟೇಷನ್ ಕಾರ್ಯಕ್ರಮದಲ್ಲಿ ಮಾತನಾಡಿದರು.

ಚಾಮರಾಜನಗರ ಜಿಲ್ಲೆಯು ನೈಸರ್ಗಿಕ ಸಂಪತ್ತು, ಅಗತ್ಯ ಮಾನವ ಸಂಪನ್ಮೂಲ ಸಾಮರ್ಥ್ಯವನ್ನು ಹೊಂದಿದೆ. ಮೈಕ್ರೋ ಬಿಸಿನೆಸ್ ಎಕ್ಸಲೆನ್ಸ್ ಯೋಜನೆಯ ಮೂಲಕ ಸಿ.ಐ.ಐ-ಸಿ.ಇ.ಎಲ್ ಜೊತೆಗೂಡಿ ಉದ್ಯಮಿಗಳಿಗೆ ಅಗತ್ಯ ಮಾರ್ಗದರ್ಶನ ಮತ್ತು ಸಾಮರ್ಥ್ಯವೃದ್ಧಿ ನೆರವು ನೀಡಲಾಗುವುದು ಎಂದು ತಿಳಿಸಿದರು.

ಸರ್ಕಾರದ ವಿವಿಧ ಉದ್ಯಮ ಸಹಾಯ ಯೋಜನೆಗಳು, ಹಣಕಾಸು, ತೆರಿಗೆ, ಜಿಎಸ್.ಟಿ ಮುಂತಾದ ವಿಷಯಗಳ ಬಗ್ಗೆ ಜಾಗೃತಿ ಮೂಡಿಸಲು ಸಿ.ಐ.ಐ-ಸಿ.ಇ.ಎಲ್ ಪ್ರಮುಖ ಪಾತ್ರವಹಿಸಲಿದೆ. ಉದ್ಯಮಿಗಳ ಅಭಿವೃದ್ಧಿ ವೇದಿಕೆಗೆ ಉದ್ಯಮಿಗಳು




ಸೇರ್ಪಡೆಯಾಗಬೇಕೆಂದು ಕರೆ ನೀಡಿದರು.

ಸಿ.ಐ.ಐ ಕರ್ನಾಟಕ ಎಂ.ಎಸ್.ಎಂ.ಇ ಪ್ಯಾನೆಲ್‌ನ ಸದಸ್ಯ ಕಾರ್ಯದರ್ಶಿಗಳಾದ ಸ್ಯಾಮ್ ಚೆರಿಯನ್ ಅವರು ಮಾತನಾಡಿ ಚಾಮರಾಜನಗರ ಜಿಲ್ಲೆಯ ಪ್ರಗತಿಪರ ಆಡಳಿತ ಮತ್ತು ಕ್ಷಿಪ್ರ ಅಭಿವೃದ್ಧಿಯ ಪ್ರಯತ್ನಗಳಂತಹ ಕ್ರಮಗಳು ಹೆಚ್ಚಿನ ಕೈಗಾರಿಕೆಗಳನ್ನು ಜಿಲ್ಲೆಗೆ ಆಕರ್ಷಿಸುತ್ತವೆ ಎಂದರು.

ನಾಗರಾಜ ಗರ್ಗೇಶ್ವರಿ ಅವರು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರಿಗೆ ಸಿ.ಎಸ್.ಆರ್ ಸಹಯೋಗ ಪತ್ರವನ್ನು ಸಲ್ಲಿಸಿದರು. ಯೋಜನೆಯಡಿ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಇಂಟರಾಕ್ಟಿವ್ ಲನಿರ್‌ಂಗ್ ಉಪಕರಣಗಳ ಸ್ಥಾಪನೆ, ಮಹಿಳೆಯರ ಆರೋಗ್ಯ ಸ್ವಚ್ಛತೆಯಿಗಾಗಿ ಪಿಂಕ್ ಶೌಚಾಲಯ ನಿರ್ಮಾಣ ಕೈಗೊಳ್ಳಲಾಗುತ್ತದೆ. ಈ ಸಂಬಂಧ 1.06 ಕೋಟಿ ಮೊತ್ತದ ಯೋಜನೆಗಳಿಗೆ ಸಿಎಆರ್ ಸಹಯೋಗಕ್ಕಾಗಿ ಜಿಲ್ಲಾಧಿಕಾರಿಗಳಿಗೆ 1.06 ಕೋಟಿ ಮೌಲ್ಯದ ಕೊಡುಗೆ ಬದ್ಧತೆಯ ಪತ್ರವನ್ನು ಸಲ್ಲಿಸಲಾಯಿತು.

> ಚಾಮರಾಜನಗರದಲ್ಲಿ ಉದ್ಯಮ ಕ್ಷೇತ್ರದ ಅವಕಾಶಗಳು ಹೆಚ್ಚುತ್ತಿದೆ. ಡಿಜಿಟಲ್ ಮಾರ್ಕೆಟಿಂಗ್, ಮಾರಾಟ ಮತ್ತು ಉದ್ಯಮ ನಿರ್ವಹಣೆಯಲ್ಲಿ ಉದ್ಯಮಿಗಳು ತಮ್ಮ ಕೌಶಲ್ಯಗಳನ್ನು ಬಲಪಡಿಸಿಕೊಳ್ಳಬೇಕು.
>
> **- ನಾಗರಾಜ ಗರ್ಗೇಶ್ವರಿ,**
> ಸಿ.ಐ.ಐ ಅಧ್ಯಕ್ಷ, ಮೈಸೂರು

ಸಣ್ಣ ಉದ್ದಿಮೆದಾರರಿಗೆ ನೆರವಾಗುವ ನಿಟ್ಟಿನಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ 200ಕ್ಕೂ ಹೆಚ್ಚು ಉದ್ಯಮಿಗಳು ಮತ್ತು ಉದ್ಯಮ ಆಸಕ್ತರು ಭಾಗವಹಿಸಿದ್ದರು.

ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಉಪ ನಿರ್ದೇಶಕರಾದ ದೊರೈರಾಜ್, ಸಹಾಯಕ ನಿರ್ದೇಶಕರಾದ ವಿಜಯ್ ಕುಮಾರ್, ಸಿ.ಐ.ಐ-ಸಿ.ಇ.ಎನ ಶಿವೇಕ್ ಗುರುಬರಣ್, ಜಿಲ್ಲಾ ಸಿ.ಎಸ್.ಆರ್ ಸಮಾಲೋಚಕರಾದ ರಕ್ಷಿತಾ, ಜಿಲ್ಲಾ ಇ-ಆಡಳಿತ ಸಮಾಲೋಚಕರಾದ ಮಧುಕೇಶ್, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸವಿತಾ ಸಮುದಾಯದ ಬಗ್ಗೆ ಅಸಂವಿಧಾನಿಕ ಪದ ಬಳಕೆ

## ಸುದ್ದಿಗೋಷ್ಠಿಯಲ್ಲಿ ಮಾಜಿ ಸಚಿವ ಸಿ.ಟಿ.ರವಿ ವಿರುದ್ಧ ಕ್ರಮಕ್ಕೆ ಆಗ್ರಹ



**ಚಾಮರಾಜನಗರ:** ಸವಿತಾ ಸಮುದಾಯದ ಬಗ್ಗೆ ಅಸಂವಿಧಾನಿಕ ಪದ ಬಳಕೆ ಮಾಡಿರುವ ಬಿಜೆಪಿಯ ಮಾಜಿ ಸಚಿವ ಸಿ.ಟಿ.ರವಿ ವಿರುದ್ಧ ಸೂಕ್ತ ಕಾನೂನು ಕ್ರಮವಹಿಸಬೇಕು ಎಂದು ಕಾಂಗ್ರೆಸ್ ಪಕ್ಷದ ಹಿಂದುಳಿದ ವರ್ಗಗಳ ವಿಭಾಗದ ಜಿಲ್ಲಾಧ್ಯಕ್ಷ ಚೇತನ್ ಕುಮಾರ್ ಆಗ್ರಹಿಸಿದರು.

ಸಾರ್ವಜನಿಕ ಜೀವನದಲ್ಲಿ ಇರುವ ವ್ಯಕ್ತಿಯೋರ್ವ ಒಂದು ಸಮುದಾಯದ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವುದು ಖಂಡನೀಯ. ನಾಲಗೆ ಹರಿಬಿಟ್ಟ ನಂತರ ಕ್ಷಮೆ ಕೇಳುವುದು ಸರಿಯಲ್ಲ. ಮುಂದಿನ ದಿನಗಳಲ್ಲಿ ಈ ರೀತಿಯ ಹೇಳಿಕೆ ನೀಡದಂತೆ ಸಿ.ಟಿ.ರವಿ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಸುದ್ದಿಗೋಷ್ಠಿಯಲ್ಲಿ ಒತ್ತಾಯಿಸಿದರು.

ಸಿ.ಟಿ.ರವಿ ಅವರ ಹೇಳಿಕೆಯಿಂದ ಸವಿತಾ ಸಮುದಾಯಕ್ಕೆ ನೋವಾಗಿದೆ. ಬೇರೆ ಸಮುದಾಯವನ್ನು ತೇಜೋವದೆ ಮಾಡುವುದು ಸರಿಯಲ್ಲ. ಸಿ.ಟಿ.ರವಿ ವಿರುದ್ಧ ಸೂಕ್ತ ಕ್ರಮ ಜರುಗಿಸದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಪ್ರತಿಭಟನೆ ಮಾಡುವುದಾಗಿ ಎಚ್ಚರಿಸಿದರು.

ಸವಿತಾ ಸಮುದಾಯದ ಮುಖಂಡ ಚಿನ್ನಸ್ವಾಮಿ ಮಾತನಾಡಿ, ಬೇರೆ ಯಾರನ್ನೋ ಬೈಯಲು ಹೋಗಿ ಸವಿತಾ ಸಮಾಜವನ್ನು ನಿಂದನೆ ಮಾಡಿರುವುದು ಸರಿಯಲ್ಲ. ಕೂಡಲೇ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಸಿ.ಟಿ.ರವಿ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಬೇಕು ಎಂದರು.ಸವಿತಾ ಸಮುದಾಯವನ್ನು ನಿಂದನೆ ಮಾಡಿರುವ ಸಿ.ಟಿ.ರವಿ ವಿರುದ್ಧ ಸರ್ಕಾರ ಸೂಕ್ತ ಕ್ರಮ ಜರುಗಿಸಬೇಕು. ಇಲ್ಲದಿದ್ದರೆ ಸಿ.ಟಿ.ರವಿ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆ ಮಾಡುವುದಾಗಿ ಎಚ್ಚರಿಕೆ ನೀಡಿದರು. ಮುಖಂಡರಾದ ಗೋವಿಂದ, ಕೃಷ್ಣವೇಣಿ, ರಾಜು, ನಾಗರಾಜು, ವರದಶೆಟ್ಟಿ, ಚೆನ್ನೇಗೌಡ, ಶ್ರೀಕಂಠಸ್ವಾಮಿ ಇದ್ದರು.

# ಯಳಂದೂರು: ಕಸಾಪದಿಂದ ರಾಮೇಗೌಡರಿಗೆ ಸನ್ಮಾನ



**ಯಳಂದೂರು:** ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ತಾಲ್ಲೂಕಿನ ಬಿಳಿಗಿರಿರಂಗನಬೆಟ್ಟದ ಸೋಲಿಗ ಸಮುದಾಯದ ರಾಮೇಗೌಡ ಅವರನ್ನು ಜಿಲ್ಲಾ ಕಸಾಪ ವತಿಯಿಂದ ಸನ್ಮಾನಿಸಲಾಯಿತು.

ಕಸಾಪ ಜಿಲ್ಲಾಧ್ಯಕ್ಷ ಶೈಲಕುಮಾರ್ ನೇತೃತ್ವದಲ್ಲಿ ರಾಮೇಗೌಡರಿಗೆ ಸನ್ಮಾನಿಸಿ ಅಭಿನಂದಿಸಲಾಯಿತು. ಶೈಲಕುಮಾರ್ ಮಾತನಾಡಿ, ರಾಮೇಗೌಡರಿಗೆ ಪರಿಸರ ವಿಭಾಗದಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪಡೆದಿರುವುದು ಸಂತಸದ ವಿಚಾರವಾಗಿದ್ದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಕಾಡು, ಪ್ರಾಣಿ, ಸಸ್ಯ ಸಂಕುಲಗಳು ಜೀವ ಜಗತ್ತಿಗೆ ಅನಿವಾರ್ಯವಾಗಿದೆ. ಕಾಡು ಸಸ್ಯಗಳಲ್ಲಿ ಅನೇಕ ಜೀವಾಮೃತಗಳಿವೆ. ಇದನ್ನು ಸಂರಕ್ಷಿಸಿಸುವ ಕೆಲಸದಲ್ಲಿ ರಾಮೇಗೌಡರು ನಿರತರಾಗಿದ್ದು ಅವರ ಕಾಯಕ ಹೀಗೆ ಮುಂದುವರಿಯಲಿ ಎಂದು ಆಶಿಸಿದರು.

ಲಕ್ಕೂರು ರಾಜಣ್ಣ, ಡಾ.ರಾಜೇಶ್ ನಾಯಕ, ಪತ್ರಕರ್ತ ಮಣಿಕಂಠ ನಾಯಕ್, ಶಿವುನಾಯಕ, ಗ್ರಾಪಂ ಮಾಜಿ ಅಧ್ಯಕ್ಷ ಪ್ರತೀಪ್ ಕುಮಾರ್ ಸೇರಿದಂತೆ ಇತರರಿದ್ದರು.

# ಗುಂಡ್ಲುಪೇಟೆ: ಬಸ್ ವ್ಯವಸ್ಥೆಗಾಗಿ ರೈತರ ಧರಣಿ

**ಗುಂಡ್ಲುಪೇಟೆ:** ಪಟ್ಟಣದ ತಾಲೂಕು ಕಚೇರಿ ಮುಂದೆ ರೈತರು ನಡೆಸುತ್ತಿರುವ ಅಹೋ ರಾತ್ರಿ ಧರಣಿಗೆ ಶಾಲಾ ವಿದ್ಯಾರ್ಥಿಗಳು ಬೆಂಬಲ ಸೂಚಿಸಿ, ಗ್ರಾಮೀಣ ಭಾಗಕ್ಕೆ ಸಮರ್ಪಕ ಸಾರಿಗೆ ಬಸ್ ವ್ಯವಸ್ಥೆ ಕಲ್ಪಿಸಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸಿದರು.

ಧರಣಿ ಸ್ಥಳದಲ್ಲಿ ರೈತ ಸಂಘಟನೆ ಜಿಲ್ಲಾಧ್ಯಕ್ಷ ಶಿವಪುರಮಹದೇವಪ್ಪ ಮಾತನಾಡಿ, ತಾಲೂಕಿನ ಮಲ್ಲಯ್ಯನಪುರ, ಪುತ್ತನಪುರ, ಮುಂಟೀಪುರ, ಕಬ್ಬಹಳ್ಳಿ, ಪಡುಗೂರು ಇತರೆ ಗ್ರಾಮಗಳಿಗೆ ಸಕಾಲಕ್ಕೆ ಬಸ್ ಸೌಲಭ್ಯವಿಲ್ಲ. ಇದರಿಂದ ಸಾರ್ವಜನಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗಿದೆ. ಗುಂಡ್ಲುಪೇಟೆ ಟೌನ್‌ನಗೆ ಹತ್ತಿರ ಇರುವ ಚಿಕ್ಕತುಪ್ಪೂರು ಸರಕಾರಿ ಆದರ್ಶ ವಿದ್ಯಾಲಯ ಶಾಲೆಗೆ ಈಗಾಗಲೇ ಹಾಕಿರುವ ಒಂದು ಬಸ್ ಸಂಚಾರ ಸಾಲುತ್ತಿಲ್ಲ. ಶಾಲಾ ಮಕ್ಕಳು ಹಾಗೂ ಕಾಲೇಜು ವಿದ್ಯಾರ್ಥಿಗಳು ಪರದಾಡುವಂತಾಗಿದೆ. ಆದ್ದರಿಂದ ಈ ಶಾಲೆಗೆ ಕೂಡಲೇ ಹೆಚ್ಚುವರಿ ಬಸ್‌ನ್ನು ಹಾಕಿ ಅನುಕೂಲ ಮಾಡಿಕೊಡಬೇಕು. ಕೆಲವು ಮಾರ್ಗಗಳ ಚಾಲಕ ಕಂ ನಿರ್ವಾಹಕರು ಪಾಸ್ ಹೊಂದಿರುವ ಮಕ್ಕಳನ್ನು ಬಸ್ ಹತ್ತಿಸದೇ ನಿರ್ಬಂಧಿಸುತ್ತಿರುವ ಆರೋಪ ಇದೆ. ತಾಲೂಕಿನ ಗ್ರಾಮಗಳಿಗೆ ಬಸ್ಸಿನ ಸಮಸ್ಯೆಯಿರುವ ರೂಟ್‌ಗೆ ತಾವು ಭೇಟಿ ಮಾಡಿ, ಪರಿಶೀಲಿಸಿ ಕೂಡಲೇ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಸಾರಿಗೆ ಬಸ್ ಘಟಕದ ವ್ಯವಸ್ಥಾಪಕ ತ್ಯಾಗರಾಜು ಅವರಿಗೆ ಒತ್ತಾಯಿಸಿದರು.

ರೈತ ಮುಖಂಡರಾದ ಮಲ್ಲಯ್ಯನಪುರ ಶಿವಣ್ಣ, ಶಿವಮಲ್ಲು, ನಾಗರಾಜು, ಪ್ರವೀಣ್, ಕಬ್ಬಳ್ಳಿ ಆಚಾರ್, ರಘು, ಮುಂಟೀಪುರ ಮಹದೇವಸ್ವಾಮಿ, ಸಂತೋಷ್, ಬಸವರಾಜು ವಿದ್ಯಾರ್ಥಿಗಳು ಹಾಜರಿದ್ದರು.



# ಅಂಬೇಡ್ಕರ್, ಬುದ್ಧ ವಿಗ್ರಹ ವಿರೂಪ: ಕ್ರಮಕ್ಕೆ ಆಗ್ರಹ



**ಚಾಮರಾಜನಗರ:** ತಾಲೂಕಿನ ಜ್ಯೋತಿಗೌಡನಪುರ ಗ್ರಾಮದಲ್ಲಿ ಇತ್ತೀಚೆಗೆ ಅಂಬೇಡ್ಕರ್ ಭಾವಚಿತ್ರವಿರುವ ಫ್ಲೆಕ್ಸ್ ಹಾಗೂ ಬುದ್ಧನ ವಿಗ್ರಹ ವಿರೂಪಗೊಳಿಸಿರುವ ಘಟನೆಗೆ ಸಂಬಂಧಿಸಿದಂತೆ ಓರ್ವನನ್ನು ಬಂಧಿಸಿದ್ದು, ಇದರ ಹಿಂದೆ ಕಾಣದ ಕೈಗಳ ಕೈವಾಡವಿರುವ ಶಂಕೆ ಇದೆ. ಹೀಗಾಗಿ ಉನ್ನತ ತನಿಖೆ ನಡೆಸಲು ಕ್ರಮವಹಿಸಬೇಕು ಎಂದು ಸಾಹಿತಿ ಮಂಜು ಕೋಡಿಉಗನೆ ಒತ್ತಾಯಿಸಿದರು.

ಗ್ರಾಮದಲ್ಲಿ ನಡೆದಿರುವ ಕೃತ್ಯವನ್ನು ಓರ್ವ ವ್ಯಕ್ತಿಯಿಂದ ಮಾಡಲು ಸಾಧ್ಯವಿಲ್ಲ. ಆದ್ದರಿಂದ ಇದರ ಹಿಂದೆ ಹಲವರ ಕೈವಾಡವಿದ್ದು ಸರಿಯಾಗಿ ತನಿಖೆ ನಡೆಸಬೇಕು. ಆ ಮೂಲಕ ತಪ್ಪಿತಸ್ಥರನ್ನು ಬಂಧಿಸಬೇಕು ಎಂದು ಸುದ್ದಿಗೋಷ್ಠಿಯಲ್ಲಿ ಆಗ್ರಹಿಸಿದರು.ಗ್ರಾಮದಲ್ಲಿ ಬುದ್ಧನ ಪ್ರತಿಮೆ ಮರು ಸ್ಥಾಪನೆ ಮಾಡಬೇಕು. ಅಲ್ಲದೇ ಸಿಸಿ ಕ್ಯಾಮರಾ ಅಳವಡಿಸಿ ಸೂಕ್ತ ರಕ್ಷಣೆ ನೀಡಬೇಕು ಎಂದರು.

ಮುಖಂಡ ಶಿವರಾಜು ಮಾತನಾಡಿ, ಚಾ.ನಗರ ಬಂದ್ ಯಶಸ್ವಿ ಹಾಗೂ ಬದನಗುಪ್ಪೆ ಗ್ರಾಮಸ್ಥರ ಪಾದಯಾತ್ರೆಯನ್ನು ಬೇರೆಡೆ ಗಮನ ಸೆಳೆಯಲು ಈ ರೀತಿಯ ಕೃತ್ಯ ನಡೆಸಿರುವ ಶಂಕೆ ಇದೆ. ಆದ್ದರಿಂದ ಉನ್ನತ ಮಟ್ಟದ ತನಿಖೆ ನಡೆಸಿ ಆರೋಪಿಗಳನ್ನು ಬಂಧಿಸಿ ಗಡಿಪಾರು ಮಾಡಬೇಕು ಎಂದು ಆಗ್ರಹಿಸಿದರು.

ಮುಖಂಡ ನಮ್ಮನೆ ಪ್ರಶಾಂತ್ ಮಾತನಾಡಿ, ಜ್ಯೋತಿಗೌಡನಪುರ ಘಟನೆ ಸಂಬಂಧ ನಡೆಸಿರುವ ತನಿಖೆ ತೃಪ್ತಿ ನೀಡಿಲ್ಲ. ಘಟನೆ ಹಿಂದೆ ಹಲವರ ಕೈವಾಡವಿರುವ ಶಂಕೆ ಇದ್ದು ಸಿಐಡಿ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಗ್ರಾಪಂ ಸದಸ್ಯ ಮಹದೇವಸ್ವಾಮಿ ಇದ್ದರು.

# ರಾಷ್ಟ್ರಮಟ್ಟದ ಬೆಳಕು ರಾಜ್ಯೋತ್ಸವ ಪ್ರಶಸ್ತಿಗೆ ವಿ.ಮಯೂರ್ ಆಯ್ಕೆ

**ಚಾಮರಾಜನಗರ:** ಬೆಳಕು ಸಾಹಿತ್ಯ, ಶೈಕ್ಷಣಿಕ, ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಕೊಡಲ್ಪಡುವ ರಾಷ್ಟ್ರಮಟ್ಟದ ಬೆಳಕು ರಾಜ್ಯೋತ್ಸವ ಪ್ರಶಸ್ತಿಗೆ ಗಾಯಕರು, ಕೆಇಬಿ ಕಿರಿಯ ಇಂಜಿನಿಯರ್, ಸೆಸ್ಕಾಂನ ಸಾಂಸ್ಕೃತಿಕ ಕಲಾವೇದಿಕೆ ಜಿಲ್ಲಾಧ್ಯಕ್ಷರಾದ ವಿ.ಮಯೂರ್ ಗುಂಡ್ಲುಪೇಟೆ ಭಾಜನರಾಗಿದ್ದಾರೆ.

ಬೆಂಗಳೂರು ಚಾಮರಾಜಪೇಟೆ ಅಕ್ಕಮಹಾದೇವಿ ಸಭಾಂಗಣದಲ್ಲಿ ಬೆಳಕು ಸಾಹಿತ್ಯ, ಶೈಕ್ಷಣಿಕ, ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ನ.30 ರಂದು ನಡೆಯುವ ರಾಷ್ಟ್ರಮಟ್ಟದ ಬೆಳಕು ಸಂಭ್ರಮದಲ್ಲಿ ವಿ.ಮಯೂರ್ ಗುಂಡ್ಲುಪೇಟೆ ಅವರಿಗೆ ರಾಷ್ಟ್ರಮಟ್ಟದ ಬೆಳಕು ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಸಂಗೀತ ಕ್ಷೇತ್ರದಲ್ಲಿ ಮಾಡುತ್ತಿರುವ ಸೇವೆಗಾಗಿ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಅಣ್ಣಪ್ಪ ಮೇಟಿಗೌಡ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡವನ್ನು ಉಳಿಸಿಕೊಳ್ಳುವ ಜವಾಬ್ದಾರಿ ನಮ್ಮದು

## ಕನ್ನಡ ರಾಜ್ಯೋತ್ಸವ ಆಚರಣೆಯಲ್ಲಿ ವಿಶಾಲಕ್ಷಿ ನುಡಿ

**ಚಾಮರಾಜನಗರ:** ಕನ್ನಡನಾಡಿನ ಸಂಸ್ಕೃತಿ, ಪರಂಪರೆಯನ್ನು ಉಳಿಸಿ-ಬೆಳಸಿಕೊಂಡು ಹೋಗುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಎಂದು ಶಿಕ್ಷಕಿ. ವಿಶಾಲಾಕ್ಷಿ ಹೇಳಿದರು.

ನಗರದ ರೋಟರಿ ಭವನದಲ್ಲಿ ರೋಟರಿ ಸಂಸ್ಥೆ ವತಿಯಿಂದ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕನ್ನಡ ಭಾಷೆ ಕುರಿತು ವಿಶೇಷ. ಉಪನ್ಯಾಸ ನೀಡಿದರು. ಒಂದು ಕಡೆ ಸ್ವಾತಂತ್ರ್ಯ ಹೋರಾಟಕ್ಕೆ ಶ್ರಮಿಸುತ್ತಿದ್ದಾರೆ ಮತ್ತೊಂದು ಕ್ರಿ.ಶ.

1890ರಲ್ಲಿ ಸ್ವಾತಂತ್ರ್ಯಪೂರ್ವದಿಂದಲ್ಲೇ ಕರ್ನಾಟಕ ಏಕೀಕರಣದ ಚಳವಳಿ ನಡೆಯಲು ಪ್ರಾರಂಭವಾಗಿದೆ ಅದರಲ್ಲಿ ಅಗ್ರಮಾನ್ಯರು ಆಲೂರು ವೆಂಕಟರಾಯರು. ಅವರನ್ನು ಕರ್ನಾಟಕದ ಕುಲ ಪುರೋಹಿತರು ಎಂದು ಕರೆಯುತ್ತಾರೆ. ನಂತರ ರಾಮ ಚಂದ್ರ ದೇಶ ಪಾಂಡೆಯವರು ಸಿರಿಗನ್ನಡಂ ಗಲ್ಲೆ, ಸಿರಿ ಗನ್ನಡಂ ಬಾಳ್ಗೆ ಘೋಷಣೆ ತಂದು ಕನ್ನಡಕ್ಕೆ ಒಂದು ಅಡಿಪಾಯ ಹಾಕಿದ್ದಾರೆ ಎಂದರು.

1956 ರಲ್ಲಿ. ಕರ್ನಾಟಕ ಏಕೀಕರಣವಾಗುತ್ತದೆ. ಅದಕ್ಕೂ ಮೊದಲು ಕರ್ನಾಟಕ 5 ಭಾಗಗಳಾಗಿ ವಿಭಜನೆ ಆಗಿರುತ್ತದೆ. ಮೈಸೂರು ರಾಜ್ಯವು ಕರ್ನಾಟಕ ರಾಜ್ಯವಾಯಿತು. 1973 ನ.1 ರಲ್ಲಿ ಕನ್ನಡ ಭಾಷೆ ಆಡಳಿತ ಭಾಷೆ ಆಗುತ್ತದೆ. ಕನ್ನಡನಾಡು ತನ್ನದೆಯಾದ ವೈವಿಧ್ಯ ತೆಯನ್ನು ಕಂಡುಕೊಂಡಿದೆ. ಇಡೀ ಭಾರತ ದೇಶವನ್ನು ವೈವಿಧ್ಯತೆಯಲ್ಲಿ ಏಕತೆಯುಳ್ಳ ದೇಶ ಎಂದು ಕರೆದರೆ ಅದರಲ್ಲೂ ನಮ್ಮ ಕರ್ನಾಟಕ ಅದಕ್ಕೆ ಹೊರತಾಗಿಲ್ಲ. ಹಲವಾರು ವೈವಿಧ್ಯತೆಗಳ ಒಂದು ನಾಡಾಗಿದ್ದು, ಕನ್ನಡ ಭಾಷೆ ಕ್ರಿಸ್ತ ಪೂರ್ವದಿಂದಲ್ಲೇ ಬಳಕೆಯಲ್ಲಿದ್ದು, ಇಡೀ ದೇಶಕ್ಕೆ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದೆ. ನಾಡಿನ ಸಂಸ್ಕೃತಿ. ಪರಂಪರೆಯನ್ನು ಉಳಿಸಿ-ಬೆಳಸಿಕೊಂಡು ಹೋಗುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.



**ಚಾಮರಾಜನಗರ ರೋಟರಿ ಭವನದಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಶಿಕ್ಷಕಿ ವಿಶಾಲಾಕ್ಷಿ ಕನ್ನಡ ಭಾಷೆ ಕುರಿತು ವಿಶೇಷ ಉಪನ್ಯಾಸ ನೀಡಿದರು.**

ಅಧ್ಯಕ್ಷತೆ ವಹಿಸಿದ್ದ ರೋಟರಿ ಸಂಸ್ಥೆ ಅಧ್ಯಕ್ಷ ಕಾಗಲವಾಡಿ ಚಂದ್ರು ಮಾತನಾಡಿ, ಕನ್ನಡವನ್ನು ಬೆಳೆಸಿ-ಉಳಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಕನ್ನಡ ನಾಡು, ನುಡಿ, ಜಲ ಸಂರಕ್ಷಣೆಗೆ ಶ್ರಮಿಸೋಣ. 5 ಭಾಗಗಳಾಗಿ ವಿಭಜನೆಯಾಗಿದ್ದ ಕರ್ನಾ ಟಕವನ್ನು ಒಂದುಗೂಡಿಸಿದ ದಿನವನ್ನು ಕನ್ನಡ ರಾಜ್ಯೋತ್ಸವವಾಗಿ ಆಚರಣೆ ಮಾಡಲಾಗುತ್ತದೆ. ಇದು ಕನ್ನಡಿಗರ ಹೆಮ್ಮೆಯ ಹಬ್ಬವಾಗಿದೆ ಕನ್ನಡ ನಮ್ಮೆಲ್ಲರ ಉಸಿರು ಆಗಿದೆ ಎಂದರು.

ಹರದನಹಳ್ಳಿಯ ನಟರಾಜು ಕನ್ನಡಗೀತೆ ಗಳ ಗಾಯನ ಮುದ ನೀಡಿತು. ಕಾರ್ಯ ಕ್ರಮದಲ್ಲಿ ರೋಟರಿ ಸಂಸ್ಥೆಯ ಸಂಸ್ಥಾ ಪಕ ಸದಸ್ಯರಾದ ಜಿ.ಆರ್.ಅಶ್ವಥ್ ನಾರಾಯಣ್, ಸಿ.ವಿ.ಶ್ರೀನಿವಾಸಶೆಟ್ಟಿ, ಕಾರ್ಯದರ್ಶಿ ಕೆಂಪನಮರ ಸಿದ್ಧರಾಜು ಹಾಜರಿದ್ದರು.

# ಸುಖಿ ರಾಜ್ಯಕ್ಕಾಗಿ ಬೌದ್ಧ ವಿಹಾರ ಬೇಕು

## ಭಿಕ್ಕು ನಿವಾಸ ಗುದ್ದಲಿಪೂಜೆಯಲ್ಲಿ ಮನೋರಕ್ಕಿತಾ ಥೇರಾ



**ಚಾಮರಾಜನಗರ:** ಭಾರತವನ್ನು ಸುಖಿ ರಾಜ್ಯವಾಗಿ ಕಟ್ಟಲು ಸಾರನಾಥ ಬೌದ್ಧ ವಿಹಾರ ಭದ್ರಬುನಾದಿಯಾಗಿದೆ ಎಂದು ಕೊಳ್ಳೇಗಾಲ ಜೇತವನ ಬುದ್ಧ ವಿಹಾರದ ಬೌದ್ಧ ಭಿಕ್ಕು ಮನೋರಕ್ಕಿತಾ ಥೇರಾ ಹೇಳಿದರು.

ನಗರದ ಸಾರನಾಥ ಬೌದ್ಧ ವಿಹಾರದ ಸಮೀಪದಲ್ಲಿ ನೂತನವಾಗಿ ನಿರ್ಮಿಸುವ ಭಿಕ್ಕು ನಿವಾಸಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಈಗಾಗಲೇ

ಚಾಮರಾಜನಗರ ಜಿಲ್ಲಾ ಕೇಂದ್ರದಲ್ಲಿ 1954ರಲ್ಲಿ ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಅವರು ಸ್ಥಾಪಿಸಿದ ಭಾರತೀಯ ಬೌದ್ಧ ಮಹಾಸಭಾದ ಮುಖೇನ ಸಾರನಾಥ ಬೌದ್ಧ ವಿಹಾರ ಸ್ಥಾಪಿಸಲ್ಪಟ್ಟು ಬುದ್ಧಧಮ್ಮಾ ಸಂಘ ಕೆಲಸ ಮಾಡುತ್ತಿದೆ. ಮಾನವ ಕೋಟಿಗೆ ಮಾನವೀಯತೆ, ದೈವತ್ವದ ನಡುವೆ ಸೇತುವೆ ಕಟ್ಟಿದೆ ಎಂದರು.

ಈ ಸಂದರ್ಭದಲ್ಲಿ ಭಾರತೀಯ ಬೌದ್ಧ ಮಹಾಸಭಾ ಜಿಲ್ಲಾಧ್ಯಕ್ಷ ಆರ್.ಬಸವರಾಜು, ಉಪಾಧ್ಯಕ್ಷ ರಾದ ಉಮೇಶ್ ಕುದರ್ ಸಮತಾ ಸೈನಿಕ ದಳದ ಉಪಾಧ್ಯಕ್ಷ ಮಲ್ಲಿಕ್ ಯಲಕ್ಕೂರು, ಸಿದ್ದರಾಜಪ್ಪ, ಎಂ.ಸಿದ್ದರಾಜು, ಜಿಲ್ಲಾ ವಕೀಲರ ಸಂಘದ ಮಾಜಿ ಅಧ್ಯಕ್ಷ ನಂಜಯ್ಯ, ಪರಮೇಶ್ವರನ್,ತಾಲೂಕು ಅಧ್ಯಕ್ಷ ಕೃಷ್ಣಯ್ಯ, ಹಾಗೂ ಜಿಲ್ಲಾ ಮತ್ತು ತಾಲೂಕು ಪದಾಧಿಕಾರಿಗಳು ಹಾಜರಿದ್ದರು.

# ಸಂಕ್ಷಿಪ್ತ ಸುದ್ದಿ

## ಖಾಸಗಿ ಟ್ರಾವೆಲ್ಸ್ ಸಂಸ್ಥೆಗೆ 10 ಸಾವಿರ ದಂಡ

**ರಾಮನಗರ:** ವೈಕುಂಠ ಏಕಾದಶಿಯಂದು ತಿರುಪತಿ ತಿಮ್ಮಪ್ಪನ ದರ್ಶನಕ್ಕೆ ತೆರಳುವುದಕ್ಕಾಗಿ ಬುಕ್ಕಿಂಗ್ ಮಾಡಿದ್ದ ಮೂರು ಬಸ್ ಟಿಕೆಟ್‌ಗಳನ್ನು ಏಕಾಏಕಿ ರದ್ದುಪಡಿಸಿ, ಭಕ್ತರೊಬ್ಬರ ಧಾರ್ಮಿಕ ಹಕ್ಕು ಉಲ್ಲಂಘಿಸಿದಕ್ಕಾಗಿ ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಬೆಂಗಳೂರಿನ ಆನಂದರಾವ್ ವೃತ್ತದಲ್ಲಿರುವ ಗ್ರೀನ್‌ಲೈನ್ ಟ್ರಾವೆಲ್ ಮತ್ತು ಹಾಲಿಡೇಸ್ ಸಂಸ್ಥೆಗೆ 10 ಸಾವಿರ ದಂಡ ವಿಧಿಸಿದೆ.

ದೂರುದಾರರಾದ ವಿವೇಕಾನಂದನಗರದ ಚಂದ್ರಮೋಹನ್ ಜೆ. ಅವರು ವೈಕುಂಠ ಏಕಾದಶಿಯಂದು ತಿರುಪತಿ ತಿಮ್ಮಪ್ಪನ ದರ್ಶನಕ್ಕೆ ತಮ್ಮಿಬ್ಬರು ಸ್ನೇಹಿತರೊಂದಿಗೆ ಜ. 2ರಂದು ತೆರಳಲು ನಿರ್ಧರಿಸಿದ್ದರು. ಅದಕ್ಕಾಗಿ ಗ್ರೀನ್‌ಲೈನ್ ಸಂಸ್ಥೆಯ ಹವಾನಿಯಂತ್ರಿತ ಸ್ಲೀಪರ್ ಬಸ್‌ಗೆ 3 ಟಿಕೆಟ್‌ಗಳನ್ನು ಒಂದು ತಿಂಗಳು ಮುಂಚೆಯೇ ಬಸ್ ಟಿಕೆಟ್ ಮಾಡಿದ್ದರು. ತಿರುಪತಿಗೆ ತೆರಳಲು ನಾಲ್ಕು ದಿನ ಇರುವಾಗ ಟಿಕೆಟ್ ರದ್ದಾಗಿದೆ ಎಂದು ಟ್ರಾವೆಲ್ಸ್ ಸಂಸ್ಥೆಯು ಆ. 4 ರಂದು ಚಂದ್ರಮೋಹನ್ ಅವರ ಮೊಬೈಲ್‌ಗೆ ಸಂದೇಶ ಕಳಿಸಿತ್ತು. ಬುಕ್ಕಿಂಗ್ ದಿನವಾದ ಜ. 9ರಿಂದ 18ರವರೆಗೆ ತಿರುಪತಿಯಲ್ಲಿ ದರ್ಶನ ರದ್ದಾಗಿದೆ. ಹಾಗಾಗಿ, ತಮ್ಮ ಬುಕ್ಕಿಂಗ್ ಮೊತ್ತ ಹಿಂದಿರುಗಿಸುವುದಾಗಿ ಸಂಸ್ಥೆ ಹೇಳಿತ್ತು.

## ಕಲಾವಿದರ ನೋಂದಣಿ ಆಹ್ವಾನ

**ರಾಮನಗರ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಬೆಂಗಳೂರು ದಕ್ಷಿಣ ಜಿಲ್ಲೆಯ ಎಲ್ಲಾ ಪ್ರಕಾರದ ಜಾನಪದ ಕಲಾವಿದರು ಹಾಗೂ ರಂಗಭೂಮಿ ಕಲಾವಿದರು ಯಾವ ಯಾವ ಪ್ರಕಾರಗಳಲ್ಲಿ ಪರಿಣಿತರಾಗಿರುತ್ತೀರಿ ಎಂದು ತಮ್ಮ ಸ್ವವಿವರಗಳೊಂದಿಗೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲಾ ಕಚೇರಿಗೆ ಭೇಟಿ ನೀಡಿ ನೊಂದಾಯಿಸಿ ಕೊಳ್ಳಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಆರೋಗ್ಯ ತಪಾಸಣಾ ಉಪಕರಣಗಳ ವಿತರಣೆ

ರಾಮನಗರ: ಭಾರತೀಯ ರೆಡ್ ಕ್ರಾಸ್ ಸಂಸ್ಥೆ,ಬೆಂಗಳೂರು ದಕ್ಷಿಣ ಜಿಲ್ಲೆಯ ಚನ್ನಪಟ್ಟಣ ತಾಲ್ಲೂಕು ಶಾಖೆ, ವತಿಯಿಂದ ಅರ್ಹ ಫಲಾನುಭವಿಗಳಿಗೆ ಗೃಹ ಉಪಯೋಗಿ ಹಾಗೂ ಆರೋಗ್ಯ ತಪಾಸಣಾ ಉಪಕರಣಗಳ ವಿತರಣಾ ಸಮಾರಂಭವನ್ನು ನ.07ರ ಶಕ್ರವಾರ ಬೆಳಗ್ಗೆ 10 ಗಂಟೆಗೆ ಚನ್ನಪಟ್ಟಣದ ಸರ್ಕಾರಿ ಪಾಲಿಟೆಕ್ನಿಕ್ ಗ್ರಂಥಾಲಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಚನ್ನಪಟ್ಟಣ ತಾಲ್ಲೂಕಿನ ದಂಡಾಧಿಕಾರಿ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ನಾಮಾಂಕಿತ ಅಧ್ಯಕ್ಷರಾದ ಬಿ.ಎನ್.ಗಿರೀಶ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಚನ್ನಪಟ್ಟಣದ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲರಾದ ಅರುಣಾ ಡಿ ಅವರು ವಿಶೇಷ ಆಹ್ವಾನಿತರಾಗಿ, ಚನ್ನಪಟ್ಟಣ ನಗರಸಭೆಯ ಪೌರಾಯುಕ್ತರಾದ ಮಹೇಂದ್ರ ಬಿ, ನಗರ ವೃತ್ತ ಆರಕ್ಷಕ ನಿರೀಕ್ಷಕರಾದ ರವಿಕಿರಣ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಬೆಂಗಳೂರು ದಕ್ಷಿಣ ಜಿಲ್ಲೆ, ಚನ್ನಪಟ್ಟಣ ತಾಲ್ಲೂಕಿನ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಛೇರ್ಮನ್ (ಸಭಾಪತಿ) ಮಧುಸೂದನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

# ಪವರ್ ಶೇರಿಂಗ್ ವಿಚಾರ ಹೈಕಮಾಂಡ್‌ಗೆ ಬಿಟ್ಟದ್ದು

## ದೊಡ್ಡಗಂಗವಾಡಿ ಗ್ರಾಮದಲ್ಲಿ ಶಾಸಕ ಬಾಲಕೃಷ್ಣ ಅಭಿಮತ

**ರಾಮನಗರ:** ಸಿದ್ದರಾಮಯ್ಯನವರು ಸಿಎಂ ಆಗಿ ಮುಂದುವರೆಯಬೇಕೆಂಬ ಚರ್ಚೆ ನಡೆಯುತ್ತಿದೆ, ಈ ವಿಚಾರದಲ್ಲಿ ಎಲ್ಲರೂ ಅವರವರ ಅಭಿಪ್ರಾಯ ತಿಳಿಸುತ್ತಿದ್ದಾರೆ. ಹೈಕಮಾಂಡ್ ಪ್ರಬಲವಾಗಿದೆ, ಅಂತಿಮವಾಗಿ ಹೈಕಮಾಂಡ್ ತೀರ್ಮಾನ ಮಾಡಲಿದೆ ಎಂದು ಶಾಸಕ ಎಚ್.ಸಿ.ಬಾಲಕೃಷ್ಣ ತಿಳಿಸಿದರು.

ಕೂಟಗಲ್ ಹೋಬಳಿಯ ನಾನಾ ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳ ಗುದ್ದಲಿ ಪೂಜೆ ನೆರವೇರಿಸಿದ ದೊಡ್ಡಗಂಗವಾಡಿ ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು.

ನವೆಂಬರ್ 26ಕ್ಕೆ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಪ್ರಮಾಣ ವಚನ ಸ್ವೀಕಾರ ಮಾಡಲಿದ್ದಾರೆ ಎನ್ನುವ ವಿಚಾರ ಎಲ್ಲಾ ಕಡೆ ಚರ್ಚೆಯಾಗುತ್ತಿದೆಯಲ್ಲ ಎಂಬ ಪ್ರಶ್ನೆಗೆ ಅದೆಲ್ಲಾ ಹೈಕಮಾಂಡ್ ಮಟ್ಟದಲ್ಲಿ ತೀರ್ಮಾನ ಆಗಿರಬೇಕೇನೋ ನಮಗಂತೂ ಗೊತ್ತಿಲ್ಲ. ನಮ್ಮನ್ನ ಕೂರಿಸಿಕೊಂಡು ಚರ್ಚೆ ಮಾಡ್ತಾರಾ? ಪವರ್ ಶೇರಿಂಗ್ ವಿಚಾರ ಹೈಕಮಾಂಡ್‌ಗೆ ಬಿಟ್ಟದ್ದು ಎಂದರು.

ಕೂಟಗಲ್ ಹೋಬಳಿಯಲ್ಲಿ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ್ದೇನೆ. ಪ್ರತಿಬಾರಿ ಇಲ್ಲಿ ಕಾಂಗ್ರೆಸ್‌ಗೆ ಹಿನ್ನಡೆ ಆಗುತ್ತಿತ್ತು ಈ ಬಾರಿ ಜನರು ನನ್ನ ಮೇಲೆ ವಿಶ್ವಾಸವಿಟ್ಟು ಮತ ನೀಡಿದ್ದಾರೆ. ಹಾಗಾಗಿ ಹೋಬಳಿ ಅಭಿವೃದ್ಧಿಗೆ ಸಾಕಷ್ಟು ಕಾಳಜಿ ಇಟ್ಟಿದ್ದೇನೆ. ಅಭಿವೃದ್ಧಿ ಕೆಲಸಗಳನ್ನು ಮಾಡಿ ಅಂತ ನಮ್ಮ ನಾಯಕರಾದ ಡಿ.ಕೆ.ಶಿವಕುಮಾರ್ ಮತ್ತು ಡಿ.ಕೆ ಸುರೇಶ್ ಹೇಳಿದ್ದಾರೆ ಹಾಗಾಗಿ ಇನ್ನಷ್ಟು ಅಭಿವೃದ್ಧಿ ಕಾಮಗಾರಿಗಳನ್ನ ಮಾಡುತ್ತೇವೆ ಎಂದರು.



ಕೆಲ ಶಾಸಕರಿಗೆ ಅನುದಾನ ಸಿಗುತ್ತಿಲ್ಲ ಎಂಬ ಹೇಳಿಕೆ ವಿಚಾರದಲ್ಲಿ ಗ್ಯಾರಂಟಿ ಯೋಜನೆಗಳ ಮಧ್ಯೆ ಅನುದಾನ ಸಿಕ್ಕಿದೆ ಅಂದ್ರೆ ಸುಮ್ನೆ ಬೋಗಸ್ ಪೂಜೆ ಮಾಡಕಾಗುತ್ತಾ? ನಮಗೆ ಅನುದಾನ ಬಿಡುಗಡೆ ಆಗಿರುವುದರಿಂದ ಕೆಲಸ ಮಾಡುತ್ತಿದ್ದೇವೆ. ಯಾರು ಹೇಳುತ್ತಿದ್ದಾರೆ ಅವರನ್ನೇ ಕೇಳಿ, ನಮಗೆ ಅನುದಾನ ಸಿಗುತ್ತಿದೆ ಎಂದು ಬಾಲಕೃಷ್ಣ ಉತ್ತರ ನೀಡಿದರು.

ಬಿಡದಿ ಟೌನ್‌ಶಿಪ್ ಯೋಜನೆ ವಿಚಾರದಲ್ಲಿ ಜಿಲ್ಲಾಧಿಕಾರಿ ಸಭೆ ನಡೆಸುವ ವಿಚಾರದಲ್ಲಿ ಭೂಮಿಗೆ ದರ ನಿಗದಿಯ ಸಾಧಕ ಬಾಧಕಗಳ ಬಗ್ಗೆ ಚರ್ಚೆ ಆಗಬೇಕು ಅದಕ್ಕಾಗಿ ಸಭೆ ಕರೆದಿದ್ದಾರೆ. ಮೊದಲು ಅಧಿಕಾರಿಗಳ ಮಟ್ಟದಲ್ಲಿ ಸಭೆ ಆದನಂತರ ನಾವು ಮಾಡುತ್ತೇವೆ. ಹೋರಾಟ ಮುಂದುವರೆದಿದೆ ಆದರೆ ನಾವು ನಮ್ಮ ಕೆಲಸ ಮಾಡ್ತಿದ್ದೇವೆ. ಅಂತಿಮವಾಗಿ ಸರಕಾರದ ಮಟ್ಟದಲ್ಲಿ ಒಂದು ತೀರ್ಮಾನ ಆಗಲಿದೆ ಎಂದು ತಿಳಿಸಿದರು.

ಡಿಸಿಎಂ ಡಿ.ಕೆ.ಶಿವಕುಮಾರ್ ದೆಹಲಿ ಪ್ರವಾಸ ವಿಚಾರದಲ್ಲಿ ಪ್ರತಿಕ್ರಿಯಿಸಿ ಮೇಕೆದಾಟು ವಿಚಾರಕ್ಕೆ ಸಂಬಂಧಿಸಿದಂತೆ ವಿಶೇಷ ನ್ಯಾಯಾಲಯದಲ್ಲಿ ಚರ್ಚೆ ಆಗುತ್ತಿದೆ. ವಕೀಲರ ಜೊತೆ ಚರ್ಚಿಸಲು ಹೋಗಿದ್ದಾರೆ. ಯಾವುದೇ ರಾಜಕೀಯ ಮಾತಾಡೋದಕ್ಕೆ ಹೋಗಿಲ್ಲ. ಡಿಕೆಶಿ ಅವರಿಗೆ ನಾವು ಅತ್ಯಾಪ್ತರೇ ಅದರ ಬಗ್ಗೆ ಎರಡು ಮಾತಿಲ್ಲ. ಡಿಕೆಶಿ ಪರವಾಗಿ ನಾನೊಬ್ಬನೆ ಧ್ವನಿ ಎತ್ತೋದಿಲ್ಲ ಇನ್ನೂ ತುಂಬಾ ಜನ ಇದ್ದಾರೆ.

ಸದ್ಯಕ್ಕೆ ಯಾರ ಬಗ್ಗೆಯೂ ಮಾತಾಡದಂತೆ ನಮಗೆ ಸೂಚನೆ ಕೊಟ್ಟಿದ್ದಾರೆ. ಅವರು ನಮ್ಮ ಜಿಲ್ಲೆಯವರೆಂದು ಅಭಿಮಾನಕ್ಕಾಗಿ ಹೇಳುತ್ತೇವೆ ಎಂದು ತಿಳಿಸಿದರು.

ಕಾಂಗ್ರೆಸ್ ಪಕ್ಷದಲ್ಲಿ ಬಣಗಳ ವಿಚಾರದಲ್ಲಿ ಕೇಳಿದ ಪ್ರಶ್ನೆಗೆ ಎಲ್ಲಾ ಪಕ್ಷಗಳಲ್ಲಿಯೂ ಬಣಗಳು ಇವೆ. ಆ ಬಣಗಳ ಮಧ್ಯೆ ಹೈಕಮಾಂಡ್ ಶಕ್ತಿಯುತವಾಗಿದೆ ತೀರ್ಮಾನ ಮಾಡಲಿದೆ ಎಂದು ಬಾಲಕೃಷ್ಣ ಪ್ರತಿಕ್ರಯಿಸಿದರು.

> ಸಂಪುಟ ಪುನಾರಚನೆ ವಿಚಾರಕ್ಕೆ ಸಂಬಂಧಿಸಿದಂತೆ ಅದೆಲ್ಲಾ ನನಗೆ ಗೊತ್ತಿಲ್ಲ ನಾನೊಬ್ಬ ಶಾಸಕ ಡಿಸೆಂಬರ್ ತಿಂಗಳಲ್ಲಿ ಅದಾಗುತ್ತೆ ಇದಾಗುತ್ತೆ ಅಂತ ಊಹಾಪೋಹಗಳಿವೆ ಅದು ನನಗೆ ಗೊತ್ತಿಲ್ಲ ಎಂದರು. ಡಿ.ಕೆ.ಶಿವಕುಮಾರ್‌ರವರು ಪಕ್ಷ ಕಟ್ಟುವಲ್ಲಿ ಶ್ರಮಿಸಿದ್ದಾರೆ, ಸಿಎಂ ಸ್ಥಾನಕ್ಕೆ ಅವರು ಸಮರ್ಥರು ಎಂಬ ಕೂಗು ಕೇಳಿಬರುತ್ತಿದೆಯಲ್ಲಾ? ಎಂಬ ಪ್ರಶ್ನೆಗೆ ನಮ್ಮ ಪಕ್ಷದಲ್ಲಿ ಸಾಕಷ್ಟು ಜನ ಸಮರ್ಥರಿದ್ದಾರೆ. ಡಿಕೆಶಿ, ಪರಮೇಶ್ವರ್, ಸತೀಶ್ ಜಾರಕಿಹೊಳಿ, ಎಂ.ಬಿ ಪಾಟೀಲ್ ಎಲ್ಲರೂ ಸಮರ್ಥರೆ, ಅವಕಾಶ ಕೇಳೋದರಲ್ಲಿ ತಪ್ಪೇನಿಲ್ಲ, ಅಂತಿಮ ತೀರ್ಮಾನ ಹೈಕಮಾಂಡ್ ಬಿಟ್ಟದ್ದು. ಮಕ್ಕಳು ಅತ್ತರೆ ಅಲ್ವಾ ಹಾಲುಣಿಸೋದು.
>
> – **ಎಚ್.ಸಿ.ಬಾಲಕೃಷ್ಣ,** ಶಾಸಕ

# ರಸಸಂಜೆಯಲ್ಲಿ ಕನ್ನಡ ಕಂಪು ಚಿತ್ರಗೀತೆಗಳ ಇಂಪು



**ಮೈಸೂರು:** ಮೈಸೂರು ರಿದಮ್ಸ್ ಕರೋಕೆ ಕ್ಲಬ್ ವತಿಯಿಂದ ಕನ್ನಡ ರಾಜ್ಯೋತ್ಸವದ ಅಂಗವಾಗಿ ನಗರದ ಜೆಎಲ್ ಬಿ ರಸ್ತೆಯ ನಾದಬ್ರಹ್ಮ ಸಂಗೀತಸಭಾದಲ್ಲಿ ಕನ್ನಡದಕಂಪು ಚಿತ್ರಗೀತೆಗಳ ಇಂಪು– ಜನಪ್ರಿಯ ಚಿತ್ರಗೀತೆಗಳ ಲೈವ್ ಮ್ಯೂಸಿಕ್ ರಸಸಂಜೆ ಕಾರ್ಯಕ್ರಮ ಗುರುವಾರ ಜರುಗಿತು.

ನಾಗರಾಜ ವಿ.ಬೈರಿ ಮಾತನಾಡಿ, ಸನ್ಮಾನಿತರ ಪರವಾಗಿ ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾಧ್ಯಕ್ಷ ನಾಗರಾಜ ವಿ.ಬೈರಿ ಮಾತನಾಡಿ, ಕನ್ನಡವೆಂದರೆ ಬದುಕು. ಕನ್ನಡದಿಂದಲೇ ನಮ್ಮ ಜೀವನ ಸಾಗುತ್ತಿದೆ ಎಂದರು.

ಮೈಸೂರು ರಿದಮ್ಸ್ ತಂಡದವರು ಕನ್ನಡಮಯ ವಾತಾವರಣವನ್ನು ನಿರ್ಮಿಸಿ, ರಾಜ್ಯೋತ್ಸವ ಆಚರಿಸುತ್ತಿರುವುದರ ಜೊತೆಗೆ ಕನ್ನಡದ ಕಂಪು– ಚಿತ್ರಗೀತೆಗಳ ಇಂಪು ಶೀರ್ಷಿಕೆಯಡಿ ನೈಜ ವಾದ್ಯಸಂಗೀತದೊಂದಿಗೆ ರಸಸಂಜೆ ಏರ್ಪಡಿಸಿರುವುದು ಶ್ಲಾಘನೀಯ. ಈ ರೀತಿಯ ಕಾರ್ಯಕ್ರಮಗಳಿಗೆ ಸಭಿಕರು ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದರು.

ಕನ್ನಡದ ಸುಪ್ರಸಿದ್ಧ ಹಳೆಯ ಹಾಗೂ ಹೊಸ ಸಿನಿಮಾಗಳ ಚಿತ್ರಗೀತೆಗಳನ್ನು ತಂಡದ ಸದಸ್ಯರಾದ ಎಸ್. ಅಮರ್, ಡಾ.ಎಲ್. ಸುಮಾ, ನಾಗೇಂದ್ರ, ಅಶ್ವಿನ್ ಅತ್ರಿ, ಜಿ.ಪಿ. ಚೇತನ್, ಸಂತೋಷ್ ನಾಯರ್, ರವಿಕುಮಾರ್, ಡಾ. ಪ್ರಕಾಶ್, ಡಾ. ಬಾಲಕಿರಣ್, ನಾಗೇಶ್ ಶೃಂಗೇರಿ, ಡಾ. ಪೂರ್ಣಿಮಾ, ಡೌ. ಸೌಮ್ಯಾ, ಶರಣ್ಯಾ, ನಾಗೇಶ್‌ಹಾಗೂ ಪ್ರವೀಣ್ ಗಾಡ್ಕೆ ಪ್ರಸ್ತುತಪಡಿಸಿದರು.

ವಾದ್ಯವೃಂದದಲ್ಲಿ ನಾಗೇಶ್– ಡ್ರಮ್ಸ್, ಶರತ್, ರಾಜೇಶ್– ಕೀಬೋರ್ಡ್, ವಿಲ್ಸನ್– ಗಿಟಾರ್, ಕಿರಣ್– ರಿದಂ ಪ್ಯಾಡ್, ರೋಶನ್‌ಸೂರ್ಯ– ತಬಲ, ಕಿಶೋರ್– ಡೋಲಕ್‌ಸಾಥ್ ನೀಡಿದರು. ಯಡಿಯೂರು ಸಮೀವುಲ್ಲಾ ಕಾರ್ಯಕ್ರಮ ನಿರೂಪಿಸಿದರು.

ಇದೇ ವೇಳೆ ರಾಜ್ಯ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಜಿಲ್ಲಾ ಮಟ್ಟದ ಪ್ರಶಸ್ತಿ ಪುರಸ್ಕೃತರಾದ ಕರ್ನಾಟಕ ಸುಗಮ ಸಂಗೀತ ಪರಿಷತ್ತಿನ ಜಿಲ್ಲಾಧ್ಯಕ್ಷ ನಾಗರಾಜ ವಿ. ಬೈರಿ, ಕಲಾವಿದ ಎ.ಡಿ. ಶ್ರೀನಿವಾಸ್, ಅಂತಾರಾಷ್ಟ್ರೀಯ ಕ್ರೀಡಾಪಟು ಎಸ್. ಜ್ಞಾನೇಶ್ವರ್, ಜಿಲ್ಲಾ ಕಸಾಪ ಮಾಜಿ ಅಧ್ಯತ್ರ ಡಾ.ವೈ.ಡಿ. ರಾಜಣ್ಣ ಅವರನ್ನು ಅಭಿನಂದಿಸಲಾಯಿತು.

# ಡಿಸೆಂಬರ್ ಮಾಹೆಯಲ್ಲಿ ಕೃಷಿಮೇಳ: ಡಾ.ಕೆ.ಎಂ.ಹರಿಣಿ ಕುಮಾರ್

ಮೈಸೂರು: ಮಂಡ್ಯದಲ್ಲಿನ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾನಿಲಯದಲ್ಲಿ ರೈತರಿಗೆ ಈಚಿನ ಕೃಷಿ ಸಂಶೋಧನೆ, ಅತ್ಯಾಧುನಿಕ ಸಾಧನಗಳ ಬಳಕೆ ಕುರಿತು ಡಿಸೆಂಬರ್ ಮೊದಲ ವಾರದಲ್ಲಿ ಕೃಷಿ ಮೇಳ ಆಯೋಜಿಸಲಾಗಿದೆ ಎಂದು ವಿಶೇಷಾಧಿಕಾರಿ ಡಾ.ಕೆ.ಎಂ. ಹರಿಣಿಕುಮಾರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇದು 3 ದಿನಗಳ ಮೇಳವಾಗಿರಲಿದ್ದು, ಸುಮಾರು ಮೂರರಿಂದ ನಾಲ್ಕು ಲಕ್ಷ ರೈತರು, ಇನ್ನಿತರರು ಪಾಲ್ಗೊಳ್ಳುವ ನಿರೀಕ್ಷೆಯಿದೆ. ರಾಜ್ಯ ಸರ್ಕಾರದ ವಿವಿಧ ಅಭಿವೃದ್ಧಿ ಇಲಾಖೆ, ಹಣಕಾಸು ಸಂಸ್ಥೆಗಳು, ರೈತ ಉತ್ಪಾದಕರ ಕಂಪನಿಗಳು ಹಾಗೂ ಸಂಘ ಸಂಸ್ಥೆಗಳು ಭಾಗಿಯಾಗಲಿವೆ ಎಂದು ತಿಳಿಸಿದರು.



ಹವಾಮಾನ ವೈಪರೀತ್ಯ, ಕೃಷಿ ಕಾರ್ಮಿಕರ ಕೊರತೆ, ಅಸಮರ್ಪಕ ನೀರು ನಿರ್ವಹಣೆ, ಮಣ್ಣಿನ ಸವಕಳಿ, ಮಣ್ಣಿನ ಫಲವತ್ತತೆ ಕ್ಷೀಣಿಸುವುದು, ಕೀಟ ಪೀಡೆಗಳು, ಜಾನುವಾರು ರೋಗ ಮೊದಲಾದ ಸಮಸ್ಯೆಗಳಿಗೆ ಪರಿಹಾರ ಸೂಚಿಸುವ ಮಳಿಗೆಗಳು ಇಲ್ಲಿರಲಿವೆ. ಕೃಷಿಯಲ್ಲಿ ಕೃತಕ ಬುದ್ಧಿಮತ್ತೆ ಬಳಕೆ, ಡ್ರೋನ್ ಪ್ರಯೋಜನಗಳನ್ನು ಪ್ರಾತ್ಯಕ್ಷಿಕೆಯೊಡನೆ ವಿವರಿಸಲಾಗುವುದು. ಎಂದು ತಿಳಿಸಿದರು.

ಅಧಿಕಾರಿಗಳಾದ ಡಾ.ಎನ್. ಶಿವಕುಮಾರ್, ಡಾ.ಜಿ.ಎಂ. ದೇವಗಿರಿ, ಡಾ.ಸಿ. ರಾಮಚಂದ್ರ, ಡಾ.ಎ.ಡಿ. ರಂಗನಾಥ್ ಮೊದಲಾದವರಿದ್ದರು.

# ಭ್ರಷ್ಟಾಚಾರ ನಿರ್ಮೂಲನೆ ನಮ್ಮ ಮುಂದಿನ ಸವಾಲು



ಹಾಸನ: ಭ್ರಷ್ಟಾಚಾರ ನಿರ್ಮೂಲನೆ ಮಾಡುವುದು ಹೇಗೆ ಎಂಬುದು ನಮ್ಮ ಮುಂದಿನ ಸವಾಲಾಗಿದ್ದು, ಇದಕ್ಕೆ ಪ್ರತಿಯೊಬ್ಬ ಪ್ರಜೆಯು ಕೈ ಜೋಡಿಸಬೇಕು ಎಂದು ಕರ್ನಾಟಕ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌದರಿ ಅಭಿಪ್ರಾಯಪಟ್ಟರು.

ನಗರದ ಸರ್ಕಾರಿ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜು– ಸ್ವಾಯತ್ತ ಕಾಲೇಜಿಗೆ ಕರ್ನಾಟಕ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌದರಿ ಭೇಟಿ ನೀಡಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ಹುಟ್ಟಿದ ಮೇಲೆ ನಾವೇನನ್ನಾದರೂ ಸಾಧಿಸಬೇಕು. ಪ್ರಸ್ತುತ ಸನ್ನಿವೇಶದಲ್ಲಿ ಬದಲಾವಣೆಗೆ ಪ್ರತಿಯೊಬ್ಬರು ಸಿದ್ದರಾಗಬೇಕು. ಯಾವುದೇ ಕೆಲಸವಾದರೂ ಶ್ರದ್ಧೆ, ನಿಷ್ಠೆ, ಸೇವೆ ಎಂಬುದು ಮುಖ್ಯವಾಗುತ್ತದೆ. ಪ್ರಸ್ತುತ ಸಮಾಜದಲ್ಲಿ ಬದಲಾವಣೆಯ ಪುಟ ಬರೆಯಬೇಕಿರುವುದು ಯುವ ಜನಾಂಗವಾಗಿದೆ. ಕನಸು ಯಾವಾಗಲೂ ದೊಡ್ಡದಾಗಿರಬೇಕು. ಸಮಸಮಾಜದ ನಿರ್ಮಾಣಕ್ಕೆ ಲಿಂಗತಾರತಮ್ಯ ಇಲ್ಲದೆ ಒಗ್ಗೂಡಬೇಕಿದೆ. ಕಾನೂನನ್ನು ಅರಿತ ಮಹಿಳೆ ಶಕ್ತಳಾಗುತ್ತಾಳೆ. ಮಹಿಳೆಯರ ಸಂರಕ್ಷಣೆ ಇರುವಂತಹ ಮೊಬೈಲ್ ಅಪ್ಲಿಕೇಷನ್‌ಗಳನ್ನು ಕುರಿತು ಜಾಗೃತಿ ಮೂಡಿಸಿದರು. ಜ್ಞಾನವೇ ದೇವರು ಅಜ್ಞಾನವೇ ಸಾವು ಎಂಬ ಅಂಬೇಡ್ಕರ್ ವಾಕ್ಯವನ್ನು ನಮ್ಮಲ್ಲಿ ರೂಢಿಸಿಕೊಳ್ಳಬೇಕು. ಪ್ರತಿಯೊಬ್ಬರೂ ಆರ್ಥಿಕವಾಗಿ ಸಬಲವಾಗಬೇಕು ಎಂದು ವಿದ್ಯಾರ್ಥಿಗಳಿಗೆ ಪ್ರೇರಕ ನುಡಿಗಳನ್ನಾಡಿದರು.

ನಗರದ ಸೆನ್ ಪೊಲೀಸ್ ಠಾಣೆಯ ಉಪನಿರೀಕ್ಷಕಿ ಮಧು ಎಂ.ಸಿ. ಅವರು ಮಾತನಾಡಿ ಪೊಲೀಸ್ ಎಂಬುದು ಭಯ ಅಲ್ಲ ಭರವಸೆ ಎಂದು ವಿದ್ಯಾರ್ಥಿಗಳಿಗೆ ಹೇಳುವ ಮೂಲಕ ವಿದ್ಯಾರ್ಥಿಗಳು ಮೊಬೈಲ್ ದಾಸರಾಗಬೇಡಿ. ಶ್ರಮದ ಓದಿನಿಂದ ಉತ್ತಮ ಫಲ ಸಾಧ್ಯವಾಗುತ್ತದೆ ಎಂದು ಹೇಳಿದರು. ಸೈಬರ್ ಅಪರಾಧಗಳಿಗೆ ಸಂಬಂಧಿಸಿದ ದೂರುಗಳನ್ನು ನೀಡಲು ಯಾವುದೇ ಭಯಪಡಬಾರದು ಬಂದು ದೂರುಗಳನ್ನು ನೀಡಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಪ್ರಾಂಶುಪಾಲರಾದ ಡಾ.ಎಂ.ಬಿ. ಇರ್ಷಾದ್ ಮಾತನಾಡಿ, ಪದವಿಯನ್ನು ಎಲ್ಲಾ ವಿಶ್ವವಿದ್ಯಾನಿಲಯಗಳು ನೀಡುತ್ತವೆ, ಸಂಸ್ಕಾರವನ್ನು ನೀಡುವ ಕೆಲಸ ಆಗಬೇಕು ಎಂದು ತಿಳಿಸಿದರು.

ಕರ್ನಾಟಕ ಮಹಿಳಾ ಆಯೋಗದ ಕಾರ್ಯದರ್ಶಿ ರೂಪಾ, ಅಪರ ಜಿಲ್ಲಾಧಿಕಾರಿ ಮಂಜುನಾಥ್, ಶೈಕ್ಷಣಿಕ ಡೀನ್ ರಾಜು ಡಿ. ಎಸ್ , ಪರೀಕ್ಷಾ ನಿಯಂತ್ರಕರಾದ ಡಾ. ಮುರಳೀಧರ ಕೆ.ಡಿ.,ಪತ್ರಾಂಕಿತ ವ್ಯವಸ್ಥಾಪಕರಾದ ಸತ್ಯಮೂರ್ತಿ ಕೆ.ಟಿ. ಎಲ್ಲಾ ವಿಭಾಗದ ಪ್ರಾಧ್ಯಾಪಕರು, ಉಪನ್ಯಾಸಕರು ಉಪಸ್ಥಿತರಿದ್ದರು.

# ಆಹ್ವಾನ ಪತ್ರಿಕೆಯಲ್ಲಿ ಭಾವಚಿತ್ರಕ್ಕೆ ಪರ ವಿರೋಧ

**ಕನಕಪುರ :** ಸಂಸದ ಡಾ. ಸಿ.ಎನ್. ಮಂಜುನಾಥ್ ಅವರ ಭಾವಚಿತ್ರ ಆಹ್ವಾನ ಪತ್ರಿಕೆಯಲ್ಲಿ ಅಳವಡಿಸುವ ವಿಚಾರದ ಬಗ್ಗೆ ಪರ ವಿರೋಧ ಟಿ.ಬೇಕುಪ್ಪೆ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಯಲ್ಲೂ ಪ್ರತಿಧ್ವನಿಸಿದೆ.

ತಾಲೂಕಿನ ಕಸಬಾ ಹೋಬಳಿಯ ಟಿ ಬೇಕುಪ್ಪೆ ಗ್ರಾಮ ಪಂಚಾಯಿತಿ ನೂತನ ಕಟ್ಟಡದಲ್ಲಿ ಶಾಸಕರು, ಮಾಜಿ ಸಂಸದರು, ವಿಧಾನ ಪರಿಷತ್ ಸದಸ್ಯರ ಭಾವಚಿತ್ರ ಮಾತ್ರ ಹಾಕಿದ್ದಾರೆ, ಆದರೆ ಸಂಸದ ಡಾ. ಸಿ.ಎನ್ ಮಂಜುನಾಥ್ ಅವರ ಭಾವಚಿತ್ರ ಹಾಕಿಲ್ಲ ಎಂದು ಮೈತ್ರಿ ಪಕ್ಷದ ಮುಖಂಡರು ಸೋಮವಾರ ಪ್ರತಿಭಟನೆ ನಡೆಸಿ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಒತ್ತಾಯಿಸಿದರು. ಇದರ ಬೆನ್ನಲ್ಲೇ ಟಿ.ಬೇಕುಪ್ಪೆ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ಸಂಸದರ ಭಾವಚಿತ್ರ ಅಳವಡಿಸುವ ಬಗ್ಗೆ ಪರ ವಿರೋಧ ಚರ್ಚೆ ನಡೆಯಿತು.

ಸಭೆಯಲ್ಲಿ ಅಧ್ಯಕ್ಷೆ ಶಾಂತಿಬಾಯಿ ಹಾಗೂ ಕಾಂಗ್ರೆಸ್ ಬೆಂಬಲಿತ ಸದಸ್ಯರು ಮಾತನಾಡಿ, ಗ್ರಾಮ ಪಂಚಾಯಿತಿ ನೂತನ ಕಟ್ಟಡ ನಿರ್ಮಾಣ ಮಾಡಲು ಡಿಸಿಎಂ ಡಿ.ಕೆ. ಶಿವಕುಮಾರ್ ಮಾಜಿ ಸಂಸದ ಡಿ.ಕೆ.ಸುರೇಶ್ ವಿಧಾನ ಪರಿಷತ್ ಎಸ್. ರವಿ ಅವರು ಸಹಕಾರ ಕೊಟ್ಟಿದ್ದಾರೆ



ಅದರಿಂದ ಗ್ರಾಮ ಪಂಚಾಯಿತಿ ನೂತನ ಕಟ್ಟಡ ನಿರ್ಮಾಣ ಮಾಡಲು ಸಾಧ್ಯವಾಗಿದೆ. ಸಂಸದ ಡಾ. ಸಿ.ಎನ್. ಮಂಜುನಾಥ್ ಅವರು ಯಾವ ಅನುದಾನವನ್ನು ಕೊಟ್ಟಿಲ್ಲ ಅವರು ಅನುದಾನ ಕೊಡಲಿ ಆನಂತರ ಅವರ ಭಾವಚಿತ್ರವನ್ನು ಹಾಕುತ್ತೇವೆ ಎಂದರು.

ಕಳೆದ ಸೆಪ್ಟೆಂಬರ್ 6 ರಂದು ನಡೆದ ಸಾಮಾನ್ಯ ಸಭೆಯಲ್ಲಿ ಯಾವುದೇ ಖರ್ಚುಗಳ ಬಗ್ಗೆ ಚರ್ಚೆ ಆಗಿರಲಿಲ್ಲ ಆದರೂ ಖರ್ಚು ವೆಚ್ಚದ ಬಗ್ಗೆ ಸಭೆಯಲ್ಲಿ ಚರ್ಚೆ ಮಾಡಿರುವಂತೆ ನಡಾವಳಿ ಬರೆದಿದ್ದೀರಿ ಆದರೆ ನಡಾವಳಿಗೆ ಅಧ್ಯಕ್ಷರು ಮತ್ತು ಅಧಿಕಾರಿಗಳು ಸಹಿ ಹಾಕಿಲ್ಲ ಪ್ರತಿ ಸಭೆ ನಡೆದ ಬಳಿಕ ನಡಾವಳಿ ನೋಡಿ ಸಹಿ ಹಾಕಬೇಕು ಎಂಬ ನಿಯಮ ಇದೆ, ಆದರೆ ಅಧ್ಯಕ್ಷರು ಅಧಿಕಾರಗಳು ಸಹಿ ಹಾಕಿಲ್ಲ. ಈಗ ಸಹಿ ಮಾಡುವುದಾದರೆ ಇಂದಿನ ದಿನಾಂಕ ಹಾಕಿ ಸಹಿ ಮಾಡಿ ಎಂದು ಪಟ್ಟು ಹಿಡಿದರು,

ಸದಸ್ಯ ಮುತ್ತಣ್ಣ ಮಾತನಾಡಿ. ಕಾರ್ಯಕ್ರಮದಲ್ಲಿ ಕೆಲವು ಸಣ್ಣಪುಟ್ಟ ಲೋಪಗಳು ಆಗಿರಬಹುದು ಅದಕ್ಕೆ ನಾನು ವಿಷಾದ ವ್ಯಕ್ತಪಡಿಸುತ್ತೇನೆ. ಮುಂದೆ ಹೀಗಾಗದಂತೆ ಪಡಿಸಿಕೊಳ್ಳೋಣ ನಮ್ಮ ಅವಧಿ ಇನ್ನು ಮೂರು ತಿಂಗಳು ಮಾತ್ರ ಬಾಕಿ ಇದೆ ಮುಂದೆ ಆಗಬೇಕಿರುವ ಕೆಲಸಗಳ ಕಡೆಗೆ ಗಮನ ಕೊಡಿ ಎಂದು ಮನವಿ ಮಾಡಿದರು.

ಸಭೆಯಲ್ಲಿ ಸದಸ್ಯ ಶಿವಲಿಂಗೇಗೌಡ, ಬಿಲ್ಲಯ್ಯ, ವೆಂಕಟಗಿರಿ, ಚಂದ್ರಕಲಾ, ರೂಪ, ಶಿವಮ್ಮ, ಲಲಿತಾಬಾಯಿ ಉಪಸ್ಥಿತರಿದ್ದರು.

06 ಕೆಕೆಪಿ 2: ಕನಕಪುರ ತಾಲೂಕು ಟಿ ಬೇಕುಪ್ಪೆ ಗ್ರಾಮ ಪಂಚಾಯತಿ ಅಧ್ಯಕ್ಷೆ ಶಾಂತಿಬಾಯಿ ಅವರ ಅಧ್ಯಕ್ಷತೆಯಲ್ಲಿ ಸಾಮಾನ್ಯ ಸಭೆ ನಡೆಯಿತು. ಶಿವಲಿಂಗೇಗೌಡ, ಬಿಲ್ಲಯ್ಯ, ವೆಂಕಟಗಿರಿ, ಚಂದ್ರಕಲಾ, ರೂಪ ಉಪಸ್ಥಿತರಿದ್ದರು.

> ಕ್ಷೇತ್ರದ ಶಾಸಕರು ಮಾಜಿ ಸಂಸದರು ಹಾಗೂ ವಿಧಾನ ಪರಿಷತ್ ಸದಸ್ಯರ ಸಹಕಾರದಿಂದ ಸುಸಜ್ಜಿತವಾದ ಕಟ್ಟಡ ನಿರ್ಮಾಣ ಆಗಿದೆ, ಅದಕ್ಕೆ ನಾವು ಧನ್ಯವಾದ ಸಲ್ಲಿಸುತ್ತೇವೆ. ಆದರೆ ಕಟ್ಟಡ ನಿರ್ಮಾಣಕ್ಕೆ ನರೇಗಾ ಯೋಜನೆಯಲ್ಲಿ ಬಳಸಿಕೊಂಡಿರುವ ಹಣ ಯಾವುದು? ಅದು ಕೇಂದ್ರ ಸರ್ಕಾರದ ಅನುದಾನ ಅಲ್ಲವೇ? ಎಂದು ಪ್ರಶ್ನೆ ಮಾಡಿದ ಅವರು ಕಟ್ಟಡ ನಿರ್ಮಾಣಕ್ಕೆ ಅನುದಾನ ಬೇಕು ಎಂದು ಸಂಸದರ ಗಮನಕ್ಕೆ ತಂದಿದ್ದರೆ ಅವರು ಸಹ ಅನುದಾನ ಕೊಡುತ್ತಿದ್ದರು. ಅನುದಾನ ಯಾವುದೇ ಇರಲಿ ಈ ತಾಲೂಕಿನ ಮತದಾರರು ಅವರನ್ನು ಆಯ್ಕೆ ಮಾಡಿದ್ದಾರೆ ಸಂಸದರಿಗೆ ಕೊಡಬೇಕಾದ ಗೌರವ ಕೊಡಬೇಕು.
>
> – **ಜಯರಾಮೇಗೌಡ,**

# 9ರಂದು ಮಹಾನಂದಿಗೆ ಅಭಿಷೇಕ ಕಾರ್ಯಕ್ರಮ

ಮೈಸೂರು: ಬಳಗ ಚಾರಿಟಬಲ್ ಟ್ರಸ್ಟ್ ವತಿಯಿಂದ ನ. 9 ರ ಬೆಳಗ್ಗೆ 10.30ಕ್ಕೆ ನಗರದ ಚಾಮುಂಡಿ ಬೆಟ್ಟದ ಮಹಾ ನಂದಿಗೆ 20 ನೇ ವರ್ಷದ ಅಭಿಷೇಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕಾರ್ಯದರ್ಶಿ ಎನ್. ಗೋವಿಂದ ತಿಳಿಸಿದರು. ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, 6 ಹಂತಗಳಲ್ಲಿ 32 ಬಗೆಯ ಅಭಿಷೇಕ ನೆರವೇರಲಿದೆ. ಪಾದ್ಯ, ಅರ್ಘ್ಯ, ಪಂಚಾಮೃತಾಭಿಷೇಕ, ಫಲ ಪೂಜಾಮೃತ, ರಸ ಪಂಚಾಮೃತ, ಪಿಷ್ಟ ಪಂಚಕಾಭಿಷೇಕಗಳು ಇವುಗಳಲ್ಲಿ ಸೇರಿವೆ. ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸಿದ್ಧಲಿಂಗ ಸ್ವಾಮೀಜಿ, ಚಿದಾನಂದ ಸ್ವಾಮೀಜಿ, ಸೋಮನಾಥಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಈ ವೇಳೆ ಸುಮಾರು 4 ಸಾವಿರ ಮಂದಿಗೆ ಪ್ರಸಾದ ವ್ಯವಸ್ಥೆಯಿದೆ. ಭಕ್ತಾದಿಗಳಿಗೆ ತಾವರೆಕಟ್ಟೆ ಕಡೆಯಿಂದ ಪ್ರವೇಶ ನೀಡುವಂತೆ ಅರಣ್ಯ ಇಲಾಖೆ ಅನುಮತಿ ಕೋರಲಾಗಿದೆ ಎಂದರು.




# ಹೈಟೆಕ್ ಸ್ಪರ್ಶದೊಂದಿಗೆ ಮರು ಬಿಡುಗಡೆಗೆ ಸಿದ್ಧ

- ಡಾ. ವಿಷ್ಣುವರ್ಧನ್ ನಟನೆಯ 'ಯಜಮಾನ' ಚಿತ್ರಕ್ಕೆ ಈಗ 25 ವರ್ಷ
- 'ಯಜಮಾನ' ಸಿನಿಮಾವು ಆ ಕಾಲಕ್ಕೆ ಹಲವು ಬಾಕ್ಸ್ ಆಫೀಸ್ ದಾಖಲೆ ಬರೆದಿತ್ತು
- 130ಕ್ಕೂ ಹೆಚ್ಚು ಕೇಂದ್ರಗಳಲ್ಲಿ ಶತದಿನೋತ್ಸವ ಆಚರಿಸಿದ್ದ ಸಿನಿಮಾ 'ಯಜಮಾನ'

ಸೂಪರ್ ಹಿಟ್ ಚಿತ್ರ 'ಯಜಮಾನ' ಕರ್ನಾಟಕ ರತ್ನ ಡಾ. ವಿಷ್ಣುವರ್ಧನ್ ಹಾಗೂ ಪ್ರೇಮಾ ಅಭಿನಯದ ಸೂಪರ್ ಹಿಟ್ ಚಿತ್ರ 'ಯಜಮಾನ' 25 ವರ್ಷಗಳ ನಂತರ ಆಧುನಿಕ ತಂತ್ರಜ್ಞಾನದೊಂದಿಗೆ ಮರು ಬಿಡುಗಡೆಗೆ ಸಜ್ಜಾಗಿದೆ.

ಮೆಹರುನ್ನಿಸಾ ರೆಹಮಾನ್ ನಿರ್ಮಾಣದ ಹಾಗೂ ಆರ್.ಶೇಷಾದ್ರಿ –ರಾಧಾ ಭಾರತಿ ನಿರ್ದೇಶನದ ಯಜಮಾನ ಚಿತ್ರವನ್ನು ವಿಷ್ಣುವರ್ಧನ್ ಅಭಿಮಾನಿಯಾಗಿರುವ ಎಸ್.ಡಿ. ಮುನಿಸ್ವಾಮಿ, ರಾಜ್ಯಾದ್ಯಂತ ಅದ್ದೂರಿಯಾಗಿ ಮರು ಬಿಡುಗಡೆ ಮಾಡುತ್ತಿದ್ದಾರೆ.

ಚಿತ್ರವನ್ನು ಡಿಐ ಬಳಸಿ 4ಕೆ ಡಿಜಿಟಲ್ ಪ್ರೊಜೆಕ್ಷನ್‌ಗೆ ತಯಾರು ಮಾಡಲಾಗಿದೆ. ಮೋನೊ ಟ್ರ್ಯಾಕ್ ನಲ್ಲಿದ್ದ ಈ ಚಿತ್ರದ ಕಲಾವಿದರ ಧ್ವನಿಗಳನ್ನು ಸಹ 5.1 ಹಾಗೂ 7.1 ಡಿಜಿಟಲ್ ಸೌಂಡ್‌ಗೆ ವರ್ಗಾಯಿಸಲಾಗಿದೆ.

ಚಿತ್ರದ ರಜತೋತ್ಸವವನ್ನು ಸಂಭ್ರಮಿಸಲು ಕಲಾವಿದರ ಸಂಘದಲ್ಲಿ ಇತ್ತೀಚಿಗೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಚಿತ್ರದ ನಿರ್ಮಾಪಕರು ಹಾಗೂ ಕಲಾವಿದರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ನಿರ್ಮಾಪಕ ರೆಹಮಾನ್, 2000 ಇಸವಿಯಲ್ಲಿ ತೆರೆ ಕಂಡಿದ್ದ ಯಜಮಾನ ಚಿತ್ರ 130ಕ್ಕೂ ಹೆಚ್ಚು ಕಡೆ ಶತದಿನೋತ್ಸವ, 40ಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ಇಪ್ಪತ್ತೈದು ವಾರ ಹಾಗೂ 4 ಕಡೆಗಳಲ್ಲಿ 1 ವರ್ಷ ಯಶಸ್ವಿ ಪ್ರದರ್ಶನ ಕಂಡಿದೆ. 25 ವರ್ಷಗಳ ಹಿಂದೆಯೇ ರೂ. 35 ಕೋಟಿ ಕಲೆಕ್ಷನ್ ಮಾಡಿ ದಾಖಲೆ ಬರೆದಿತ್ತು ಎಂದು ಹೇಳಿದರು. ನುರಿತ ತಂತ್ರಜ್ಞರನ್ನು ಕರೆಸಿ ಅವರಿಂದ ಈಗಿನ ಆಧುನಿಕ ರೀತಿಯಲ್ಲಿ ಸೌಂಡ್ ಎಫೆಕ್ಟ್ ಅಳವಡಿಸಲಾಗಿದೆ. ಇದಕ್ಕೆಲ್ಲಾ ಬಹಳ ಸಮಯ ಹಾಗೂ ಹಣ ವೆಚ್ಚವಾಗಿದೆ.

ಮುನಿಸ್ವಾಮಿ ಅವರು ಯಾವುದೇ ಕೊರತೆ ಬಾರದ ಹಾಗೆ ಎಲ್ಲಾ ಕೆಲಸಗಳನ್ನು ಮಾಡಿದ್ದಾರೆ ಎಂದು ಸಂಗೀತ ನಿರ್ದೇಶಕ ರಾಜೇಶ್ ರಾಮನಾಥ್ ತಿಳಿಸಿದರು.

ವಿಷ್ಣುವರ್ಧನ್ ಅವರಮೇಲಿನ ಪ್ರೀತಿಯಿಂದ 'ಯಜಮಾನ' ಚಿತ್ರಕ್ಕೆ ಈಗಿನ ತಂತ್ರಜ್ಞಾನವನ್ನು ಅಳವಡಿಸಿ ಮರು ಬಿಡುಗಡೆ ಮಾಡುತ್ತಿದ್ದೇನೆ. 150 ಕ್ಕೂ ಹೆಚ್ಚು ಕಡೆ ಬಿಡುಗಡೆಯಾಗಲಿದೆ. ಎಲ್ಲರೂ ಚಿತ್ರಮಂದಿರಗಳಲ್ಲೇ ಈ ಚಿತ್ರವನ್ನು ವೀಕ್ಷಿಸಿ ಎಂದು ಮುನಿಸ್ವಾಮಿ ಮನವಿ ಮಾಡಿಕೊಂಡರು.




## ರಿಮೇಕ್‌ನಲ್ಲೂ ಇತ್ತು ಒಂದು ವಿಶೇಷತೆ!

ಮೆಹರುನ್ನಿಸಾ ರೆಹಮಾನ್ ನಿರ್ಮಾಣ ಮಾಡಿದ್ದ 'ಯಜಮಾನ' ಸಿನಿಮಾವನ್ನು ಆರ್. ಶೇಷಾದ್ರಿ–ರಾಧಾ ಭಾರತಿ ನಿರ್ದೇಶನ ಮಾಡಿದ್ದರು. 'ಯಜಮಾನ' ಸಿನಿಮಾವು ತಮಿಳಿನಲ್ಲಿ ವಿಜಯ್‌ಕಾಂತ್ ನಟಿಸಿದ್ದ 'ವಾನಾಥೈಪ್ಪೋಳ' ಚಿತ್ರದ ರಿಮೇಕ್.

2000ರ ಜನವರಿ 14ರಂದು ಆ ಚಿತ್ರ ತೆರೆಕಂಡಿತ್ತು. ಆ ವೇಳೆ ಚೆನ್ನೈಗೆ ಹೋಗಿದ್ದ ರೆಹಮಾನ್ ಅವರು ಸಿನಿಮಾ ನೋಡಿ, ಖುಷಿಪಟ್ಟು ತಕ್ಷಣವೇ ರೈಟ್ಸ್ ಖರೀದಿ ಮಾಡಿ ತಂದರು.

ರಿಮೇಕ್ ಹಕ್ಕುಗಳನ್ನು ತಂದು ಹತ್ತೇ ತಿಂಗಳಿಗೆ ಬಹುತಾರಾಗಣದ 'ಯಜಮಾನ' ಸಿದ್ಧಗೊಂಡು ರಿಲೀಸ್ ಆಗಿದ್ದು ವಿಶೇಷ. ಇದೇ 'ವಾನಾಥೈಪ್ಪೋಳ' ಸಿನಿಮಾವನ್ನು ತೆಲುಗಿಗೆ 'ಮಾ ಅನ್ನಯ್ಯ' ಹೆಸರಿನಲ್ಲಿ ನಿರ್ಮಾಣ ಮಾಡಲಾಗಿತ್ತು. 'ಯಜಮಾನ' ಮತ್ತು 'ಮಾ ಅನ್ನಯ್ಯ' ಎರಡೂ ಸಿನಿಮಾಗಳು ಒಂದೇ ದಿನ (2000, ಡಿ.1) ತೆರೆಕಂಡಿದ್ದು ಮತ್ತೊಂದು ವಿಶೇಷ.

# ಫೆಬ್ರವರಿಯಲ್ಲಿ ರಶ್ಮಿಕಾ ಮದುವೆ?



ರಶ್ಮಿಕಾ ಮಂದಣ್ಣ ಮತ್ತು ತೆಲುಗಿನ ಖ್ಯಾತ ನಟ ವಿಜಯ್ ದೇವರಕೊಂಡ ವಿವಾಹ ದಿನಾಂಕ ಫಿಕ್ಸ್ ಆಯ್ತಾ?

ಹೀಗೊಂದು ಸುದ್ದಿ ಹರಿದಾಡುತ್ತಿದ್ದು ರಶ್ಮಿಕಾ ಹಾಗೂ ದೇವರಕೊಂಡ ಅಭಿಮಾನಿಗಳಿಗೆ ಸಿಹಿ ಸುದ್ದಿ ಸಿಗಲಿದೆ. ಕಳೆದ ತಿಂಗಳು ರಹಸ್ಯವಾಗಿ ನಿಶ್ಚಿತಾರ್ಥ ಮಾಡಿಕೊಂಡ ನಂತರ, ರಶ್ಮಿಕಾ ಮಂದಣ್ಣ ಮತ್ತು ವಿಜಯ್ ದೇವರಕೊಂಡ ಫೆಬ್ರವರಿ 2026 ರಲ್ಲಿ ವಿವಾಹವಾಗಲು ಸಿದ್ಧತೆ ನಡೆಸುತ್ತಿದ್ದಾರೆ ಎನ್ನಲಾಗಿದೆ.

ಖಾಸಗಿ ನಿಶ್ಚಿತಾರ್ಥದ ನಂತರ ರಾಯಲ್ ವೆಡ್ಡಿಂಗ್ ಬಗ್ಗೆ ಸುದ್ದಿ ಜೋರಾಗಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ವರದಿಗಳ ಪ್ರಕಾರ, ರಶ್ಮಿಕಾ ಮತ್ತು ವಿಜಯ್ ಅವರ ವಿವಾಹವು ಫೆಬ್ರವರಿ 26, 2026 ರಂದು ರಾಜಸ್ಥಾನದ ಉದಯಪುರದಲ್ಲಿರುವ ಐಷಾರಾಮಿ ಅರಮನೆಯಲ್ಲಿ ನಡೆಯಲಿದೆ ಎನ್ನಲಾಗಿದೆ.

## ಇಂದು ದಿ ಗರ್ಲ್‌ಫ್ರೆಂಡ್ ಚಿತ್ರ ಬಿಡುಗಡೆ

ಇದೀಗ ರಶ್ಮಿಕಾ ಮಂದಣ್ಣ ಅಭಿಮಾನಿಗಳಿಗೆ ಸಿಹಿ ಸುದ್ದಿ ಇದ್ದು, ಅವರ ಅಭಿನಯದ ಬಹು ನಿರೀಕ್ಷಿತ ಚಿತ್ರ 'ದಿ ಗರ್ಲ್ ಫ್ರೆಂಡ್ ಇಂದು (7, ನವೆಂಬರ್) ಬಿಡುಗಡೆಯಾಗಲಿದೆ. ದೀಕ್ಷಿತ್ ಶೆಟ್ಟಿ ಮತ್ತು ರಶ್ಮಿಕಾ ಜೊತೆಯಾಗಿ ನಟಿಸಿರುವ ದಿ ಗರ್ಲ್‌ಫ್ರೆಂಡ್ ಒಂದು ಪ್ಯಾನ್ ಇಂಡಿಯಾ ಸಿನಿಮಾ ಆಗಿದೆ. ದಿ ಗರ್ಲ್‌ಫ್ರೆಂಡ್ ಸಿನಿಮಾವನ್ನ ಗೀತಾ ಆರ್ಟ್ಸ್ ಮತ್ತು ಧೀರಜ್ ಮೊಗಿಲಿನೇನಿ ಎಂಟರ್‌ಟೇನ್‌ಮೆಂಟ್ ಸಂಸ್ಥೆಗಳು ಜಂಟಿಯಾಗಿ ನಿರ್ಮಾಣ ಮಾಡುತ್ತಿವೆ. ತೆಲುಗು ಚಿತ್ರರಂಗದ ಖ್ಯಾತ ನಿರ್ಮಾಪಕ ಅಲ್ಲು ಅರವಿಂದ್ ಅವರು ಈ ಸಿನಿಮಾವನ್ನು ಪ್ರಸ್ತುತಪಡಿಸುತ್ತಿದ್ದಾರೆ.

# ಖ್ಯಾತ ಖಳನಟ ಹರೀಶ್ ರಾಯ್ ಇನ್ನಿಲ್ಲ



- ಓಂ ಸಿನಿಮಾದಲ್ಲಿ ಖಳನಟನಾಗಿ ಮಿಂಚಿದ್ದ ಹರೀಶ್
- ಥೈರಾಯ್ಡ್ ಕ್ಯಾನ್ಸರ್‌ನಿಂದ ಸಾವು
- ಕನ್ನಡ ಹಾಗೂ ತಮಿಳಿನಲ್ಲೂ ನಟನೆ

ಓಂ ಸಿನಿಮಾದಲ್ಲಿ ಖಳನಟನಾಗಿ ಮಿಂಚಿದ್ದ ಹರೀಶ್ ರಾಯ್, ಜೋಡಿ ಹಕ್ಕಿ, ಚಕ್ರವರ್ತಿ, ಕಾಶಿ, ಸಂಜು ವೆಡ್ಸ್ ಗೀತ, ನಲ್ಲ,ತಾಯವ್ವ ಸೇರಿದಂತೆ ಅನೇಕ ಸಿನಿಮಾಗಳಲ್ಲಿ ನಟಿಸಿದ್ದರು. ಇತ್ತೀಚೆಗೆ ಥೈರಾಯ್ಡ್ ಕ್ಯಾನ್ಸರ್‌ನಿಂದ ಬಳಲುತ್ತಿದ್ದರು. ಕೆಜಿಎಫ್ ಚಿತ್ರದ ನಂತರ ಕ್ಯಾನ್ಸರ್ ಕಾಯಿಲೆ ಕಾಣಿಸಿಕೊಂಡಿದ್ದು, ಮೂರ್ನಾಲ್ಕು ವರ್ಷದಿಂದ ಕ್ಯಾನ್ಸರ್‌ಗೆ ಚಿಕಿತ್ಸೆ ಪಡೆಯುತ್ತಿದ್ದರು. ಚಿಕಿತ್ಸೆ ಫಲಿಸದೆ ಇಂದು ಮರಳಿ ಬಾರದ ಲೋಕಕ್ಕೆ ಪಯಣ ಬೆಳೆಸಿದ್ದಾರೆ.

'ಕೆಜಿಎಫ್ ಚಾಚಾ' ಎಂದೇ ಖ್ಯಾತರಾಗಿದ್ದ ಕನ್ನಡದ ಖಳನಟ ಹರೀಶ್ ರಾಯ್ ನಿಧನರಾಗಿದ್ದಾರೆ. ಅವರು ಬಹು ಕಾಲದಿಂದ ಬೆಂಗಳೂರಿನ ಕಿದ್ವಾಯಿ ಹಾಸ್ಪಿಟಲ್‌ನಲ್ಲಿ ಥೈರಾಯಡ್ ಕ್ಯಾನ್ಸರ್ ಕಾಯಿಲೆಗಾಗಿ ಚಿಕಿತ್ಸೆ ಪಡೆಯುತ್ತಿದ್ದರು. ಅವರಿಗೆ 55 ವರ್ಷ ವಯಸ್ಸಾಗಿತ್ತು.

'ಓಂ' ಸಿನಿಮಾದಲ್ಲಿ ಖಳನಟನಾಗಿ ಮಿಂಚಿದ್ದ ಹರೀಶ್ ರಾಯ್, ಜೋಡಿ ಹಕ್ಕಿ, ಚಕ್ರವರ್ತಿ, ಕಾಶಿ, ಸಂಜು ವೆಡ್ಸ್ ಗೀತ, ನಲ್ಲ,ತಾಯವ್ವ ಸೇರಿದಂತೆ ಅನೇಕ ಸಿನಿಮಾಗಳಲ್ಲಿ ನಟಿಸಿದ್ದರು. ಇತ್ತೀಚೆಗೆ ಥೈರಾಯ್ಡ್ ಕ್ಯಾನ್ಸರ್‌ನಿಂದ ಬಳಲುತ್ತಿದ್ದರು. ಕೆಜಿಎಫ್ ಚಿತ್ರದ ನಂತರ ಕ್ಯಾನ್ಸರ್ ಕಾಯಿಲೆ ಕಾಣಿಸಿಕೊಂಡಿದ್ದು, ಮೂರ್ನಾಲ್ಕು ವರ್ಷದಿಂದ ಕ್ಯಾನ್ಸರ್‌ಗೆ ಚಿಕಿತ್ಸೆ ಪಡೆಯುತ್ತಿದ್ದರು. ಚಿಕಿತ್ಸೆ ಫಲಿಸದೆ ಇಂದು ಮರಳಿ ಬಾರದ ಲೋಕಕ್ಕೆ ಪಯಣ ಬೆಳೆಸಿದ್ದಾರೆ.

ಕನ್ನಡ ಹಾಗೂ ತಮಿಳಿನಲ್ಲೂ ನಟನೆ: ತಮಿಳಿನಲ್ಲೂ ಸಾಕಷ್ಟು ಚಿತ್ರಗಳಲ್ಲಿ ನಟಿಸಿದ್ದಾರೆ. ಅಂಡರ್ ವರ್ಲ್ಡ್, ಮೀಂದುಮ್ ಒರು ಕಾದಲ್ ಕಥೈ, ರಾಜ್ ಬಹದ್ದೂರ್, ಸಂಜು ವೆಡ್ಸ್ ಗೀತಾ, ಸ್ವಯಂವರ, ಭೂಗತ, ನನ್ನ ಕನಸಿನ ಹೂವೆ, ನಲ್ಲ, ಜಾಫರ್ ಅಲಿಯಾಸ್ ಮುರ್ಗಿ ಜಾಫರ್, ಜೋಡಿ ಹಕ್ಕಿ, ತಾಯವ್ವ, ಓಂ ಹಾಗೂ ಸ್ಯಾಂಡಲ್‌ವುಡ್‌ನ ಟಾಪ್ ಸಿನಿಮಾ ಕೆಜಿಎಫ್ ಚಾಪ್ಟರ್ 1 ಹಾಗೂ ಕೆಜಿಎಫ್ ಚಾಪ್ಟರ್ 2ರಲ್ಲಿ ಅಭಿನಯಿಸಿದ್ದಾರೆ.

# ರಜನಿಕಾಂತ್ ಸಿನಿಮಾ ಕಮಲ್ ಹಾಸನ್ ನಿರ್ಮಾಣ

ಸೂಪರ್ ಸ್ಟಾರ್ ರಜನಿಕಾಂತ್ ಹಾಗೂ ಉಳಗನಾಯಗನ್ ಕಮಲ್ ಹಾಸನ್ ಸಿನಿಪ್ರೇಮಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ತಲೈವಾ 173ನೇ ಸಿನಿಮಾ ಘೋಷಣೆಯಾಗಿದೆ. ಈ ಚಿತ್ರಕ್ಕೆ ಕಮಲ್ ಹಾಸನ್ ನಿರ್ಮಾಣ ಮಾಡುತ್ತಿದ್ದಾರೆ.

ಕಮಲ್ ಹಾಸನ್ ತಮ್ಮದೇ ನಿರ್ಮಾಣ ಸಂಸ್ಥೆಯಾದ ರಾಜ್ ಕಮಲ್ ಫಿಲ್ಮ್ ಇಂಟರ್‌ನ್ಯಾಷನಲ್ ಕಂಪನಿ ಮೂಲಕ ರಜನಿಕಾಂತ್ ಚಿತ್ರ ನಿರ್ಮಾಣ ಮಾಡಲಿದ್ದಾರೆ.ತಮಿಳು ಚಿತ್ರರಂಗದ ಖ್ಯಾತ ನಿರ್ದೇಶಕ ಹಾಗೂ ಖುಷ್ಬು ಸುಂದರ್ ಅವರ ಪತಿ ಸಿ ಸುಂದರ್ ತಲೈವಾ ಅವರ 173ನೇ ಚಿತ್ರ ನಿರ್ದೇಶನ ಮಾಡಲಿದ್ದಾರೆ. ರಜನಿಗೆ ಅರುಣಾ ಚಲಂ ಎಂಬ ಸೂಪರ್ ಹಿಟ್ ಚಿತ್ರ ಕೊಟ್ಟಿರುವ ಇವರು, ಕಮಲ್ ಹಾಸನ್ ಗೆ ಅನ್ಬೆ ಶಿವಂ ಎಂಬ ಚಿತ್ರ ನಿರ್ದೇಶನ ಮಾಡಿದ್ದಾರೆ.

**ಯಾವಾಗ ಬಿಡುಗಡೆ?:** ಸಿ ಸುಂದರ್ ನಿರ್ದೇಶನ ಮಾಡಲಿರುವ ಕಮಲ್ ನಿರ್ಮಾಣ ಮಾಡಲಿರುವ ರಜನಿ ನಟಿಸಲಿರುವ ಈ ಚಿತ್ರವನ್ನು 2027ರ ಪೊಂಗಲ್ ಹಬ್ಬಕ್ಕೆ ಬಿಡುಗಡೆ ಮಾಡಲು ಚಿತ್ರತಂಡ ಪ್ಲಾನ್ ಮಾಡಿಕೊಂಡಿದೆ.



# ಪ್ರೇಕ್ಷಕರಿಗೆ ಫುಲ್‌ಮೀಲ್ಸ್

- ವೆಡ್ಡಿಂಗ್ ಫೋಟೋಗ್ರಾಫರ್ ಸುತ್ತ ಸುತ್ತುವ ಕಥಾ ಹಂದರ
- ರೊಮ್ಯಾಂಟಿಕ್ ಕಾಮಿಡಿ
- ನವೆಂಬರ್ 21ಕ್ಕೆ ಬಿಡುಗಡೆ
- ಯುಟ್ಯೂಬ್‌ನಲ್ಲಿದೆ ಚಿತ್ರದ ಟ್ರೈಲರ್



ಬಹಳ ದಿನಗಳ ನಂತರದಲ್ಲಿ ಕನ್ನಡದಲ್ಲಿ ಫೋಟೋಗ್ರಾಫರ್ ಜೀವನದ ಕುರಿತಾದ ಕತೆಯೊಂದು ಸಿನೆಮಾವಾಗಿ ತೆರೆಗೆ ಬರಲು ಸಿದ್ದವಾಗಿದೆ.

ಲಿಖಿತ ಶೆಟ್ಟಿ, ಖುಷೀ ರವಿ, ತೇಜಸ್ವಿನಿ ಶರ್ಮ ಮುಖ್ಯ ಭೂಮಿಕೆಯಲ್ಲಿರುವ 'ಫುಲ್ ಮೀಲ್ಸ್' ವೆಡ್ಡಿಂಗ್ ಫೋಟೋಗ್ರಾಫರ್ ಸುತ್ತಸುತ್ತುವ ಕಥಾ ಹಂದರವನ್ನು ಹೊಂದಿರುವ ರೊಮ್ಯಾಂಟಿಕ್ ಕಾಮಿಡಿ ಸಿನೆಮಾ. ಚಿತ್ರದುರ್ಗದ ಪ್ರತಿಭೆ ಎನ್ ವಿನಾಯಕ ಕಥೆ,ಚಿತ್ರಕಥೆ ಬರೆದು ನಿರ್ದೇಶನ ಮಾಡಿರುವ 'ಫುಲ್ ಮೀಲ್ಸ್' ಸಿನೆಮಾ ಇದೇ ತಿಂಗಳು, ನವೆಂಬರ್ 21ಕ್ಕೆ ಬಿಡುಗಡೆಯಾಗಲಿದ್ದು, ಸಿನೆಮಾದ ಟ್ರೈಲರ್ 3ರಂದು, ಡಿ.ಜಿ.ಕೆ. ಯುಟ್ಯೂಬ್ ಚಾನೆಲ್ ನಲ್ಲಿ ಬಿಡುಗಡೆಯಾಗಿದೆ.

ವೆಡ್ಡಿಂಗ್ ಫೋಟೋಗ್ರಾಫರ್ ಒಬ್ಬ ಪ್ರೀ ವೆಡ್ಡಿಂಗ್ ಶೂಟ್ ಗೆಂದು ಹೋದಾಗ, ಆ ಮದುವೆಯ ಹೆಣ್ಣಿಗೆ ಫೋಟೋಗ್ರಾಫರ್ ಮೇಲೆ ಪ್ರೀತಿ ಮೂಡುತ್ತದೆ. ಈ ಹಿನ್ನಲೆಯಲ್ಲಿ ಸೃಷ್ಟಿಯಾಗುವ ಪರಿಸ್ಥಿತಿಗಳೇ ಚಿತ್ರದ ಪ್ರಮುಖ ಕಥಾವಸ್ತು.. ಕಾಮಿಡಿ ಮತ್ತು ಎಮೋಶನ್ ನ ಹದವಾದ ಮಿಶ್ರಣದಂತೆ ಗೋಚರಿಸುತ್ತಿರುವ 'ಫುಲ್ ಮೀಲ್ಸ್' ಪ್ರೇಕ್ಷಕರಿಗೆ ನಿಜವಾದ 'ಫುಲ್ ಮೀಲ್ಸ್' ಆಗಲಿದೆ ಎಂಬ ಭರವಸೆಯನ್ನು ಟ್ರೈಲರ್ ಮೂಡಿಸಿದೆ.

ಈ ಹಿಂದೆ ಸಂಕಷ್ಟಕರ ಗಣಪತಿ, ಪುನೀತ್ ರಾಜ್ ಕುಮಾರ್ ಅವರ ಪಿ. ಆರ್. ಕೆ ಪ್ರೊಡಕ್ಷನ್ ನಲ್ಲಿ ಮೂಡಿಬಂದ 'ಫ್ಯಾಮಿಲಿ ಪ್ಯಾಕ್' ಚಿತ್ರಗಳ ಮೂಲಕ ನಾಯಕ ನಟರಾಗಿ ಸಾಕಷ್ಟು ಜನಪ್ರಿಯತೆ ಗಳಿಸಿದ್ದ ನಾಯಕ ನಟ 'ಲಿಖಿತ್ ಶೆಟ್ಟಿ' ಫೋಟೋಗ್ರಾಫರ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದರೆ, ದಿಯಾ ಖ್ಯಾತಿಯ ಖುಷೀ ರವಿ ಮದುವೆ ಹೆಣ್ಣಿನ ಪಾತ್ರದಲ್ಲಿ ಕಾಣಿಸಿಕೊಂಡಿದ್ದು, ಅವರ ಹಿಂದಿನ ಸಿನೆಮಾಗಳಿಗಿಂತ ವಿಭಿನ್ನ ಮತ್ತು ವಿಶೇಷ ಪಾತ್ರ ಅವರದ್ದಾಗಿದೆ.. ಮೇಕಪ್ ಹುಡುಗಿಯ ಪಾತ್ರದಲ್ಲಿ ತೇಜಸ್ವಿನಿ ಶರ್ಮ ಕಾಣಿಸಿಕೊಂಡಿದ್ದು, ತ್ರಿಕೋನ ಪ್ರೇಮಕತೆಯ ಸ್ಪರ್ಶ ಕೂಡ ಸಿನೆಮಾದಲ್ಲಿದೆ.

ಪ್ರೇಕ್ಷಕರಿಗೆ ಫುಲ್ ಮೀಲ್ಸ್ ಅನ್ನು ಸವಿಯಲು ಧೈರ್ಯವಾಗಿಯೇ ಫುಲ್ ಮೀಲ್ಸ್ ಬರಲು ಬಲವಾದ ಆಮಂತ್ರಣ ಟ್ರೈಲರ್ ಮೂಲಕ ಸಿಕ್ಕಿದೆ. ಈ ಚಿತ್ರದ ಮೂಲಕ ಲಿಖಿತ್ ಶೆಟ್ಟಿ ಮೊದಲ ಬಾರಿಗೆ ಪೂರ್ಣ ಪ್ರಮಾಣದ ನಿರ್ಮಾಪಕರಾಗಿದ್ದಾರೆ.

ರೆಬೆಲ್ ಸ್ಟಾರ್ ಪ್ರಭಾಸ್ ನಟನೆಯ 'ದಿ ರಾಜಾ ಸಾಬ್' ಸಿನಿಮಾ ಟ್ರೇಲರ್ ಮೂಲಕ ಕೇವಲ ಭಾರತ ಮಾತ್ರವಲ್ಲದೆ, ಜಗತ್ತಿನ ಸಿನಿಮಾ ಪ್ರೇಕ್ಷಕರ ಗಮನ ಸೆಳೆದಿದೆ. ಫಿಕ್ಷನ್ ಕಥೆಯ ಬಗೆಗಿನ ಕುತೂಹಲ ಪ್ರಭಾಸ್ ಅಭಿಮಾನಿಗಳಲ್ಲಿಯೂ ಹೆಚ್ಚಾಗಿದೆ. ಈ ನಡುವೆ ಇದೇ ಚಿತ್ರದ ಬಗ್ಗೆ ಒಂದಿಲ್ಲೊಂದು ಗಾಸಿಪ್ ಹರಿದಾಡುತ್ತಿದೆ. ಆ ಗಾಸಿಪ್ ಬಗ್ಗೆ ಚಿತ್ರತಂಡ ಫುಲ್ ಸ್ಟಾಪ್ ಇಟ್ಟಿದೆ.

ಹೌದು, ಎಲ್ಲ ಅಂದುಕೊಂಡಂತೆ ಆಗಿದ್ದರೆ, ಸಂಕ್ರಾಂತಿ ಹಬ್ಬದ ಪ್ರಯುಕ್ತ ಈ ಸಿನಿಮಾ ಬಿಡುಗಡೆ ಆಗಬೇಕಿತ್ತು. ಹೀಗಿರುವಾಗ ಇದೇ ಸಿನಿಮಾ ಬಿಡುಗಡೆಯನ್ನು ಮುಂದೂಡಿದೆ ಎಂಬ ವದಂತಿ ಸೋಷಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿದೆ. ಈ ವದಂತಿಗೆ ಚಿತ್ರತಂಡ ಸ್ಪಷ್ಟನೆ ನೀಡಿದ್ದು, ವದಂತಿಯನ್ನು ತಳ್ಳಿ ಹಾಕಿದೆ.

ಈ ಮೂಲಕ ಜನವರಿ 9ರಂದು ಪ್ಯಾನ್ ಇಂಡಿಯಾ ಮಟ್ಟದಲ್ಲಿ ದಿ ರಾಜಾಸಾಬ್ ಸಿನಿಮಾ ತೆರೆಗೆ ಬರುವುದು ಖಚಿತ ಎಂದು ಚಿತ್ರತಂಡ ಹೇಳಿದೆ. ಯಾವುದೇ ವಿಳಂಬವಿಲ್ಲದೆ, ಅತ್ಯುನ್ನತ ತಾಂತ್ರಿಕ ಗುಣಮಟ್ಟವನ್ನು ಕಾಪಾಡಿಕೊಂಡು, ಚಿತ್ರದ ಪೋಸ್ಟ್ ಪ್ರೊಡಕ್ಷನ್ ಕಾರ್ಯಗಳು ಭರದಿಂದ ಸಾಗುತ್ತಿವೆ ಎಂದಿದೆ.

ಚಿತ್ರವು ಅತ್ಯಂತ ಅದ್ದೂರಿ ರೂಪದಲ್ಲಿ ಪ್ರೇಕ್ಷಕರನ್ನು ತಲುಪುವುದನ್ನು ಖಚಿತಪಡಿಸಿಕೊಳ್ಳಲು ಪ್ರತಿಯೊಂದು ವಿಭಾಗವು ಪರಿಪೂರ್ಣ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುತ್ತಿದೆ. ಈ 'ಲಾರ್ಜರ್ ದ್ಯಾನ್ ಲೈಫ್' ರೀತಿಯಲ್ಲಿ ಸಿನಿಮಾವನ್ನು ನಿರ್ಮಿಸಲಾಗುತ್ತಿದೆ. ಪ್ರಪಂಚದಾದ್ಯಂತದ ಪ್ರೇಕ್ಷಕರಿಗೆ ಒಂದು ಅತ್ಯುತ್ತಮ ಥಿಯೇಟರ್ ಅನುಭವ ನೀಡಲೆಂದೇ ಈ ಸಿನಿಮಾ ನಿರ್ಮಾಣ ಮಾಡಲಾಗಿದೆ ಎಂದಿದೆ. ಪೀಪಲ್ ಮೀಡಿಯಾ ಫ್ಯಾಕ್ಟರಿ ಬ್ಯಾನರ್ ನಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರವನ್ನು ಮಾರುತಿ ನಿರ್ದೇಶನ ಮಾಡಿದ್ದಾರೆ.




Printed, Published and Owned by K.DEEPAK. Printed at THEJASVI OFFSET PRINTER, NO. 726 SHANKARA NAGAR, CHANDAGALU LAYOUT, MANDYA, KARNATAKA-571401
Published At Address: SHARADA, No. 2979/2, D23/2, 3rd floor, 6th Main, V V Mohalla, Mysore-570002. Editor: K.DEEPAK